ಸಂಪುಟ: 04 ಸಂಚಿಕೆ: 51 ಪುಟಗಳು: 08 ಭಾನುವಾರ 05 ಮೇ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನನ್ನ ಹಾಗೆ ನೀನೂ ಬದುಕು ಎಂದು ಸಲಹೆ ನೀಡುವುದೇ ಹೊರತು, ನಾನು ಹೇಗಾದರೂ ಬದುಕುತ್ತೇನೆ. ನೀನು ಹೀಗೇ ಬದುಕು ಎಂದು ಹೇಳುವುದು ಸರಿಯಲ್ಲ

# ಹೆಚ್‌ಡಿ ರೇವಣ್ಣ ಎಸ್‌ಐಟಿ ವಶಕ್ಕೆ



**ನಿರೀಕ್ಷಣಾ ಜಾಮೀನು ಅರ್ಜಿ ವಜಾ**

• **ಉದಯವಾಹಿನಿ, ಬೆಂಗಳೂರು:**

ಅಪಹರಣ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಂಡ ಬೆನ್ನಲ್ಲೇ ಮಾಜಿ ಸಚಿವ ಹೆಚ್‌ಡಿ ರೇವಣ್ಣವರನ್ನು ಎಸ್‌ಐಟಿ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ. ಬೆಂಗಳೂರಿನ ಪದ್ಮನಾಭನಗರದ ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರ ನಿವಾಸಕ್ಕೆ ತೆರಳಿದ ಎಸ್‌ಐಟಿ ಅಧಿಕಾರಿಗಳು ರೇವಣ್ಣ ಅವರನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ. ಮೈಸೂರಿನ ಕೆಆರ್ ನಗರ ಪೊಲೀಸ್ ಠಾಣೆಯಲ್ಲಿ ಅಪಹರಣ ಸಂಬಂಧ ಸಂತ್ರಸ್ತೆಯ ಪುತ್ರ ದೂರು ದಾಖಲಿಸಿದ್ದರು. ದೂರಿನ ಅನ್ವಯ ಎಫ್‌ಐಆರ್ ದಾಖಲಾಗಿತ್ತು. ಕೆಲ ಗಂಟೆಗಳ ಹಿಂದೆಯಷ್ಟೇ ರೇವಣ್ಣನ ಆಪ್ತನ ತೋಟದ ಮನೆಯಲ್ಲಿದ್ದ ಸಂತ್ರಸ್ತೆಯನ್ನು ರಕ್ಷಣೆ ಮಾಡಲಾಗಿದೆ. ಸಂತ್ರಸ್ತೆಯನ್ನು ಬೆಂಗಳೂರಿಗೆ ಕರೆದುಕೊಂಡು ಬರಲಾಗುತ್ತಿದೆ. ರೇವಣ್ಣ ಆಪ್ತ ಸಹಾಯಕನ ತೋಟದ ಮನೆಯಿಂದ ಸಂತ್ರಸ್ತೆಯನ್ನು ರಕ್ಷಣೆ ಮಾಡಲಾಗಿದೆ. ಏಪ್ರಿಲ್ 29ರಂದು ಸಂತ್ರಸ್ತೆಯನ್ನು ಅವರ ಮನೆಯಿಂದ ರೇವಣ್ಣ ಸಂಬಂಧಿ ಸತೀಶ್ ಬಾಬು ಕರೆದೊಯ್ಯಲಾಗಿತ್ತು. ಆಗಿಂದಲೂ ಹುಣಸೂರು ತಾಲ್ಲೂಕಿನ ಕಾಳೇನಹಳ್ಳಿಯಲ್ಲಿರುವ ರೇವಣ್ಣ ಆಪ್ತ ಸಹಾಯಕ ರಾಜಶೇಖರ್ ತೋಟದಲ್ಲಿ ಇರಿಸಲಾಗಿತ್ತು.

**ಜಾಮೀನು ಅರ್ಜಿ ವಜಾ:** ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ನಲ್ಲಿ ಎಚ್‌ಡಿ ರೇವಣ್ಣ ಪರ ವಕೀಲರು ಹಾಜರಾಗಿ, ನಿರೀಕ್ಷಣಾ ಜಾಮೀನಿಗೆ ಅರ್ಜಿ ಸಲ್ಲಿಸಿದ್ರು. ಈಗ ಜಾಮೀನು ನೀಡಿದ್ರೆ ಇಂದೇ ಸಂಜೆ 5.30ಕ್ಕೆ ರೇವಣ್ಣ ವಿಚಾರಣೆಗೆ ಹಾಜರಾಗುತ್ತಾರೆ ಅಂತ ಭರವಸೆ ನೀಡಿದ್ರು. ಆದರೆ ಇದಕ್ಕೆ ಎಸ್‌ಐಟಿ ಎಸ್‌ಪಿಪಿ ಜಗದೀಶ್ ವಿರೋಧ ವ್ಯಕ್ತಪಡಿಸಿದರು. ಎರಡೂ ಕಡೆಯ ವಾದ ಪ್ರತಿವಾದ ಆಲಿಸಿದ ಕೋರ್ಟ್, ಜಾಮೀನು ಅರ್ಜಿ ವಜಾ ಮಾಡಿದೆ.

## ಡಿಕೆಶಿ ಹೇಳಿಕೆ: ಮೇಮೋ ಸಲ್ಲಿಕೆ

ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರ ವಿರುದ್ಧದ ಕಿಡ್ನ್ಯಾಪ್ ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆಯ ವೇಳೆಯಲ್ಲಿ, ಕೋರ್ಟ್‌ಗೆ ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿಕೆ ಬಗ್ಗೆ ಮೆಮೋ ಸಲ್ಲಿಸಲಾಗಿದೆ. ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ರೇವಣ್ಣ ಅವರ ನಿರೀಕ್ಷಣಾ ಜಾಮೀನು ಅರ್ಜಿಯ ವಿಚಾರಣೆ ನಡೆಯುತ್ತಿದೆ. ಈ ವೇಳೆಯಲ್ಲಿ ಹೆಚ್.ಡಿ ರೇವಣ್ಣ ಪರ ಹಿರಿಯ ವಕೀಲ ಮೂರ್ತಿ ಡಿ ನಾಯಕ್ ಅವರು, ಉಪ ಮುಖ್ಯಮಂತ್ರಿ ಹೇಳಿಕೆ ಉಲ್ಲೇಖಿಸಿದರು.

## ಲವ್ ಜಿಹಾದ್ ಪ್ರಕರಣಗಳ ತನಿಖೆಗೆ ವಿಶೇಷ ತಂಡ ರಚಿಸಿ

• **ಉದಯವಾಹಿನಿ, ಹುಬ್ಬಳ್ಳಿ**

ಲವ್‌ಜಿಹಾದ್ ಕೇಸ್ ತನಿಖೆಗೆ ವಿಶೇಷ ತಂಡ ರಚನೆ ಮಾಡಿ ಎಂದು ಮಾಜಿ ಶಾಸಕ ಸಿ.ಟಿ.ರವಿ (ಅ.ಖಿ.ಖಿಚಿತಿ) ಸರ್ಕಾರವನ್ನು ಆಗ್ರಹಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿಯಲ್ಲಿ ನಿನ್ನೆ ಮತ್ತೊಂದು ಲವ್ ಜಿಹಾದ್ ಕೇಸ್ ನಡೆದಿದೆ. ಧಾರವಾಡದಲ್ಲಿ ಒಂದುವರೆ ತಿಂಗಳಲ್ಲಿ 5 ಪ್ರಕರಣಗಳು ಪತ್ತೆಯಾಗಿವೆ. ಅಮಾಯಕ ಹೆಣ್ಣುಮಕ್ಕಳನ್ನು ಟಾರ್ಗೆಟ್ ಮಾಡಲಾಗಿದೆ. ಇನ್ನು ಲವ್ ಜಿಹಾದ್ ಪ್ರಕರಣದ ಬಗ್ಗೆ ಕೇರಳ ಕೋರ್ಟ್ ಬೇಸರ ವ್ಯಕ್ತಪಡಿಸಿದೆ ಎಂದರು. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಲವ್ ಜಿಹಾದ್ ಪ್ರಕರಣದ ತನಿಖೆಗೆ ವಿಶೇಷ ತಂಡವನ್ನು ರಚನೆ ಮಾಡಬೇಕೆಂದ ಅವರು, ನೇಹಾ ಹಿರೇಮಠ ಹತ್ಯೆಯಾದಾಗ ಅದು ವೈಯಕ್ತಿಕ ಹತ್ಯೆ ಎಂದರು. ಈ ಪ್ರಕರಣ ವೈಯಕ್ತಿಕ ಎಂದು ಹೇಳಬಾರದ. ಸರ್ಕಾರ ನೇಹಾ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೂಡಲೇ ತನಿಖೆಗೆ ವಿಶೇಷ ತಂಡವನ್ನು ರಚನೆ ಮಾಡಬೇಕೆಂದರು.

## ಕೇರಳ ಮಾದರಿಯಲ್ಲಿ ರಾಜ್ಯದಲ್ಲಿ ಲವ್ ಜಿಹಾದ್ ಶುರುವಾಗಿದೆ

• **ಉದಯವಾಹಿನಿ, ಹುಬ್ಬಳ್ಳಿ**

ಕೇರಳ ಮಾದರಿಯಲ್ಲೇ ಕರ್ನಾಟಕದಲ್ಲೂ ಲವ್ ಜಿಹಾದ್ ಶುರವಾಗಿ. ರಾಜ್ಯದಲ್ಲಿ ನಿರಾತಂಕವಾಗಿ ಲವ್ ಜಿಹಾದ್ ಪ್ರಕರಣಗಳು ನಡೆಯುತ್ತಿವೆ ಎಂಬುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಗಂಭೀರ ಆರೋಪ ಮಾಡಿದ್ದಾರೆ. ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದಂತ ಅವರು, ರಾಜ್ಯದಲ್ಲಿ ಹಿಂದೂ ಹೆಣ್ಣುಮಕ್ಕಳ ಕುಟುಂಬದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಆರೋಪಿ ಸದ್ದಾಂ ಹುಸೇನ್ ಕಬ್ಬಿಣದ ರಾಡ್ ತೆಗೆದುಕೊಂಡು ಪೊಲೀಸರ ಮೇಲೆಯೇ ಹಲ್ಲೆ ಮಾಡಲು ಮುಂದಾಗಿದ್ದಾನೆ. ಇದು ರಾಜ್ಯ ಸರ್ಕಾರ ತಲೆ ತಗ್ಗಿಸುವಂತ ಕೆಲಸವಾಗಿದೆ ಎಂದು ಹೇಳಿದರು.

## ಬಿಜೆಪಿ ಅಧಿಕಾರಕ್ಕೆ ಬಂದ್ರೆ ಅಲ್ಪಸಂಖ್ಯಾತರನ್ನು ಮುಗಿಸ್ತಾರೆ

• **ಉದಯವಾಹಿನಿ, ಬಾಗಲಕೋಟೆ**

ಈಗ ನಡೆಯುತ್ತಿರುವಂತ ಲೋಕಸಭಾ ಚುನಾವಣೆ ದೇಶ ಬಚಾವ್ ಎಲೆಕ್ಷನ್ ಆಗಿದೆ. ಈಗಾಗಲೇ ಎರಡು ಬಾರಿ ಬಿಜೆಪಿ ಆಡಳಿತ ಮಾಡಿದೆ. ಮೂರನೇ ಬಾರಿ ಬಿಜೆಪಿ ಅಧಿಕಾರಕ್ಕೆ ಬಂದ್ರೆ ಅವರು ಅಲ್ಪ ಸಂಖ್ಯಾತರನ್ನು ಮುಗಿಸುತ್ತಾರೆ ಎಂಬುದಾಗಿ ಸಚಿವ ಜಮೀರ್ ಅಹ್ಮದ್ ಖಾನ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಬಾಗಲಕೋಟೆಯಲ್ಲಿ ಅಲ್ಪ ಸಂಖ್ಯಾತರ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದಂತ ಅವರು, ಬಿಜೆಪಿ ಒಳಗೆ ಒಂದು ರೋಗವಿದೆ. ಅದೇ ಬಿಜೆಪಿ ಅಂದ್ರೆ ಕ್ಯಾನ್ಸರ್ ಇದ್ದಂತೆ. ಫಸ್ಟ್ ಟೈಮ್ ಕ್ಯಾನ್ಸರ್ ಎಂಬುದು ಗೊತ್ತಾದ್ರೆ ಉಳಿಯುತ್ತಾರೆ. ಸೆಕೆಂಡ್ ಸ್ಟೇಜ್ ಇದ್ದಾಗಲೂ ಉಳಿಸಬಹುದು. ಆದ್ರೇ ಮೂರನೇ ಬಾರಿ ಬಂದ್ರೆ ನಿಮ್ಮನ್ನೇ ತಗೊಂಡು ಹೋಗುತ್ತೆ ಎಂದರು.

## ಪ್ರಜ್ವಲ್ ರೇವಣ್ಣ ಅಂತಹ ಸ್ವಭಾವದ ಹುಡುಗ ಅಲ್ಲ

• **ಉದಯವಾಹಿನಿ, ತುಮಕೂರು**

ಪ್ರಜ್ವಲ್ ರೇವಣ್ಣ ನನ್ನ ಆತ್ಮೀಯ ಸ್ನೇಹಿತ. ಅಂತಹ ಸ್ವಭಾವದ ಹುಡುಗ ಅಲ್ಲ. ಪ್ರಜ್ವಲ್ ಅವರ ಮೇಲಿನ ಪ್ರಕರಣ ಸತ್ಯನೋ ಸುಳ್ಳೋ ಎಂಬುದು ತನಿಖೆ ಬಳಿಕ ತಿಳಿಯಲಿದೆ ಎಂದು ಸಂಸದ ಜಿ.ಎಸ್ ಬಸವರಾಜ್ ಹೇಳಿದ್ದಾರೆ. ತುಮಕೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಏನು ಗ್ರಹಚಾರವೋ, ಯಾರ ಕೈವಾಡವೋ ಗೊತ್ತಿಲ್ಲ. ಇತ್ತೀಚೆಗೆ ಈ ರೀತಿ ತೇಜೋವಧೆ ಮಾಡುವುದು ಹೆಚ್ಚಾಗಿದೆ. ಜಾರಕಿಹೊಳಿಗೂ ಕೂಡ ಪಿತೂರಿ ಮಾಡಿ ಮನೆ ಹಾಳು ಮಾಡಿ ಮಾನ ಹರಾಜು ಹಾಕಿದ್ದಾರೆ ಎಂದರು. ಜಾರಕಿಹೋಳಿ ಪ್ರಕರಣದಲ್ಲಿ ವಿರೋಧ ಪಕ್ಷದವರೇ ಪಿತೂರಿ ಮಾಡಿದ್ದರು. ಈಗಲೂ ಕೂಡ ವಿರೋಧ ಪಕ್ಷದವರೇ ಪಿತೂರಿ ಮಾಡಿರಬಹುದು. ಒಂದು ವೇಳೆ ಮಹಿಳೆಯರಿಗೆ ಅನ್ಯಾಯ ಆಗಿದ್ದರೆ ಶಿಕ್ಷೆ ಆಗಲೇಬೇಕು ಎಂದಿದ್ದಾರೆ.

**ಪ್ರಧಾನಿ ನರೇಂದ್ರ ಮೋದಿ ಶನಿವಾರ ಭಯೋತ್ಪಾದನೆಯ ವಿರುದ್ಧ ಭಾರತದ ದೃಢ ನಿಲುವನ್ನ ಪುನರುಚ್ಚರಿಸಿದರು, "ಇದು ಬಾಲಕೋಟ್ ದಾಳಿಯನ್ನ ಉಲ್ಲೇಖಿಸಿ ಸರ್ಜಿಕಲ್ ಮತ್ತು ವೈಮಾನಿಕ ದಾಳಿಯ ಮೂಲಕ ಪ್ರತಿಕ್ರಿಯಿಸುವ ನವ ಭಾರತವಾಗಿದೆ" ಎಂದರು.ಜಾರ್ಖಂಡ್'ನ ಪಲಮುದಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಕಾಂಗ್ರೆಸ್ ವಿರುದ್ಧ ಬಂದೂಕು ತರಬೇತಿ ನೀಡಿದರು ಮತ್ತು ಅವರು ಪಾಕಿಸ್ತಾನಕ್ಕೆ ಹೆದರುತ್ತಿದ್ದಾರೆ ಎಂದು ಆರೋಪಿಸಿದರು.**

# ಇದು ನವ ಭಾರತ ಮನೆಗೆ ನುಗ್ಗಿ ಹೊಡೆಯುತ್ತೇವೆ



- ಸರ್ಜಿಕಲ್ ಮತ್ತು ವೈಮಾನಿಕ ದಾಳಿಯ ನವ ಭಾರತ
- ಭಯೋತ್ಪಾದನೆಯ ವಿರುದ್ಧ ಭಾರತದ ದೃಢ ನಿಲುವು

**ನಿಮ್ಮ ಮತ ನನಗೆ ಶಕ್ತಿ**

ಕಳೆದ 25 ವರ್ಷಗಳಲ್ಲಿ ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಿ ನನ್ನ ಮೇಲೆ ಯಾವುದೇ ಭ್ರಷ್ಟಾಚಾರದ ಕಲೆ ಇಲ್ಲ. ನನಗೆ ಸ್ವಂತ ಮನೆ ಇಲ್ಲ, ಬೈಸಿಕಲ್ ಕೂಡ ಇಲ್ಲ? ಆದರೆ ಭ್ರಷ್ಟ ಜೆಎಂಎಂ ಮತ್ತು ಕಾಂಗ್ರೆಸ್ ನಾಯಕರು ತಮ ಮಕ್ಕಳಿಗಾಗಿ ಅಪಾರ ಪ್ರಮಾಣದ ಸಂಪತ್ತನ್ನು ಸಂಗ್ರಹಿಸಿದ್ದಾರೆ ಎಂದು ಟೀಕಿಸಿದರು.

-ನರೇಂದ್ರ ಮೋದಿ, ಪ್ರಧಾನಮಂತ್ರಿ

## ಕಾಂಗ್ರೆಸ್‌ನ ಭ್ರಷ್ಟ ಸರ್ಕಾರ ತೊಡೆದುಹಾಕಿದ್ದೀರಿ

ಇದು ಹುತಾತ್ಮ ನೀಲಾಂಬರ ಪೀತಾಂಬರ ನಾಡು. 2014ರಲ್ಲಿ ನಿಮ್ಮ ಒಂದು ಮತ ಕೆಲಸ ಮಾಡಿತ್ತು. ಆಗಿನ ನಿಮ್ಮ ಒಂದು ಮತದಿಂದಾಗಿ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯಲು ಸಾಧ್ಯವಾಯಿತು. ನೀವು ಕಾಂಗ್ರೆಸ್‌ನ ಭ್ರಷ್ಟ ಸರ್ಕಾರವನ್ನು ತೊಡೆದುಹಾಕಿದ್ದೀರಿ'' ಎಂದು ನರೇಂದ್ರ ಮೋದಿ ಹೇಳಿದರು.

## ಶೆಹಜಾದಾ ಭಾರತದ ಪ್ರಧಾನಿಯಾಗಬೇಕೆ?



ರಾಹುಲ್ ಗಾಂಧಿ ಅವರನ್ನ ಹೆಸರಿಸದೆ ಉಲ್ಲೇಖಿಸಿದ ಪ್ರಧಾನಿ ಮೋದಿ, ಈಗ ಪಾಕಿಸ್ತಾನದ ನಾಯಕರು ಕಾಂಗ್ರೆಸ್ನ 'ಶೆಹಜಾದಾ' ಭಾರತದ ಪ್ರಧಾನಿಯಾಗಬೇಕು ಎಂದು ಆಶಿಸುತ್ತಿದ್ದಾರೆ ಎಂದು ಹೇಳಿದರು. ಭಯೋದ್ಪಾದಕರ ವಿರುದ್ಧ ತಮ್ಮ ಸರ್ಕಾರದ ಸರ್ಜಿಕಲ್ ವೈಮಾನಿಕ ದಾಳಿಗಳು ಬೆಚ್ಚಿಬಿದ್ದದ್ದ ಪಾಕ್ ನಾಯಕರು ಈಗ ಕಾಂಗ್ರೆಸ್ ಶೆಹಜಾದಾ ಭಾರತದ ಪ್ರಧಾನಿಯಾಗಬೇಕೆಂದು ಪ್ರಾರ್ಥಿಸುತ್ತಿದ್ದಾರೆ ಎಂದು ಪ್ರಧಾನಿ ಮೋದಿ ಗುಡುಗಿದ್ದಾರೆ.

## ರಾಮ ಮಂದಿರ ಕೊಡುಗೆ

ಹಲವಾರು ತಲೆಮಾರುಗಳು, 500 ವರ್ಷಗಳ ಕಾಲ ಹೋರಾಡಿದ ನಂತರ ರಾಮ ಮಂದಿರವನ್ನು ನಿರ್ಮಿಸುವಲ್ಲಿ ಕೊಡುಗೆ ನೀಡಿತು, ಜೊತೆಗೆ ಜಮ್ಮು ಮತ್ತು ಕಾಶ್ಮೀರದಿಂದ 370 ನೇ ವಿಧಿಯನ್ನು ರದ್ದುಗೊಳಿಸಲಾಯಿತು ಎಂದರು. ಮುಸ್ಲಿಮರಿಗೆ ಮೀಸಲಾತಿ ಒದಗಿಸುವ ಸಂವಿಧಾನವನ್ನು ಬದಲಾಯಿಸುವಲ್ಲಿ ಕಾಂಗ್ರೆಸ್‌ನ ಯಾವುದೇ ವಿನ್ಯಾಸ ಯಶಸ್ವಿಯಾಗಲು ತಾನು ಬಿಡುವುದಿಲ್ಲ ಎಂದು ಮೋದಿ ಪ್ರತಿಪಾದಿಸಿದರು.

• **ಉದಯವಾಹಿನಿ, ನವದೆಹಲಿ,**

ಕಳೆದ ಎರಡು ಸಾರ್ವತ್ರಿಕ ಚುನಾವಣೆಗಳಲ್ಲಿ ಬಿಜೆಪಿಯ ವಿಜಯವನ್ನ ಉಲ್ಲೇಖಿಸಿದ ಪ್ರಧಾನಿ, ಈಗ ಸಮಯ ಬದಲಾಗಿದೆ ಮತ್ತು ಪರಿಸ್ಥಿತಿಗಳೂ ಬದಲಾಗಿವೆ ಎಂದು ಹೇಳಿದರು. ಈ ಹಿಂದೆ ಪಾಕಿಸ್ತಾನದ ಭಯದಿಂದ ಕಾಂಗ್ರೆಸ್ ಅಳುತ್ತಿತ್ತು ಮತ್ತು ಈಗ ಪಾಕಿಸ್ತಾನ ಅಳುತ್ತಿದೆ ಎಂದು ಅವರು ಹೇಳಿದರು. ಅವರು ಏಕ ಮತದ ಶಕ್ತಿಯನ್ನ ಒತ್ತಿ ಹೇಳಿದರು. ಸರ್ಜಿಕಲ್ ಮತ್ತು ಬಾಲಕೋಟ್ ದಾಳಿ ಪಾಕಿಸ್ತಾನವನ್ನು ಬೆಚ್ಚಿಬೀಳಿಸಿತು

ತಮ್ಮ ಸರ್ಕಾರದ ಸರ್ಜಿಕಲ್ ಮತ್ತು ವೈಮಾನಿಕ ದಾಳಿಗಳು ಪಾಕಿಸ್ತಾನವನ್ನ ಬೆಚ್ಚಿಬೀಳಿಸಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು. ನಿಮ್ಮ ಒಂದು ಮತ ನನಗೆ ಎಷ್ಟು ಶಕ್ತಿಯನ್ನ ನೀಡಿದೆಯೆಂದರೆ, ನಾನು ಬಂದ ಕೂಡಲೇ 'ಸಾಕು ಸಾಕು' ಎಂದು ಹೇಳಿದೆ.

ಇದು ನವ ಭಾರತ, 'ಘರ್ ಮೇ ಘುಸ್ ಕೆ ಮಾರ್ತಾ ಹೈ'? ಸರ್ಜಿಕಲ್ ಮತ್ತು ಬಾಲಕೋಟ್ ದಾಳಿಗಳು ಪಾಕಿಸ್ತಾನವನ್ನು ಬೆಚ್ಚಿಬೀಳಿಸಿದವು. ಭಯೋತ್ಪಾದಕ ದಾಳಿಯ ನಂತರ, ದುರ್ಬಲ ಕಾಂಗ್ರೆಸ್ ಸರ್ಕಾರವು ಪ್ರಪಂಚದಾದ್ಯಂತ ಅಳುತ್ತಿದ್ದ ಸಮಯವಿತ್ತು. ಈಗ ಪಾಕಿಸ್ತಾನವು ಪ್ರಪಂಚದಾದ್ಯಂತ ಅಳುತ್ತಿದೆ ಮತ್ತು 'ಬಚಾವೋ, ಬಚಾವೋ' ಎಂದು ಕೂಗುತ್ತಿದೆ. ನವ ಭಾರತಕ್ಕೆ ಶತ್ರು ಪ್ರದೇಶವನ್ನು ಹೇಗೆ ಪ್ರವೇಶಿಸುವುದು ಮತ್ತು ದಾಳಿ ಮಾಡುವುದು ಹೇಗೆಂದು ತಿಳಿದಿದೆ ಅದಕ್ಕಾಗಿ ನಿಮ ಒಂದೊಂದು ಮತದ ಪ್ರಾಮುಖ್ಯತೆವಾಗಿದ್ದು ಬಿಜೆಪಿ ಬೆಂಬಲಿಸಿ ಎಂದು ಮತದಾರರ ಬಳಿ ಮನವಿ ಮಾಡಿದರು.

ಜಾರ್ಖಂಡ್, ಒಡಿಶಾ, ಛತ್ತೀಸ್‌ಗಢ, ಬಿಹಾರ, ಆಂಧ್ರಪ್ರದೇಶದಲ್ಲಿ ಪಶುಪತಿಯಿಂದ ತಿರುಪತಿಯವರೆಗೆ ಪ್ರತಿದಿನ ನಕ್ಸಲೀಯರು ಭಯೋತ್ಪಾದನೆಯನ್ನು ಹರಡುತ್ತಿದ್ದರು. ಎಷ್ಟೋ ತಾಯಂದಿರು ತಮ್ಮ ಮಕ್ಕಳನ್ನು ಕಳೆದುಕೊಂಡರು. ಅವರ ಮಕ್ಕಳು ಕೆಟ್ಟ ಸಹವಾಸದಿಂದ ಪ್ರಭಾವಿತರಾಗಿ ಆಯುಧಗಳನ್ನು ಹಿಡಿದು ಕಾಡಿನತ್ತ ಓಡುತ್ತಿದ್ದರು.

ನಿಮ್ಮ ಮತವು ಚಿಕ್ಕ ಮಕ್ಕಳನ್ನು ಉಳಿಸಿದೆ ಮತ್ತು ಅವರ ತಾಯಂದಿರ ಭರವಸೆಯನ್ನು ಈಡೇರಿಸಿದೆ, ಇದು ಒಂದು ಮತದ ಶಕ್ತಿಯಾಗಿದೆ ಎಂದು ಮೋದಿ ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಸಂಜೆ ಜಾರ್ಖಂಡ್‌ನ ರಾಜಧಾನಿ ರಾಂಚಿಯಲ್ಲಿ 1.5 ಕಿಮೀ ಮೆಗಾ ರೋಡ್ ಶೋ ನಡೆಸಿದರು. ಪ್ರಧಾನಿಯವರನ್ನು ಸ್ವಾಗತಿಸಲು ಸಾವಿರಾರು ಜನರು ರಸ್ತೆಯ ಇಕ್ಕೆಲಗಳಲ್ಲಿ ಸಾಲುಗಟ್ಟಿ ನಿಂತಿದ್ದರು. ರಾಂಚಿ ಲೋಕಸಭಾ ಕ್ಷೇತ್ರದ ಭಾರತೀಯ ಜನತಾ ಪಕ್ಷದ (ಬಿಜೆಪಿ) ಅಭ್ಯರ್ಥಿ ಸಂಜಯ್ ಸೇಠ್ ಅವರನ್ನು ಬೆಂಬಲಿಸಿ ಪ್ರಧಾನಿ ಮೋದಿ ರಾಂಚಿಯಲ್ಲಿ ರೋಡ್ ಶೋ ನಡೆಸಿದರು.

1. ಭಾರತ ಮಾತೆಗೆ ಅಗೌರವವನ್ನು ಇನ್ನು ಮುಂದೆ ಸಹಿಸಲಾಗುವುದಿಲ್ಲ
2. ಸರ್ಜಿಕಲ್ ಮತ್ತು ಬಾಲಕೋಟ್ ದಾಳಿ ಪಾಕಿಸ್ತಾನವನ್ನು ಬೆಚ್ಚಿಬೀಳಿಸಿತು
3. ಭಯೋತ್ಪಾದನೆಯ ವಿರುದ್ಧ ಭಾರತದ ದೃಢ ನಿಲುವನ್ನ ಪುನರುಚ್ಚರಿಸಿದರು
4. ಕಳೆದ 25 ವರ್ಷಗಳಲ್ಲಿ ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಿ ನನ್ನ ಮೇಲೆ ಯಾವುದೇ ಭ್ರಷ್ಟಾಚಾರದ ಕಲೆ ಇಲ್ಲ
5. ನವ ಭಾರತಕ್ಕೆ ಶತ್ರು ಪ್ರದೇಶವನ್ನು ಹೇಗೆ ಪ್ರವೇಶಿಸುವುದು

**ಭಾರತದ ದಿಟ್ಟ ನಿಲುವು ಪಾಕಿಸ್ತಾನವನ್ನು ಬೆಚ್ಚಿ ಬೀಳಿಸಿದೆ**

ಪಲಮುದಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಮೋದಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಹೆಸರನ್ನು ತೆಗೆದುಕೊಳ್ಳದೆಯೇ ತರಾಟೆಗೆ ತೆಗೆದುಕೊಂಡರು ಮತ್ತು ನೆರೆಯ ದೇಶವು ಅವರನ್ನು ಪ್ರಧಾನಿಯಾಗಲು ಬಯಸಬಹುದು, ಆದರೆ ಭಾರತದ ಜನತೆ ಸದೃಢ ಪ್ರಧಾನಿ ಹೊಂದಿರುವ ಬಲಿಷ್ಠ ದೇಶವನ್ನು ಬಯಸುತ್ತದೆ ಎಂದು ಹೇಳಿದರು. ಭಾರತ ಮಾತೆಗೆ ಅಗೌರವವನ್ನು ಇನ್ನು ಮುಂದೆ ಸಹಿಸಲಾಗುವುದಿಲ್ಲ ಎಂದು ಗುಡುಗಿದ ಅವರು ಹೊಸ ಭಾರತದ ತನ್ನ ದಿಟ್ಟ ನಿಲುವಿನಿಂದ ಪಾಕಿಸ್ತಾನವನ್ನು ಬೆಚ್ಚಿ ಬೀಳಿಸಿದೆ,ಮತ್ತೆ ಕಾಂಗ್ರೆಸ್ ಆಡಳಿತದಲ್ಲಿ ಭಾರತದ ಮೇಲೆ ಭಯೋತ್ಪಾದಕ ದಾಳಿ ನಡೆಸಲು ಹೊಂಚುಹಾಕುತ್ತಿದ್ದರೆ ಎಂದು ಆರೋಪಿಸಿದರು.

# ಮೇ 7ರ ಬಳಿಕ ಈ ಪ್ರಕರಣ ಎಲ್ಲಿಗೆ ಹೋಗುತ್ತೆ ಎಂದು ಎಲ್ಲರಿಗೂ ಗೊತ್ತು

• **ಉದಯವಾಹಿನಿ, ಕಲಬುರ್ಗಿ**



ಪ್ರಜ್ವಲ್ ರೇವಣ್ಣ ಪ್ರಕರಣದ ಬಗ್ಗೆ ಬಿಜೆಪಿ ನಾಯಕರು ಯಾಕೆ ಮಾತನಾಡಬೇಕು? ಪ್ರಜ್ವಲ್ ನಮ್ಮ ಕುಟುಂಬಕ್ಕೆ ಸೇರಿದವನು ಆತನ ಬಗ್ಗೆ ಬಿಜೆಪಿಯವರು ಯಾಕೆ ಮಾತನಾಡಬೇಕು ಎಂದು ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ಕಲಬುರ್ಗಿಯಲ್ಲಿ ಮಾತನಾಡಿದ ಮಾಜಿ ಸಿಎಂ ಕುಮಾರಸ್ವಾಮಿ, ಪ್ರಜ್ವಲ್ ರೇವಣ್ಣ ವಿಡಿಯೋ ಕೇಸ್ ಬಗ್ಗೆ ಈಗ್ಯಾಕೆ ಬಿಜೆಪಿ ನಾಯಕರು ಮಾತನಾಡುತ್ತಿಲ್ಲ? ಎಂಬ ಡಿಸಿಎಂ ಡಿ.ಕೆ. ಶಿವಕುಮಾರ್ ಪ್ರಶ್ನೆಗೆ ಕಿಡಿಕಾರಿದ ಕುಮಾರಸ್ವಾಮಿ, ಬಿಜೆಪಿಯವರು ಯಾಕೆ ಮಾತನಾಡಬೇಕು? ಪ್ರಜ್ವಲ್ ನಮ್ಮ ಕುಟುಂಬದವನು ಬಿಜೆಪಿಯವರೇಕೆ ಮಾತನಾಡುತ್ತಾರೆ? ಎಂದು ಕೇಳಿದರು. ಮೇ 7ರ ಬಳಿಕ ಈ ಪ್ರಕರಣ ಎಲ್ಲಿಗೆ ಹೋಗುತ್ತದೆ ಎಂಬುದು ಎಲ್ಲಾರಿಗೂ ಗೊತ್ತು. ಕಾಂಗ್ರೆಸ್ ನಾಯಕರು ರಾಜಕೀಯ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ಇದೇ ವೇಳೆ ಹೆಚ್.ಡಿ.ಕೆ ಗಂಟೆಗೊಂದು ಮಾತು ಬದಲಿಸುತ್ತಿದ್ದಾರೆ. ಮಾನಸಿಕ ಸಮತೋಲನ ಕಳೆದುಕೊಂಡಿದ್ದಾರೆ ಎಂಬ ಡಿಸಿಎಂ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಹೌದು ನಾನು ಮಾನಸಿಕ ಸ್ಥಿತಿ ಕಳೆದುಕೊಂಡಿರುವುದಕ್ಕೆ ಹೀಗೆ ಮಾತನಾಡುತ್ತಿರುವುದು ಎಂದು ಕಿಡಿಕಾರಿದರು.

## ಈ ಪ್ರಕರಣಕ್ಕೂ ನನಗೂ ಸಂಬಂಧವಿಲ್ಲ: ನಿಖಿಲ್ ಸ್ಪಷ್ಟನೆ



ಹಾಸನ ಸಂಸದರಿಗೂ ನನಗೂ ಸಂಪರ್ಕವಿಲ್ಲ. ಹಾಸನ ವೀಡಿಯೋ ಪ್ರಕರಣಕ್ಕೂ ನನಗೂ ಸಂಬಂಧವಿಲ್ಲ ಎಂಬುದಾಗಿ ನಿಖಿಲ್ ಕುಮಾರ್ ಸ್ಪಷ್ಟಪಡಿಸಿದ್ದಾರೆ. ಪ್ರಜ್ವಲ್ ರೇವಣ್ಣ ಅಶ್ಲೀಲ ವೀಡಿಯೋ ಪ್ರಕರಣದಿಂದ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರಿಗೆ ಬಹಳ ನೋವಾಗಿದೆ.ಅವರು ಆರೋಗ್ಯದ ಮೇಲೂ ಪರಿಣಾಮ ಬೀರಿದೆ ಎಂದರು. ಇದರಿಂದ ದೇವೇಗೌಡರು ಬಹಳ ನೊಂದಿದ್ದಾರೆ.

# ಪ್ರಜ್ವಲ್ ರೇವಣ್ಣ ಬಂಧನಕ್ಕೆ ಕಠಿಣ ಕ್ರಮ ಕೈಗೊಳ್ಳಿ: ಸಿದ್ದರಾಮಯ್ಯ

● ಪ್ರಕರಣದಲ್ಲಿ ಭಾಗಿಯಾದವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ● ಈ ವಿಚಾರದಲ್ಲಿ ನಿರ್ಲಕ್ಷ ಹಾಗೂ ವಿಳಂಬ ಧೋರಣೆ ಸಹಿಸಲಾಗದು.

• **ಉದಯವಾಹಿನಿ, ಬೆಂಗಳೂರು**



**ಅಧಿಕಾರಿಗಳಿಗೆ ಸಿಎಂ ಖಡಕ್ ಸೂಚನೆ**

ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಅಧಿಕಾರಿಗಳ ಜೊತೆಗೆ ಸಭೆ ನಡೆಸಿದರು. ಸಭೆಯಲ್ಲಿ ಪ್ರಜ್ವಲ್ ರೇವಣ್ಣರನ್ನು ಬಂಧಿಸಲು ಕಠಿಣವಾದಂತಹ ಕ್ರಮ ಕೈಗೊಳ್ಳಿ ಎಂದು ಅಧಿಕಾರಿಗಳಿಗೆ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದರು.

ಈ ಒಂದು ಸಭೆಯಲ್ಲಿ ಪ್ರಜ್ವಲ್ ಪ್ರಕರಣದ ಬಗ್ಗೆ ಮಾಹಿತಿ ಪಡೆದುಕೊಂಡ ಸಿಎಂ ಸಿದ್ದ ರಾಮಯ್ಯ, ಕಾವೇರಿ ನಿವಾಸದಲ್ಲಿ ಸಭೆ ನಡೆಸಿ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದುಕೊಂಡಿರು. ಪ್ರಕರಣದ ಬೆಳವಣಿಗೆ ಬಗ್ಗೆ ಸಿಎಂ ಸಿದ್ದರಾಮಯ್ಯ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದುಕೊಂಡಿದ್ದಾರೆ.

ಪ್ರಮುಖ ಆರೋಪಿಯಾಗಿರುವ ಪ್ರಜ್ವಲ್ ರೇವಣ್ಣ ನಾಪತ್ತೆಯಾಗಿದ್ದು, ಲುಕ್ ಔಟ್ ನೋಟಿಸ್ ಜೊತೆಗೆ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ಮುಖ್ಯಮಂತ್ರಿಗೆ ವಿವರಣೆ ನೀಡಿದರು. ಈ ವೇಳೆ ಸಿದ್ದರಾಮಯ್ಯ ಪ್ರಜ್ವಲ್ ರೇವಣ್ಣ ಬಂಧನಕ್ಕೆ ಕಠಿಣ ಕ್ರಮ ಕೈಗೊಳ್ಳಿ. ಪ್ರಕರಣದಲ್ಲಿ ಭಾಗಿಯಾದವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಿ.ಈ ವಿಚಾರದಲ್ಲಿ ನಿರ್ಲಕ್ಷ ಹಾಗೂ ವಿಳಂಬ ಧೋರಣೆ ಸಹಿಸಲಾಗದು. ಎಂದು ಅಧಿಕಾರಿಗಳಿಗೆ ಸಿಎಂ ಸಿದ್ದ ರಾಮಯ್ಯ ಖಡಕ್ ಸೂಚನೆ ನೀಡಿದ್ದಾರೆ.

ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮಾಹಿತಿ ನೀಡಿದ ಅಧಿಕಾರಿಗಳು, ಸೂಕ್ತ ಕ್ರಮಗಳೊಂದಿಗೆ ಆರೋಪಿಯ ಬಂಧನಕ್ಕೆ ಮುಂದಾಗುತ್ತೇವೆ. ಬ್ಲೂ ಕಾರ್ನರ್ ನೋಟಿಸ್ ಸಾಧ್ಯತೆ ಇದ್ದು ತನಿಖೆಗೆ ವೇಗ ಸಿಗಲಿದೆ.ವಿಮಾನ ನಿಲ್ದಾಣಗಳಿಂದ ಮಾಹಿತಿ ಸಿಕ್ಕ ಕೂಡಲೇ ಪ್ರಜ್ವಲ್ ರೇವಣ್ಣನನ್ನು ಬಂಧಿಸುತ್ತೇವೆ ಎಂದು ಸಭೆಯಲ್ಲಿ ಸಿಎಂ ಸಿದ್ದರಾಮಯ್ಯಗೆ ಎಸ್‌ಐಟಿ ಅಧಿಕಾರಿಗಳು ತಿಳಿಸಿದ್ದಾರೆ ಎಂದು ತಿಳಿದು ಬಂದಿದೆ.

**ಸಂತ್ರಸ್ತರ ರಕ್ಷಣೆಗೆ ನಮ್ಮ ಸರ್ಕಾರ ಬದ್ಧ:** ಸಂಸದ ಪ್ರಜ್ವಲ್ ರೇವಣ್ಣ ಅವರಿಂದ ಅತ್ಯಾಚಾರ, ಅನ್ಯಾಯಕ್ಕೆ ಒಳಗಾದ ಸಂತ್ರಸ್ತರ ರಕ್ಷಣೆಗೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣದಲ್ಲಿ ಸಂತ್ರಸ್ತರ ರಕ್ಷಣೆ ಮಾಡುವಂತೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಪತ್ರಕ್ಕೆ ಪ್ರತಿಕ್ರಿಯೆ ನೀಡಿರುವ ಸಿಎಂ ಸಿದ್ದರಾಮಯ್ಯ, ಸಂಸದ ಪ್ರಜ್ವಲ್ ರೇವಣ್ಣ ಅವರಿಂದ ಅತ್ಯಾಚಾರ, ಅನ್ಯಾಯಕ್ಕೆ ಒಳಗಾದ ಸಂತ್ರಸ್ತರ ರಕ್ಷಣೆಗೆ ನಮ್ಮ ಸರ್ಕಾರ ಬದ್ಧವಾಗಿದೆ.

ನಿಷ್ಪಕ್ಷಪಾತ ತನಿಖೆ ನಡೆಸಿ ಪ್ರಕರಣದಲ್ಲಿ ಎಷ್ಟೇ ಪ್ರಭಾವಿಗಳು ಷಾಮೀಲಾಗಿದ್ದರೂ ಅವರನ್ನು ಕಾನೂನಿನ ಕೈಗಳಿಗೆ ಒಪ್ಪಿಸಲಾಗುವುದು ಎಂದು ತಿಳಿಸಿದ್ದಾರೆ.

ನೊಂದವರ ಕಣ್ಣೀರು ಒರೆಸುವ ಜೊತೆಗೆ ಅವರ ನ್ಯಾಯದ ಹೋರಾಟದಲ್ಲಿ ನಮ್ಮ ಸರ್ಕಾರ ಜೊತೆ ನಿಲ್ಲಲಿದೆ ಎಂಬ ವಾಗ್ದಾನವನ್ನು ರಾಹುಲ್ ಗಾಂಧಿ ಅವರು ಸೇರಿದಂತೆ ನಾಡಿನ ಪ್ರತಿಯೊಬ್ಬರಿಗೂ ನೀಡುತ್ತಿದ್ದೇನೆ ಎಂದು ಹೇಳಿದ್ದಾರೆ.

## ವಿನಯ್ ಕುಮಾರ್‌ಗೆ ನನ್ನ ಬೆಂಬಲವಿಲ್ಲ, ಈತನನ್ನು ಸೋಲಿಸಿ

ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿರುವ ವಿನಯ್ ಕುಮಾರ್ ಗೆ ನನ್ನ ಬೆಂಬಲ ಇಲ್ಲ. ಈತ ಕಾಂಗ್ರೆಸ್ಸಿಗೆ ಬಂದು ಕೇವಲ ಆರು ತಿಂಗಳಾಗಿದೆ. ಶಾಮನೂರು ಶಿವಶಂಕರಪ್ಪ ಮತ್ತು ಮಲ್ಲಿಕಾರ್ಜುನ್ ಕುಟುಂಬ ಆರಂಭದಿಂದಲೂ ಹತ್ತಾರು ವರ್ಷಗಳಿಂದ ಕಾಂಗ್ರೆಸ್ಸಿನಲ್ಲಿದೆ. ಪ್ರಭಾ ಮಲ್ಲಿಕಾರ್ಜುನ್ ಅತ್ಯಂತ ಉತ್ತಮ ಅಭ್ಯರ್ಥಿ. ಇವರನ್ನು ಗೆಲ್ಲಿಸಿದರೆ ನಾನೇ ಗೆದ್ದ ಹಾಗೆ. ಪಕ್ಷೇತರನಾಗಿ ಸ್ಪರ್ಧಿಸುವುದಿಲ್ಲ ಎಂದು ನನ್ನ ಮತ್ತು ಕನಕಗುರುಪೀಠದ ಶ್ರೀ ನಿರಂಜನಾನಂದಪುರಿ ಶ್ರೀಗಳ ಎದುರು ಒಪ್ಪಿಕೊಂಡು ಹೋಗಿದ್ದ ಈತ ಆಮೇಲೆ ಉಲ್ಟಾ ಹೊಡೆದು ನಮ್ಮಿಬ್ಬರಿಗೂ ಮಾತು ತಪ್ಪಿದ್ದಾನೆ. ವಿನಯ್ ಗೆ ಬಿಜೆಪಿ ಕುಮ್ಮಕ್ಕು ಕೊಡುತ್ತಿದೆ. ಏಕೆಂದರೆ ಈತನ ಸ್ಪರ್ಧೆಯಿಂದ ಲಾಭ ಆಗುವುದು ಬಿಜೆಪಿಗೆ. ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಮಲ್ಲಿಕಾರ್ಜುನ್ ಗೆದ್ದರೆ ಮುಖ್ಯಮಂತ್ರಿಯಾಗಿ ನನಗಿನ್ನೂ ಹೆಚ್ಚಿನ ಶಕ್ತಿ ಬರುತ್ತದೆ ಎಂದು ವಿನಯ್ ಕುಮಾರ್ ನನ್ನು ಸೋಲಿಸಲು ಸಿಎಂ ಸಿದ್ದರಾಮಯ್ಯ ಕರೆ ನೀಡಿದರು

**ಈ ದಿನದ ದರ** ಪೆಟ್ರೋಲ್: 99.84 ₹/L ಡೀಸೆಲ್ : 85.93 ₹/L ಬಂಗಾರ: ₹7,183/Gram(24ct) ₹6,585/Gram(22ct) ಬೆಳ್ಳಿ: ₹82.60/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ನುತ ಸುಕೃತವಂತೆ

ನಿಜಗುಣರ ಕೈವಲ್ಯಪದ್ಧತಿಯ ಜ್ಞಾನಪ್ರತಿಪಾದನೂಸ್ಥಲದ ಮಾತು. ಪುಣ್ಯಶಾಲಿ ಎನ್ನುವೆವು, ಆತ ಪುಣ್ಯಮಯ ಕಾರ್ಯಗಳನ್ನು ಮಾಡದವನಾದರೆ ಅವನೆಂಥ ಪುಣ್ಯಶಾಲಿ ಹಣ ಖರ್ಚು ಮಾಡಿ ಗೆದ್ದು ಹಣ ಮಾಡುವವ ಜನಸೇವಕ ಹೇಗೆ ಹಣ ಹೆಂಡ ಅದನಿದನು ಪಡೆದು ಓಟು ಹಾಕುವುದು ಮತದಾನ ಹೇಗೆ ನಾಯಕನಿಂದ ಸೇವೆಯ ನಿರೀಕ್ಷೆ ಏಕೆ? ವೇದ ಉಪನಿಷತ್ತುಗಳ ಅನುಯಾಯಿಯಾಗಿ ಗುರುವಿನಲಿ ಶ್ರದ್ಧೆ ಭಕ್ತಿ ಗೌರವ ತೋರದಿದ್ದರೆ, ಗುರು ತೋರಿದ ದಾರಿಯಲ್ಲಿ ನಡೆಯದಿದ್ದರೆ ಇನ್ನೇನು ಪ್ರಯೋಜನ?

## ನಾಳೆ ವರೆಗೆ ಮತದಾರರ ನೋಂದಣಿಗಾಗಿ ಅರ್ಜಿ ಸಲ್ಲಿಕೆಗೆ ಅವಕಾಶ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಖಾಲಿಯಾಗಲಿರುವಂತ ಮೂರು ಶಿಕ್ಷಕರ ಹಾಗೂ ಮೂರು ಪದವೀಧರ ವಿಧಾನಪರಿಷತ್ ಕ್ಷೇತ್ರಗಳಿಗೆ ಚುನಾವಣೆ ಘೋಷಣೆ ಮಾಡಲಾಗಿದೆ. ಈ ಚುನಾವಣೆಯಲ್ಲಿ ಮತದಾನಕ್ಕಾಗಿ ಅರ್ಹ ಶಿಕ್ಷಕರು, ಪದವೀಧರರು ನೋಂದಾಯಿಸಿಕೊಳ್ಳೋದಕ್ಕೆ ಮೇ.6ರವರೆಗೆ ಅವಕಾಶ ನೀಡಲಾಗಿದೆ.

ಈ ಕುರಿತಂತೆ ರಾಜ್ಯ ಚುನಾವಣಾ ಆಯೋಗ ಮಾಹಿತಿ ನೀಡಿದ್ದು, ಕರ್ನಾಟಕ ವಿಧಾನ ಪರಿಷತ್ತಿನ ದ್ವೈವಾರ್ಷಿಕ ಚುನಾವಣೆ-2024ಕ್ಕೆ ಶಿಕ್ಷಕ, ಪದವೀಧರ ಕ್ಷೇತ್ರಗಳಲ್ಲಿ ಮತದಾರರಾಗಿ ನೋಂದಾಯಿಸಿಕೊಳ್ಳಲು ಮೇ.6, 2024 ಕೊನೆಯ ದಿನವಾಗಿದೆ ಎಂದಿದೆ. ಅರ್ಹ ಶಿಕ್ಷಕರು, ಪದವೀಧರರು 2 ಸೆಟ್ ಅಗತ್ಯ ದಾಖಲೆಗಳನ್ನು ಸಮೀಪದ ಚುನಾವಣಾ ನೋಂದಣಾಧಿಕಾರಿಗಳಿಗೆ ಮೇ.6ರ ಒಳಗಾಗಿ ಸಲ್ಲಿಸುವಂತೆ ತಿಳಿಸಿದೆ. ಆದ್ದರಿಂದ ಎಲ್ಲಾ ಶಿಕ್ಷಕರು, ಪದವೀಧರರ ಗಮನಿಸಬೇಕಾದದ್ದು, ಮತದಾರರ ನೋಂದಣಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವು ಮೇ 6 ಆಗಿದೆ. ಕೂಡಲೇ ನಿಮ್ಮ ಹೆಸರನ್ನು ನೋಂದಾಯಿಸಿಕೊಳ್ಳಿ.

## 2,500 ಹುದ್ದೆಗಳಿಗೆ ಅರ್ಜಿ ಆಹ್ವಾನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ (ಬಿಎಂಟಿಸಿ) ಖಾಲಿ ಇರುವ ಒಟ್ಟು 2,500 ಬಸ್ ಕಂಡಕ್ಟರ್ ಹುದ್ದೆಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕನಿಷ್ಠ ದ್ವಿತೀಯ ಪಿಯುಸಿ ಉತ್ತೀರ್ಣರಾಗಿದ್ದು, 18 ವರ್ಷ ಪೂರೈಸಿರಬೇಕು. SC/ST, ಪ್ರವರ್ಗ-1 ಅಭ್ಯರ್ಥಿಗಳಿಗೆ 5, OBC 3 ವರ್ಷ ವಯೋ ಸಡಿಲಿಕೆ ನೀಡಲಾಗಿದೆ. ಆಯ್ಕೆಯಾಗುವ ಅಭ್ಯರ್ಥಿಗಳಿಗೆ 25, 300 ವರೆಗೆ ಮಾಸಿಕ ವೇತನ ಸಿಗಲಿದೆ. ಅರ್ಜಿ ಸಲ್ಲಿಸಲು ಮೇ.18 ಕೊನೆಯ ದಿನವಾಗಿದೆ. ಅರ್ಜಿ ಶುಲ್ಕ ಇನ್ನಿತರೆ ಮಾಹಿತಿಗಾಗಿ https://www.karnatakacareers.in/organization/bmtc/ ವೆಬ್‌ಸೈಟ್‌ಗೆ ಭೇಟಿ ನೀಡಿ.

## ಸಾಂಸ್ಕೃತಿಕ ಕಾರ್ಯಕ್ರಮಗಳ ಸೇವೆಗೆ ಅವಕಾಶ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ತ್ಯಾಗರಾಜನಗರದಲ್ಲಿರುವ ಪುರಾತನ ಹಾಗೂ ವಿಶೇಷ ಸಾನ್ನಿಧ್ಯವುಳ್ಳ ಶ್ರೀ ಅಭಯ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದಲ್ಲಿ ಪ್ರತಿ ಶುಕ್ರವಾರ ಮತ್ತು ಪ್ರತಿ ತಿಂಗಳ ಸ್ವಾತಿ ನಕ್ಷತ್ರ ದಿನದಂದು ಸಂಜೆ 6-30 ರಿಂದ 7-45ರ ವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳಾದ ದಾಸವಾಣಿ, ಭರತನಾಟ್ಯ, ಹರಿಕಥೆ ಮತ್ತು ವಾದ್ಯ ಸಂಗೀತ ಇವುಗಳ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಆಸಕ್ತಿಯುಳ್ಳ ಕಲಾವಿದರುಗಳು ಈ ಕೆಳಕಂಡ ಮೊ ಬೈಲ್ ಸಂಖ್ಯೆಗಳನ್ನು 9980400535 / 7019475877 ಸಂಪರ್ಕಿಸಬಹುದು.

## ಅಶ್ಲೀಲ ವಿಡಿಯೋ ಕೇಸ್: ಹೆಚ್ ಡಿ ರೇವಣ್ಣ ಪತ್ನಿಯ ಸಂಬಂಧಿ ಅರೆಸ್ಟ್..!

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಹೆಚ್‌ಡಿ ರೇವಣ್ಣ ಅವರಿಂದ ಲೈಂಗಿಕ ದೌರ್ಜನ್ಯಕ್ಕೆ ಒಳಗಾಗಿದ್ದಳು ಎನ್ನಲಾದ ಕೆಆರ್ ನಗರದ ಸಂತ್ರಸ್ತೆ ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಭವಾನಿ ರೇವಣ್ಣ ಅವರ ಸಂಬಂಧಿಯೊಬ್ಬರನ್ನು ಅಧಿಕಾರಿಗಳು ಬಂಧಿಸಿದ್ದಾರೆ. ಇದು ಪ್ರಜ್ವಲ್ ರೇವಣ್ಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮೊದಲ ಬಂಧನವಾಗಿದೆ.

ನಾಪತ್ತೆಯಾದ ಸಂತ್ರಸ್ತೆಯ ಪುತ್ರ ನಿನ್ನೆ ಕೆಆರ್ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಹೆಚ್‌ಡಿ ರೇವಣ್ಣ ವಿರುದ್ಧ ಸೆಕ್ಷನ್ 364/A365 ಹಾಗೂ 34 ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ರೇವಣ್ಣರನ್ನು ಆರೋಪಿ ಸಂಖ್ಯೆ 1 ಎಂದೂ ಸತೀಶ್ ಬಾಬು ಎಂಬವರನ್ನು ಆರೋಪಿ ಸಂಖ್ಯೆ 2 ಎಂದೂ ನಮೂದಿಸಲಾಗಿದೆ. ಸಂತ್ರಸ್ತೆಯ ಪತ್ತೆಗೆ ವಿಶೇಷ ತನಿಖಾ ದಳ ಶುಕ್ರವಾರ 40ಕ್ಕೂ ಹೆಚ್ಚು ಸ್ಥಳಗಳಲ್ಲಿ ದಾಳಿ ನಡೆಸಿತ್ತು. ಈ ಸ್ಥಳದಲ್ಲಿ ಮಹಿಳೆ ಇದ್ದಾಳೆಯೇ ಅಂತ ಶೋಧ ನಡೆಸಿತ್ತು. ಎಸ್‌ಐಟಿ ತಂಡಗಳು ಗುರುವಾರ ತಡರಾತ್ರಿಯಿಂದಲೇ ಮೈಸೂರು, ಹಾಸನ, ಮಂಡ್ಯ ಜಿಲ್ಲೆಗಳು ಮತ್ತು ಬೆಂಗಳೂರು ನಗರ ಸೇರಿದಂತೆ ವಿವಿಧಡೆ ಪರಿಶೀಲನೆ ನಡೆಸಿದ್ದವು. ಇನ್ನು ಪ್ರಕರಣ ಸಂಬಂಧ ಇಂದು ವಿಚಾರಣೆಗೆ ಹಾಜರಾಗುವಂತೆ ಭವಾನಿ ರೇವಣ್ಣ ಅವರಿಗೆ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ

ನಿರೀಕ್ಷಣಾ ಜಾಮೀನು ಅರ್ಜಿ ವಜಾ ಆದರೆ ರೇವಣ್ಣಗೂ ಬಂಧನ ಭೀತಿ ಎದುರಾಗಲಿದೆ. ಹೀಗಾಗಿ ಸದ್ಯ ಬೆಂಗಳೂರಿನ ಅಜ್ಞಾತ ಸ್ಥಳದಲ್ಲಿದ್ದು ರೇವಣ್ಣ ವಕೀಲರ ಮೂಲಕ ಮಾಹಿತಿ ಪಡೆಯುತ್ತಿದ್ದಾರೆ. ನಿರೀಕ್ಷಣಾ ಜಾಮೀನು ಅರ್ಜಿಯ ತೀರ್ಪು ನೋಡಿಕೊಂಡು ಮುಂದಿನ ತೀರ್ಮಾನ ಕೈಗೊಳ್ಳಲಿದ್ದಾರೆ

## ವಿದೇಶದಲ್ಲಿರುವ ಪ್ರಜ್ವಲ್ ರೇವಣ್ಣನನ್ನು ಅರೆಸ್ಟ್ ಮಾಡುವುದು ಕಷ್ಟವೇನಲ್ಲ

• ಉದಯವಾಹಿನಿ, ಬೆಂಗಳೂರು

ಖಾಸಗಿ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಜ್ವಲ್ ರೇವಣ್ಣ ವಿದೇಶದಲ್ಲಿರುವುದರಿಂದ ಅವರನ್ನು ಬಂಧಿಸಿ ಕರೆತರಲು ಕೇಂದ್ರ ವಿದೇಶಾಂಗ ಸಚಿವಾಲಯ ಮಧ್ಯಪ್ರವೇಶ ಮಾಡಬೇಕು ಸಿಎಂ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿಯವರಿಗೆ ಪತ್ರ ಬರೆದಿದ್ದಾರೆ. ಇದಕ್ಕೆ ಮಾಜಿ ಐಪಿಎಸ್ ಅಧಿಕಾರಿ, ತಮಿಳನಾಡು ಬಿಜೆಪಿ ಘಟಕದ ರಾಜ್ಯಾಧ್ಯಕ್ಷ ಅಣ್ಣಮಲೈ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಾರ್ಯವಿಧಾನದ ಪ್ರಕಾರ, ಎಸ್‌ಐಟಿ ಅಥವಾ ಸಿಐಡಿ ಸಿಬಿಐಗೆ ನೋಡಲ್ ಏಜೆನ್ಸಿಯಾಗಿ ಕಾರ್ಯನಿರ್ವಹಿಸುತ್ತದೆ. ವಿದೇಶಕ್ಕೆ ತಲೆಮರೆಸಿಕೊಂಡಿರುವ ಆರೋಪಿಗಳನ್ನು ಬಂಧಿಸಲು ರೆಡ್ ಕಾರ್ನರ್ ನೋಟಿಸ್ ಜಾರಿಗೊಳಿಸಲು ಅಥವಾ ಇಂಟರ್‌ಪೋಲ್ ನೆರವು ಪಡೆಯಲು ರಾಜ್ಯ ಸರ್ಕಾರ ಸಿಬಿಐ ನಿರ್ದೇಶಕರಿಗೆ ಪತ್ರ ಬರೆಯಬೇಕು. ಬಳಿಕ ರೆಡ್ ಕಾರ್ನರ್ ಜಾರಿಗೊಳಿಸಲಾಗುತ್ತದೆ. ಆಗ ಆರೋಪಿ ಯಾವುದೇ ವಿಮಾನ ನಿಲ್ದಾಣಕ್ಕೆ ಬಂದರೆ ಕೂಡಲೆ ಅವನನ್ನು ಅಲ್ಲಿನ ಪೊಲೀಸರು ಬಂಧಿಸುತ್ತಾರೆ. ಬಳಿಕ ಆರೋಪಿ ಬೇಕಾಗಿರುವ ಠಾಣೆಗೆ ಮಾಹಿತಿ ನೀಡುತ್ತಾರೆ. ನಾನು ಕರ್ನಾಟಕದ ಸೇವೆ ಸಲ್ಲಿಸುತ್ತಿರುವಾಗ ಭೂಗತ ಪಾತಕಿ ಬನ್ನಂಜೆ ರಾಜನನ್ನು ಮೊರಾಕೊದಿಂದ ಪ್ರಧಾನಿಗೆ ಯಾವುದೇ ಪತ್ರ ಬರೆಯದೆ ಬಂಧಿಸಿ ಕರೆತಂದೆವು ಎಂದರು.

ದೇಶದ ಪೊಲೀಸ್ ಇತಿಹಾಸದಲ್ಲೇ ಇಂಟರ್‌ಪೋಲ್ ಮೂಲಕ ಆರೋಪಿಯನ್ನು ಬಂಧಿಸಿ ಕರೆತಂದಿದ್ದು ಕರ್ನಾಟಕ ಪೊಲೀಸ್. 2015ರಲ್ಲಿ ಡಿಜಿಪಿ ಪ್ರತಾಪ್ ರೆಡ್ಡಿ ಅವರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿತ್ತು. ಇದು ಬಿಟ್ಟು ಸಿಎಂ ಸಿದ್ದರಾಮಯ್ಯ ಅವರು ಪ್ರಧಾನಿ ಮೋದಿ ಅವರಿಗೆ ಪತ್ರ ಬರೆಯುತ್ತಾರೆ.

ಇದು ಬರೀ ರಾಜಕೀಯ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ಮಾಡಿದರು.

# ಅವರ ಬಗ್ಗೆ ಕನ್ನಡಿಗರಿಗೆ ಪರಿಚಯಿಸುವ ಅಗತ್ಯವಿಲ್ಲ

### ಪ್ರೇಮಾ ಜತೆಗಿರುವ ಈ ವ್ಯಕ್ತಿ ಯಾರು? ಸ್ಯಾಂಡಲ್‌ವುಡ್‌ನಲ್ಲಿ ನಡೆಯುತ್ತಿದೆ ಹೀಗೊಂದು ಬಿಸಿ ಬಿಸಿ ಚರ್ಚೆ

• ಉದಯವಾಹಿನಿ, ಬೆಂಗಳೂರು

ನಟಿ ಪ್ರೇಮಾ ಅವರ ಬಗ್ಗೆ ಕನ್ನಡಿಗರಿಗೆ ಪರಿಚಯಿಸುವ ಅಗತ್ಯವಿಲ್ಲ. ಸೂಪರ್ ಡೂಪರ್ ಹಿಟ್ ಸಿನಿಮಾಗಳ ಮೂಲಕ ಕನ್ನಡ ಸಿನಿ ರಸಿಕರನ್ನು ರಂಜಿಸಿದ್ದಾರೆ. ಒಂದು ಕಾಲದಲ್ಲಿ ಕನ್ನಡ ಚಿತ್ರರಂಗದಲ್ಲಿ ಮಾತ್ರವಲ್ಲದೆ, ದಕ್ಷಿಣ ಭಾರತದಲ್ಲಿ ಸ್ಟಾರ್ ಹೀರೋಯಿನ್ ಆಗಿ ಗುರುತಿಸಿಕೊಂಡಿದ್ದರು. 1995ರಲ್ಲಿ ತೆರೆಕಂಡ ಸವ್ಯಸಾಚಿ ಸಿನಿಮಾದೊಂದಿಗೆ ಪ್ರೇಮಾ ಅವರ ಪ್ರಯಾಣ ಪ್ರಾರಂಭವಾಯಿತು.

ಮೊದಲ ಸಿನಿಮಾ ಹೇಳಿಕೊಳ್ಳುವಷ್ಟು ಹಿಟ್ ಆಗದಿದ್ದರೂ ಎರಡನೇ ಚಿತ್ರ 'ಓಂ' ಮೂಲಕ ದೊಡ್ಡ ಗೆಲುವು ಕಂಡರು. ಕನ್ನಡದ ಎಲ್ಲಾ ಸ್ಟಾರ್ ಹೀರೋಗಳ ಜೊತೆ ಜೋಡಿಯಾಗಿ ಟಾಪ್ ಹೀರೋಯಿನ್ ಆಗಿ ಹೊರಹೊಮ್ಮಿದ್ದರು. ಕನ್ನಡ ಮಾತ್ರವಲ್ಲದೆ, ತೆಲುಗಿನಲ್ಲಿ ಧರ್ಮಚಕ್ರಂ, ದೇವಿ, ಓಂಕಾರಂ, ಮಾ ಆವಿದ ಕಲೆಕ್ಟರ್ ಮತ್ತು ಪೊಲೀಸ್ ಪವರ್ ಸೇರಿದಂತೆ ಹಲವು ಚಿತ್ರಗಳನ್ನು ಮಾಡಿದ್ದಾರೆ. ಪ್ರೇಮಾ ಅವರು ಸಿನಿಮಾ ಮಾತ್ರವಲ್ಲದೆ ವೈಯಕ್ತಿಕ



ಉದಯವಾಹಿನಿ ಚಿತ್ರ

ಜೀವನದಲ್ಲೂ ಭಾರಿ ಸುದ್ದಿಯಾದರು. ವೃತ್ತಿ ಜೀವನದ ಉತ್ತುಂಗದಲ್ಲಿರುವಾಗಲೇ ಪ್ರೇಮಾ ಅವರು 2006ರಲ್ಲಿ ಉದ್ಯಮಿ ಜೀವನ್ ಅಪ್ಪಚ್ಚು ಅವರನ್ನು ವಿವಾಹವಾದರು. ಸಿನಿಮಾಗೆ ಗುಡ್ ಬೈ ಹೇಳಿ ಒಳ್ಳೆಯ ಸಾಂಸಾರಿಕ ಜೀವನ ನಡೆಸೋಣ ಅಂತ ಬಯಸಿದ್ದ ಪ್ರೇಮಾಗೆ ತಮ್ಮ ವೈವಾಹಿಕ ಜೀವನದಲ್ಲಿ ಬಿರುಗಾಳಿ ಏಳುತ್ತದೆ ಅಂತ ಎಂದಿಗೂ ಊಹಿಸಿರಲಿಲ್ಲ. ಗಂಡ-ಹೆಂಡತಿ ನಡುವಿನ ಭಿನ್ನಾಭಿಪ್ರಾಯದಿಂದ ಪ್ರೇಮಾ ಅವರು 2016ರಲ್ಲಿ ಜೀವನ್ ಅಪ್ಪಚ್ಚು ಅವರಿಂದ ವಿಚ್ಛೇದನ ಪಡೆದರು.

ಡಿವೋರ್ಸ್ ಆದ ಬಳಿಕ ಅದೇ ಚಿಂತೆಯಲ್ಲಿ ಮುಳುಗಿದ ಪ್ರೇಮಾ ಅನಾರೋಗ್ಯಕ್ಕಿಡಾದರು.

**ನಮಗಿರುವುದು ಒಂದೇ ಜೀವನ**

**ನನ್ನ ಜೀವನ ಹೇಗೆ ಇರಬೇಕೆಂದು ನನಗೆ ತಿಳಿದಿದೆ ನನಗೆ ಕ್ಯಾನ್ಸರ್ ಇದೆ ಎಂಬ ಸುದ್ದಿಯನ್ನು ಈ ಹಿಂದೆ ಹಬ್ಬಿಸಿದ್ದರು. ಆದರೆ, ಅಂಥದ್ದೇನೂ ಇರಲಿಲ್ಲ. ನಾನು ಖಿನ್ನತೆಯಿಂದ ಸ್ವಲ್ಪ ಕಾಲ ಆಸ್ಟ್ರೇಲಿಯಾದಲ್ಲಿದ್ದೆ. ಆ ವೇಳೆ ನನಗೆ ಕ್ಯಾನ್ಸರ್ ಇದೆ ಎಂದು ವದಂತಿ ಹಬ್ಬಿಸಿದರು. ನಮಗಿರುವುದು ಒಂದೇ ಜೀವನ, ನೆಮ್ಮದಿಯಿಂದ ಬದುಕಬೇಕು. ಜೀವನದಲ್ಲಿ ನಿನಗೆ ಇಷ್ಟವಾದದ್ದನ್ನು ಮಾಡು ಎಂದು ನಮ್ಮ ತಾಯಿ ಕೂಡ ಹೇಳಿದ್ದಾರೆ ಎಂದು ಪ್ರೇಮಾ ಅವರು ಹಿಂದೊಮ್ಮೆ ಸಂದರ್ಶನದಲ್ಲಿ ಹೇಳಿದ್ದರು.**

ಎಲ್ಲಿಯೂ ಕಾಣಿಸಿಕೊಳ್ಳದೆ ಕಣ್ಮರೆಯಾಗಿದ್ದರು. ಆದರೆ, ಎಲ್ಲಾ ತೊಂದರೆಗಳನ್ನು ಮೆಟ್ಟಿನಿಂತಿ ಮತ್ತೆ ಪುಟಿದೆದ್ದರು. 2017ರಲ್ಲಿ ತೆರೆಕಂಡ 'ಉಪೇಂದ್ರ ಮತ್ತೆ ಬಾ' ಚಿತ್ರದ ಮೂಲಕ ಚಿತ್ರರಂಗಕ್ಕೆ ರೀಎಂಟ್ರಿ ಕೊಟ್ಟರು. ಆ ಬಳಿಕ ವೆಡ್ಡಿಂಗ್ ಗಿಫ್ಟ್ ಸಿನಿಮಾದಲ್ಲೂ ನಟಿಸಿದರು. ಸದ್ಯ ಜೀ ಕನ್ನಡದಲ್ಲಿ ಮೂಡಿ ಬರುತ್ತಿರುವ ಮಹಾನಟಿ ಶೋನಲ್ಲಿ ಜಡ್ಜ್ ಆಗಿ ಭಾಗವಹಿಸುತ್ತಿದ್ದಾರೆ. ಈ ಹಿಂದೆ ಪ್ರೇಮಾ ಆರ್.ಜೆ. ರಾಜೇಶ್ ಅವರನ್ನು ಎರಡನೇ

> **ಆದರೆ, ಕೆಲವು ಮೂಲಗಳ ಪ್ರಕಾರ ಅವರಿಬ್ಬರ ನಡುವೆ ಅಂತಹ ಯಾವುದೇ ಸಂಬಂಧವಿಲ್ಲ, ಒಳ್ಳೆಯ ಸ್ನೇಹಿತರು ಅಷ್ಟೇ ಎಂಬ ಮಾತುಗಳು ಕೇಳಿಬರುತ್ತಿವೆ. ವಾಸ್ತವವಾಗಿ, ಪ್ರೇಮಾ ಅವರ ಎರಡನೇ ಮದುವೆಯ ಬಗ್ಗೆ ಅನೇಕ ವದಂತಿಗಳು ಇದ್ದವು. ಆದರೆ, ಅದನ್ನು ತಿರಸ್ಕರಿಸಿದ ಪ್ರೇಮಾ, ಸದ್ಯ ವೈರಲ್ ಆಗುತ್ತಿರುವ ಸುದ್ದಿಗೆ ಹೇಗೆ ಪ್ರತಿಕ್ರಿಯಿಸುತ್ತಾರೆ ಎಂದು ಕಾದು ನೋಡಬೇಕಿದೆ**
>
> -ಪ್ರೇಮಾ, ನಟಿ

ಮದುವೆಯಾಗಲಿದ್ದಾರೆ ಎಂಬ ವರದಿಗಳು ಬಂದಿದ್ದವು. ಆದರೆ, ಈ ಸುದ್ದಿಯಲ್ಲಿ ಯಾವುದೇ ಸತ್ಯವಿಲ್ಲ ಎಂದು ಸಂದರ್ಶನವೊಂದರಲ್ಲಿ ಹೇಳಿದ್ದರು.

ಇತ್ತೀಚಿಗೆ ಪ್ರೇಮಾ ಅವರ ಜೊತೆಗೆ ಒಬ್ಬ ವ್ಯಕ್ತಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವ ಸುದ್ದಿ ಬರುತ್ತಿದೆ. ಕನ್ನಡದ ಸಿನಿಬಜ್ ವೆಬ್‌ಸೈಟ್‌ನಲ್ಲಿ ಪ್ರೇಮಾ ಬಗ್ಗೆ ಫೋಟೋ ಸಹಿತ ಸುದ್ದಿಯನ್ನು ಪ್ರಕಟಿಸಲಾಗಿದೆ. ಈ ವರದಿಯ ಪ್ರಕಾರ ಕನ್ನಡ ಕಿರುತೆರೆ ಉದ್ಯಮದ ಖ್ಯಾತ ಕಾರ್ಯನಿರ್ವಾಹಕರಾದ ಅರವಿಂದ್ ಜತೆ ಪ್ರೇಮಾ ಅವರಿಗೆ ನಿಕಟ ಸಂಬಂಧವಿದೆ ಎಂದು ಹೇಳಲಾಗಿದೆ. ಪ್ರೇಮಾ ಎಲ್ಲಿರುತ್ತಾರೋ ಅಲ್ಲಿ ಅರವಿಂದ್ ಕೂಡ ಇದ್ದೇ ಇರುತ್ತಾರೆ.

ಇತ್ತೀಚೆಗಷ್ಟೇ ಪ್ರೇಮಾ ಕೊರಗಜ್ಜನ ಸನ್ನಿಧಿಗೆ ಹೋದಾಗ ಅರವಿಂದ್ ಕೂಡ ಜತೆಯಲ್ಲಿದ್ದರು ಎಂದು ಹೇಳಲಾಗಿದೆ. ಅರವಿಂದ್ ಜೊತೆ ಪ್ರೇಮಾ ಅವರು ಹೊಸ ಜೀವನ ಆರಂಭಿಸಲಿದ್ದಾರೆ ಎಂಬ ಮಾತು ಕೂಡ ಕೇಳಿಬಂದಿದೆ. ಇನ್ನು ಸೂಕ್ತ ವ್ಯಕ್ತಿ ಸಿಕ್ಕರೆ ಮದುವೆಯಾಗುತ್ತೇನೆ ಎಂದು ಈ ಹಿಂದೆಯೇ ಪ್ರೇಮಾ ಹೇಳಿದ್ದಾರೆ.

## ಪ್ರಜ್ವಲ್ ರೇವಣ್ಣ ವಿರುದ್ಧ ಬ್ಲೂ ಕಾರ್ನರ್ ನೋಟಿಸ್ ಜಾರಿ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು



ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯ ಪ್ರಕರಣ ದಿನಕ್ಕೊಂದು ತಿರುವು ಪಡೆಯುತ್ತಿದೆ. ಎಸ್‌ಐಟಿ ಅಧಿಕಾರಿಗಳ ಬೆನ್ನಲ್ಲೇ, ಸಿಬಿಐ ಕೂಡ ತನಿಖೆಗೆ ಇಳಿಯೋ ಸಾಧ್ಯತೆ ಇದೆ. ಅಲ್ಲದೇ ಸಿಬಿಐನಿಂದ ಪ್ರಜ್ವಲ್ ರೇವಣ್ಣ ವಿರುದ್ಧ ಬ್ಲೂ ಕಾರ್ನರ್ ನೋಟಿಸ್ ಜಾರಿ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

**ಸಹೋದರಿಯರ ಮೇಲೆ ಅತ್ಯಾಚಾರ ಎಸಗಿದರೆ ಕಠಿಣ ಶಿಕ್ಷೆ**

**ಏತನ್ಮಧ್ಯೆ, ಕಾಂಗ್ರೆಸ್ ಹಿರಿಯ ಮುಖಂಡ ರಾಹುಲ್ ಗಾಂಧಿ ಅವರು ರೇವಣ್ಣ ವಿರುದ್ಧದ ಲೈಂಗಿಕ ಕಿರುಕುಳ ಪ್ರಕರಣದ ಸಂತ್ರಸ್ತರಿಗೆ ಬೆಂಬಲ ವ್ಯಕ್ತಪಡಿಸಿ ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಅವನನ್ನು ಸಹೋದರ ಮತ್ತು ಮಗನಂತೆ ನೋಡಿದ ಅನೇಕರನ್ನು ಅತ್ಯಂತ ಹಿಂಸಾತ್ಮಕ ರೀತಿಯಲ್ಲಿ ಕ್ರೂರವಾಗಿ ಥಳಿಸಲಾಯಿತು. ಅವರ ಘನತೆಯನ್ನು ಕಸಿದುಕೊಳ್ಳಲಾಯಿತು. ನಮ್ಮ ತಾಯಂದಿರು, ಸಹೋದರಿಯರ ಮೇಲೆ ಅತ್ಯಾಚಾರ ಎಸಗಿದರೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಬರೆದಿದ್ದಾರೆ.**

ಇಂದು ಪ್ರಜ್ವಲ್ ರೇವಣ್ಣ ವಿರುದ್ಧದ ಅಶ್ಲೀಲ ವೀಡಿಯೋ ಪ್ರಕರಣ ಸಂಬಂಧ ಸಿಎಂ ಸಿದ್ದರಾಮ್ಯಯ ಎಸ್‌ಐಟಿ ಅಧಿಕಾರಿಗಳ ನೇತೃತ್ವದಲ್ಲಿ ಮಹತ್ವದ ಸಭೆಯನ್ನು ನಡೆಸಿದರು. ಇಂದಿನ ಸಿಎಂ ನೇತೃತ್ವದ ಸಭೆಯಲ್ಲಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಸಿಬಿಐ ಬ್ಲೂ ಕಾರ್ನರ್ ನೋಟಿಸ್ ಹೊರಡಿಸುವ ಸಾಧ್ಯತೆ ಇದೆ ಎಂದು ವಿಶೇಷ ತನಿಖಾ ತಂಡ (ಎಸ್‌ಐಟಿ) ಸಿದ್ದರಾಮಯ್ಯ ಅವರಿಗೆ ತಿಳಿಸಿದೆ. ಪ್ರಜ್ವಲ್ ರೇವಣ್ಣ ಅವರ ತಂದೆ ಎಚ್.ಡಿ.ರೇವಣ್ಣ ವಿರುದ್ಧ ಎಸ್‌ಐಟಿ ಎರಡನೇ ಲುಕ್‌ಔಟ್ ನೋಟಿಸ್ ಹೊರಡಿಸಿದೆ. ಪ್ರಜ್ವಲ್ ಮತ್ತು ಅವರ ತಂದೆಯ ವಿರುದ್ಧ ಇನ್ನೂ ಎರಡು ಎಫ್‌ಐಆರ್‌ಗಳು ದಾಖಲಾದ ನಂತರ ಅವರಿಗೆ ಮತ್ತಷ್ಟು ಸಂಕಷ್ಟ ಎದುರಾದಂತೆ ಆಗಿದೆ.

## ಹಿಂದೂ ಹೆಣ್ಣುಮಕ್ಕಳ ಮೇಲೆ ಅತ್ಯಾಚಾರ

• ಉದಯವಾಹಿನಿ, ಬೆಂಗಳೂರು

ಹುಬ್ಬಳ್ಳಿಯಲ್ಲಿ ಅನ್ಯಕೋಮಿನ ಯುವಕನಿಂದ ಲೈಂಗಿಕ ದೌರ್ಜನ್ಯಕ್ಕೆ ಒಳಗಾಗಿ ಅಪ್ರಾಪ್ತೆ ಗರ್ಭಿಣಿಯಾಗಿರುವ ಪ್ರಕರಣ ಸಂಬಂಧ ರಾಜ್ಯ ಸರ್ಕಾರವನ್ನು ಬಿಜೆಪಿ ತರಾಟೆಗೆ ತೆಗೆದುಕೊಂಡಿದೆ. ಕಾಂಗ್ರೆಸ್ ಬ್ರದರ್ಸ್‌ಗಳಿಂದ ಹಿಂದೂ ಹೆಣ್ಣುಮಕ್ಕಳ ಮೇಲೆ ಮತ್ತೊಂದು ಅತ್ಯಾಚಾರ ಎಂದು ವಾಗ್ದಾಳಿ ನಡೆಸಿದೆ.

ಪ್ರಕರಣ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ರಾಜ್ಯ ಬಿಜೆಪಿ, ತಾಲಿಬಾನಿ ಕಾಂಗ್ರೆಸ್ ಸರ್ಕಾರದಲ್ಲಿ ಹಿಂದೂಗಳಿಗೆ ಇಲ್ಲ ಸುರಕ್ಷತೆ. ಕಾಂಗ್ರೆಸ್ ಬ್ರದರ್ಸ್‌ಗಳಿಂದ ಹಿಂದೂ ಹೆಣ್ಣುಮಕ್ಕಳ ಮೇಲೆ ಮತ್ತೊಂದು ಅತ್ಯಾಚಾರ ಎಂದು ಗಂಭೀರ ಆರೋಪ ಮಾಡಿದೆ. ಸಿದ್ದರಾಮಯ್ಯ ಸರ್ಕಾರದಲ್ಲಿ ಹಿಂದೂ ಯುವತಿಯರು ಮನೆಯಿಂದ ಹೊರಬರುವುದೇ ಕಷ್ಟವಾಗಿದೆ. ಈ ಹಿಂದೂ ವಿರೋಧಿ ಸರ್ಕಾರ ತೊಲಗಬೇಕು ಎಂದು ಬಿಜೆಪಿ ಆಕ್ರೋಶ ಹೊರಹಾಕಿದೆ. ಹುಬ್ಬಳ್ಳಿಯಲ್ಲಿ ಅನ್ಯಕೋಮಿನ ಯುವಕನಿಂದ ಅಪ್ರಾಪ್ತೆ ಗರ್ಭಿಣಿಯಾಗಿರುವ ಪ್ರಕರಣ ಬೆಳಕಿಗೆ ಬಂದಿದೆ.

ಆರೋಪ ವಿರುದ್ಧ ಲೈಂಗಿಕ ದೌರ್ಜನ್ಯ ಮತ್ತು ಜಾತಿ ನಿಂದನೆ ಪ್ರಕರಣ ದಾಖಲಿಸಲಾಗಿದೆ. ಸ್ಥಳೀಯರಿಂದ ಆಕ್ರೋಶ ವ್ಯಕ್ತವಾದ ಬೆನ್ನಲ್ಲೇ ಕಾರ್ಯಾಚರಣೆ ನಡೆಸಿ ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ. ವಶಕ್ಕೆ ಪಡೆಯುವ ಸಂದರ್ಭದಲ್ಲಿ ಆರೋಪಿಯು ಪೊಲೀಸರ ಮೇಲೆ ಹಲ್ಲೆಗೆ ಮುಂದಾಗಿದ್ದ. ಈ ವೇಳೆ ಕಾಲಿಗೆ ಗುಂಡೇಟು ಹೊಡೆದು ಪೊಲೀಸರು ಬಂಧಿಸಿದ್ದಾರೆ.

## ಶಕುನಿಯಾಗಿ ಘರ್ಜಿಸುತ್ತಿರುವಾಗಲೇ ಹೃದಯಾಘಾತ

• ಉದಯವಾಹಿನಿ, ಬೆಂಗಳೂರು

ನಾಟಕದಲ್ಲಿ ಅಭಿನಯಿಸುತ್ತಿರುವಾಗಲೇ ವೇದಿಕೆಯಲ್ಲೇ ಕುಸಿದು ಬಿದ್ದು ಕಲಾವಿದರೊಬ್ಬರು ಮೃತಪಟ್ಟಿದ್ದಾರೆ. ಯಲಹಂಕದ ಸಾತನೂರು ಗ್ರಾಮದಲ್ಲಿ ನಡೆದಿದೆ. ಎನ್.ಮುನಿಕೆಂಪಣ್ಣ (72) ಮೃತರು. ಇವರು ಯಲಹಂಕದ ಸಾತನೂರು ಗ್ರಾಮದಲ್ಲಿ ಕುರುಕ್ಷೇತ್ರ ನಾಟಕ ಪ್ರದರ್ಶಿಸುತ್ತಿದ್ದ ವೇಳೆ ನಿಧನ ಹೊಂದಿದ್ದಾರೆ. ಹೃದಯಾಘಾತದಿಂದ ಮೃತಪಟ್ಟ ಮುನಿಕೆಂಪಣ್ಣ ಅವರ ಅಂತ್ಯ ಸಂಸ್ಕಾರ ಅವರ ಹುಟ್ಟೂರು ಅರದೇಶನಹಳ್ಳಿಯಲ್ಲಿ ನಡೆಯಲಿದೆ.

ಕುರುಕ್ಷೇತ್ರ ನಾಟಕದಲ್ಲಿ ಮುನಿಕೆಂಪಣ್ಣ ಅವರು ಶಕುನಿ ಪಾತ್ರ ನಿರ್ವಹಿಸುತ್ತಿದ್ದರು. ಮಧ್ಯರಾತ್ರಿಯವರೆಗೂ ಅದ್ಭುತ ಪ್ರದರ್ಶನ ನೀಡಿದ ಅವರು ಒಂದು ಗಂಟೆಯ ವೇಳೆಗೆ ಇದ್ದಕ್ಕಿದ್ದಂತೆ ವೇದಿಕೆ



ಉದಯವಾಹಿನಿ ಚಿತ್ರ

ಮೇಲೆಯೇ ಕುಸಿದು ಬಿದ್ದು ಪ್ರಾಣ ಬಿಟ್ಟಿದ್ದಾರೆ. ಸದ್ಯ ಅವರು ಕುಸಿದು ಬೀಳುತ್ತಿರುವ ದೃಶ್ಯ ಮೊಬೈಲ್‌ನಲ್ಲಿ ಸೆರೆಯಾಗಿದೆ.

ಹಿಂದೆ ಉಪನ್ಯಾಸಕರಾಗಿದ್ದ ಮುನಿಕೆಂಪಣ್ಣ ಅವರು ನಾಟಕದಲ್ಲಿ ಅಪಾರ ಆಸಕ್ತಿ ಹೊಂದಿದ್ದು, ಆಗಾಗ ವೇಷ ಹಚ್ಚುತ್ತಿರುತ್ತಾರೆ. ದೇವನಹಳ್ಳಿಯಲ್ಲಿ ನಡೆದ 28ನೇ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು.

## ಎಚ್ ಡಿಕೆ ಹೇಳಿಕೆಗೆ ಡಿಸಿಎಂ ತಿರುಗೇಟು

### ಮೇ 7 ರವರೆಗೆ ಯಾಕೆ ಕಾಯಬೇಕು? ಇದರ ಮೂಲ ಏನು? ಹಿನ್ನೆಲೆ ಯಾರು? ನಾವು ಹೇಳಬೇಕಾ

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಮೇ 7ರ ನಂತರ ಈ ಪ್ರಕರಣ ಎಲ್ಲಿಗೆ ಹೋಗುತ್ತೆ ಎಂದು ಎಲ್ಲರಿಗೂ ಗೊತ್ತು ಎಂಬ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆ ಡಿಸಿಎಂ ಡಿ.ಕೆ.ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್, ಮೇ 7 ರವರೆಗೆ ಯಾಕೆ ಕಾಯಬೇಕು? ಇದರ ಮೂಲ ಏನು?



ಇದರ ಹಿನ್ನೆಲೆ ಯಾರು ಎಂದು ನಾವು ಬಿಚ್ಚಿ ಇಡಬೇಕಾ? ಇದು ಅವರ ಕುಟುಂಬದ ಆಂತರಿಕ ವಿಚಾರ. ಈ ಬಗ್ಗೆ ಮಾಧ್ಯಮದವರು ವಿಶ್ಲೇಷಣೆ ಮಾಡಿದ್ದಾರೆ. ಕುಮಾರಸ್ವಾಮಿ ಅವರೇ, 'ಉಪ್ಪು ತಿಂದವರು ನೀರು ಕುಡಿಯಬೇಕು, ನಮ್ಮ ಕುಟುಂಬ ಬೇರೆ, ಅವರ ಕುಟುಂಬ ಬೇರೆ ಎಂದು ಹೇಳಿದ್ದಾರೆ.


ಹಿಂದೆ ನಮ್ಮ ಕುಟುಂಬದವರಿಗೆ ಟಿಕೆಟ್ ನೀಡುವುದಿಲ್ಲ ಎಂದು ಹೇಳಿದ್ದೂ ಅವರೇ. ಪ್ರಜ್ವಲ್ ನಿಂದ ತಪ್ಪಾಗಿದೆ ಕ್ಷಮಿಸಿ ಎಂದು ಅವರು ಕ್ಷಮೆ ಕೇಳಿದ್ದು ಅವರೇ. ಆದರೆ ಕುಮಾರಸ್ವಾಮಿ ಈಗ ತಮ್ಮ ನಿಲುವು ಬದಲಿಸುತ್ತಿರುವುದೇಕೆ? ಎಂದು ಪ್ರಶ್ನಿಸಿದರು.

ಪೆನ್ ಡ್ರೈವ್ ಅವರ ಕುಟುಂಬದ ವಿಚಾರ. ಆದರೆ ಕುಮಾರಸ್ವಾಮಿ ಮಾತು ಆಗಾಗ್ಗೆ ಬದಲಾಗುತ್ತಲೇ ಬಂದಿದೆ. ಬೇಕಿದ್ದರೆ ಕಳೆದ ವಿಧಾನಸಭೆ ಚುನಾವಣೆಯಿಂದ ಈಚೆಗೆ ಅವರ ಕುಟುಂಬ ಸದಸ್ಯರ ಹೇಳಿಕೆಗಳನ್ನು ಗಮನಿಸಿ. ಈಗ ಪೆನ್ ಡ್ರೈವ್ ಪ್ರಕರಣದಲ್ಲೂ ಕುಮಾರಸ್ವಾಮಿ ಅವರು ಗಂಟೆಗೊಂದು, ಗಳಿಗೆಗೊಂದು ಹೇಳಿಕೆ ನೀಡುತ್ತಿದ್ದಾರೆ ಎಂದರು.

## ಲಸಿಕೆ ಪಡೆದವರು ಕೂಲ್ ಡ್ರಿಂಕ್ಸ್, ಐಸ್ ಕ್ರೀಂ, ಫ್ರಿಡ್ಜ್ ವಾಟರ್ ಸೇವಿಸಬಾರದು ಎಂಬುದು ಸುಳ್ಳು: ಆರೋಗ್ಯ ಇಲಾಖೆ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಕೋವಿಶೀಲ್ಡ್ ಲಸಿಕೆ ಪಡೆದವರು ಫ್ರಿಜ್ ನೀರು, ಐಸ್ ಕ್ರೀಮ್ ಮತ್ತು ತಂಪು ಪಾನೀಯಗಳನ್ನು ಕುಡಿಯಬಾರದು ಎಂಬುವುದು ಸುಳ್ಳು ಸುದ್ದಿಯಾಗಿದೆ ಎಂದು ಆರೋಗ್ಯ ಇಲಾಖೆ ತಿಳಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ಈ ರೀತಿಯ ಸುದ್ದಿ ಸುಳ್ಳಾಗಿದ್ದು, ಇಂತಹ ಯಾವುದೇ ಸುತ್ತೋಲೆ ಇಲಾಖೆ ಹೊರಡಿಸಿಲ್ಲ. ಗಾಬರಿಗೊಳ್ಳದಿರಿ, ತಪ್ಪು ಮಾಹಿತಿ ಬಗ್ಗೆ ಜಾಗೃತಿ ವಹಿಸುವಂತೆ ಆರೋಗ್ಯ ಇಲಾಖೆ ಸೂಚನೆ ನೀಡಿದೆ. ಈ ರೀತಿ ಸೂಚನೆ ನೀಡಿರುವ ಕಾಲೇಜುಗಳಿಗೆ ಕಾರಣ ಕೇಳಿ ಆರೋಗ್ಯ



SRI SIDDARAMAIAH LAW COLLEGE
Fidelity is the sister of justice

ಇಲಾಖೆ ನೋಟಿಸ್ ನೀಡಿದೆ. ಆರೋಗ್ಯ ಇಲಾಖೆಯು ತಿಳಿಸಿರುವ ಮಾಹಿತಿಯ ಪ್ರಕಾರ, ಎಲ್ಲಾ ವಿದ್ಯಾರ್ಥಿಗಳು ಹಾಗೂ ಪೋಷಕರು ಯಾವುದೇ ರೀತಿಯ ಫ್ರಿಜ್ ನೀರು, ಐಸ್ ಕ್ರೀಮ್ ಮತ್ತಯ ತಂಪು ಪಾನೀಯಗಳನ್ನು ಕುಡಿಯಬಾರದು. ಏಕೆಂದರೆ ಕೊರೊನಾ ಸಂದರ್ಭದಲ್ಲಿ ಕೋವಿಶೀಲ್ಡ್ ಲಸಿಕೆ ಹಾಕಿಸಿಕೊಂಡಿರುವ ಪರಿಣಾಮ ರಕ್ತ ಹೆಪ್ಪುಗಟ್ಟುವುದು ದಿಢೀರ್ ಹೃದಯಾಘಾತ ಸಂಭವಿಸಿ ಪ್ರಾಣ ಹಾನಿಯಾಗುತ್ತಿದೆ.

ಹೀಗಾಗಿ ಮೇಲೆ ತಿಳಿಸಿರುವ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು ಎಂದು ಖಾಸಗಿ ಕಾಲೇಜು ಸುತ್ತೋಲೆ ಹೊರಡಿಸಿತ್ತು.

ಖಾಸಗಿ ಕಾಲೇಜೊಂದು ಈ ರೀತಿಯಾಗಿ ನೋಟಿಸ್ ಹೊರಡಿಸಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಶುಕ್ರವಾರ ಹರದಾಡಲು ಆರಂಭಿಸಿತು. ಇದರಿಂದ ಎಚ್ಚತ್ತ ಆರೋಗ್ಯ ಇಲಾಖೆ ಇದು ಸುಳ್ಳು ಸುದ್ದಿ ಎಂದು ಸ್ಪಷ್ಟನೆ ನೀಡಿದೆ.

## ಆರೋಗ್ಯದಲ್ಲಿ ಏರು ಪೇರು: ಸರಿಯಾಗಿ ಊಟ, ನಿದ್ದೆ ಮಾಡದ ಮಾಜಿ ಪ್ರಧಾನಿ ಕುಟುಂಬದಲ್ಲಿ ಆತಂಕ

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಪ್ರಧಾನಿ ದೇವೇಗೌಡರ ಆರೋಗ್ಯದಲ್ಲಿ ಏರುಪೇರು ಉಂಟಾಗಿದೆ ಎಂದು ತಿಳಿದುಬಂದಿದೆ. 92 ರ ವಯೋಮಾನದ ದೇವೇಗೌಡರಿಗೆ ಇಳಿವಯಸ್ಸಿನ ತೀವ್ರ ಆಘಾತ ಉಂಟಾಗಿದೆ. ಕಳೆದ ನಾಲ್ಕೈದು ದಿನಗಳಿಂದ ಮನೆ ಬಿಟ್ಟು ಹೊರಬಾರದೆ, ಸರಿಯಾಗಿ ಊಟ, ನಿದ್ದೆ ದೇವೆಗೌಡರು ಮಾಡುತ್ತಿಲ್ಲ,

ಹೀಗಾಗಿ ದೇವೆಗೌಡರ ಆರೋಗ್ಯದ ಬಗ್ಗೆ



ಉದಯವಾಹಿನಿ ಚಿತ್ರ

ಕುಟುಂಬಸ್ಥರಿಗೆ ಚಿಂತೆಯಾಗಿದೆ. ವಯೋ ಸಹಜ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವ ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡರು, ಹಿರಿಮಗ ಹಾಗೂ ಮೊಮ್ಮಗನ ಹಗರಣಗಳಿಂದಾಗಿ ತೀವ್ರವಾಗಿ ನೊಂದಿದ್ದಾರೆ.

ಈ ಹಿನ್ನೆಲೆಯಲ್ಲಿ ದೇವೇಗೌಡರು ಹಾಗೂ ಪತ್ನಿ ಚೆನ್ನಮ್ಮ ಆರೋಗ್ಯದ ಬಗ್ಗೆಯೂ ಕುಟುಂಬದ ಸದಸ್ಯರು ತೀವ್ರ ನಿಗಾ ವಹಿಸುತ್ತಿದ್ದಾರೆ. ಹೆಣ್ಣು ಮಕ್ಕಳು ಸಂಪೂರ್ಣ ಮೇಲ್ವಿಚಾರಣೆ ಹೊತ್ತಿದ್ದಾರೆ.

ಬೆಳಿಗ್ಗೆ ಹಾಗೂ ಸಂಜೆ ಎರಡೂ ಟೈಮ್ ಆರೋಗ್ಯ ತಪಾಸಣೆ ನಡೆಸುತ್ತಿದ್ದಾರೆ. ಈ ಪ್ರಕರಣ ರಾಷ್ಟ್ರಮಟ್ಟದಲ್ಲಿ ಸುದ್ದಿಯಾದ ಹಿನ್ನೆಲೆ ಹೆಚ್ಚು ಟಿ ವಿ ನೋಡದಂತೆ ದೇವೇಗೌಡರಿಗೆ ವೈದ್ಯರು ಕೂಡ ಸಲಹೆ ನೀಡಿದ್ದಾರೆ.

## ಎಸ್‌ಐಟಿ ಅಧಿಕಾರಿಗಳೊಂದಿಗೆ ಸಿಎಂ ಮಹತ್ವದ ಸಭೆ

• ಉದಯವಾಹಿನಿ, ಬೆಂಗಳೂರು



ಪ್ರಜ್ವಲ್ ರೇವಣ್ಣ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಅವರು ಎಸ್ ಐಟಿ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿದರು. ಪ್ರಕರಣದ ಸಂಬಂಧ ಇದು ವರೆಗಿನ ಬೆಳವಣಿಗೆಗಳ ಬಗ್ಗೆ ಮುಖ್ಯಮಂತ್ರಿ ಯವರು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಪ್ರಮುಖ ಆರೋಪಿಯಾಗಿರುವ ಪ್ರಜ್ವಲ್ ರೇವಣ್ಣ ನಾಪತ್ತೆಯಾಗಿದ್ದು, ಲುಕ್‌ಔಟ್ ನೋಟಿಸ್ ಜೊತೆಗೆ ತೀವ್ರ ಶೋಧ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ವಿವರಿಸಿದರು. ಪ್ರಜ್ವಲ್ ರೇವಣ್ಣ ಬಂಧನಕ್ಕೆ ಕೂಡಲೇ ಕ್ರಮ ಕೈಗೊಳ್ಳಬೇಕು. ಪ್ರಕರಣದಲ್ಲಿ ಭಾಗಿಯಾದವರ ವಿರುದ್ಧ ನಿರ್ದಾಕ್ಷಿಣ್ಯ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಈ ವಿಚಾರದಲ್ಲಿ ನಿರ್ಲಕ್ಷ್ಯ, ವಿಳಂಬ ಧೋರಣೆ ಸಹಿಸಲಾಗದು ಎಂದು ಮುಖ್ಯಮಂತ್ರಿಯವರು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಸೂಕ್ತ ಕ್ರಮಗಳೊಂದಿಗೆ ಬಂಧನಕ್ಕೆ ಮುಂದಾಗುತ್ತೇವೆ. ಸಿಬಿಐ ಬ್ಲೂಕಾರ್ನರ್ ನೋಟಿಸ್ ಹೊರಡಿಸುವ ಸಾಧ್ಯತೆ ಇದ್ದು ತನಿಖೆಗೆ ವೇಗ ಸಿಗಲಿದೆ. ವಿಮಾನ ನಿಲ್ದಾಣಗಳಿಂದ ಮಾಹಿತಿ ಸಿಕ್ಕ ಕೂಡಲೇ ಬಂಧಿಸಿ ಕರೆತರುವುದಾಗಿ ಅಧಿಕಾರಿಗಳು ತಿಳಿಸಿದರು.

# ಸಾಂಕ್ರಾಮಿಕ ರೋಗಗಳು ಹೆಚ್ಚಾಗುವ, ಹರಡುವ ಸಾಧ್ಯತೆ

### ರಾಜ್ಯದಲ್ಲಿ ಬಿಸಿಲಿನ ಬೇಗೆಗೆ ಸಾಂಕ್ರಾಮಿಕ ರೋಗಗಳ ಹೆಚ್ಚಳ; ಅಗತ್ಯ ಕ್ರಮವಹಿಸಲು ಸೂಚನೆ

• ಉದಯವಾಹಿನಿ, ಬೆಂಗಳೂರು

ಬೇಸಿಗೆ ಕಾಲವಾಗಿರುವುದರಿಂದ, ರಾಜ್ಯದಲ್ಲಿರುವ ಎಲ್ಲಾ ಹಳ್ಳಿ, ಪಟ್ಟಣಗಳಲ್ಲಿ ಜಾತ್ರೆ, ರಥೋತ್ಸವ, ಮದುವೆ ಸಮಾರಂಭಗಳು, ದರ್ಗಾಗಳಲ್ಲಿ ಉರೂಸ್‌ಗಳು, ಊರು ಹಬ್ಬಗಳ ಆಚರಣೆಯಿರುತ್ತದೆ. ಇಂತಹ ಆಚರಣೆಯ ಸಂದರ್ಭದಲ್ಲಿ ಕಲುಷಿತ ನೀರು, ಕಲುಷಿತ ಆಹಾರ ಸೇವನೆಯಿಂದ ಕರುಳುಬೇನೆ, ಕಾಲಾರಾ, ವಿಷಮಶೀತ ಜ್ವರ, ಕಾಮಾಲೆ(ಜಾಂಡೀಸ್) ಮತ್ತಿತರ ಸಾಂಕ್ರಾಮಿಕ ರೋಗಗಳು ಹೆಚ್ಚಾಗುವ, ಹರಡುವ ಸಾಧ್ಯತೆಗಳು ಅಧಿಕವಾಗಿರುತ್ತದೆ. ಈ ಸಾಂಕ್ರಾಮಿಕ ರೋಗಗಳು ಉಲ್ಬಣಗೊಳ್ಳದಂತೆ ಅಗತ್ಯ ಕ್ರಮವಹಿಸಲು ಎಲ್ಲಾ ಇಲಾಖೆಗಳಿಗೆ ಸೂಚಿಸಿದೆ.

ಮದುವೆ ಸಮಾರಂಭಗಳು, ಜಾತ್ರೆ, ಊರ ಹಬ್ಬ ಮತ್ತಿತರ ಸಾಮಾಜಿಕ ಉತ್ಸವಗಳ ಸಂದರ್ಭಗಳಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ವಿಶೇಷ ಎಚ್ಚರಿಕೆ ವಹಿಸುವುದು, ಹೋಟಲ್



ಉದಯವಾಹಿನಿ ಚಿತ್ರ

**ಮಾಹಿತಿ ಕಲೆ ಹಾಕಿ**

ಗಳಲ್ಲಿ ಸಾರ್ವಜನಿಕರಿಗೆ ಶುದ್ಧವಾದ ಬಿಸಿ ಆಹಾರ ಮತ್ತು ಕುಡಿಯಲು ಬಿಸಿ ನೀರನ್ನು ಉಪಯೋಗಿಸುವಂತೆ ಮತ್ತು ಹೋಟೆಲ್‌ಗಳಲ್ಲಿನ ಘನ ತ್ಯಾಜ್ಯ ಪದಾರ್ಥಗಳನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳುವುದು. ಸಂಬಂಧಪಟ್ಟ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕುಡಿಯುವ ನೀರಿನ ಮೂಲಗಳ ಮಾಹಿತಿ ಕಲೆಹಾಕಿ, ಎಲ್ಲಾ ಕುಡಿಯುವ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗೆ ಒಳಪಡಿಸುವುದು ಮತ್ತು ಸಾರ್ವಜನಿಕರಿಗೆ ಶುದ್ಧವಾದ ಕುಡಿಯುವ ನೀರನ್ನು

**ಆಹಾರ, ನೀರಿನ ಗುಣಮಟ್ಟದ ಸುರಕ್ಷತೆಯ ಬಗ್ಗೆ ಕ್ರಮ**

**ಸ್ಥಳೀಯ ಆಹಾರ ಸುರಕ್ಷತಾ ಅಧಿಕಾರಿಗಳು ಹೋಟೆಲ್, ಅಂಗಡಿಗಳ ತಪಾಸಣೆ ನಡೆಸಿ ಆಹಾರ, ನೀರಿನ ಗುಣಮಟ್ಟದ ಸುರಕ್ಷತೆಯ ಬಗ್ಗೆ ಕ್ರಮವಹಿಸುವುದು. ಮನೆ ಬೇಟಿ ಸಮೀಕ್ಷೆಯಲ್ಲಿ ವೈಯಕ್ತಿಕ ಶುಚಿತ್ವ, ಪರಿಸರ ನೈರ್ಮಲ್ಯ, ಶುದ್ದ ಕುಡಿಯುವ ನೀರು, ಬಿಸಿಯಾದ ಆಹಾರ ಸೇವನೆ, ರಸ್ತೆ/ಬೀದಿ ಬದಿಯಲ್ಲಿ ಕತ್ತರಿಸಿ ಮಾರಾಟ ಮಾಡುವ ಹಣ್ಣು-ಹಂಪಲುಗಳನ್ನು ತೆರೆದ ಆಹಾರ ಪದಾರ್ಥಗಳನ್ನು ಸೇವಿಸದಂತೆ ಸಾರ್ವಜನಿಕರು ಎಚ್ಚರ ವಹಿಸುವುದು. ಸಾರ್ವಜನಿಕ ಸ್ಥಳಗಳಲ್ಲಿ ಕೆಮ್ಮುವಾಗ ಮತ್ತು ಸೀನುವಾಗ ಬಾಯಿಯನ್ನು ಕರವಸ್ತ್ರದಿಂದ ಮುಚ್ಚಿಕೊಳ್ಳಬೇಕು. ಸೂಕ್ತ ಚಿಕಿತ್ಸೆಗಾಗಿ ಅಗತ್ಯವಾದ ಜೀವರಕ್ಷಕ ಔಷಧಿಗಳು, ಕ್ರಿಮಿ-ಕೀಟನಾಶಕಗಳನ್ನು ಎಲ್ಲಾ ಪ್ರಾಥಮಿಕ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆಗಳಲ್ಲಿ ಲಭ್ಯವಿರುವಂತೆ ಕ್ರಮ ಕೈಗೊಳ್ಳುವುದು.**

ಸರಬರಾಜು ಮಾಡಲು ಕ್ರಮವಹಿಸುವುದು.


ಎಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿನ ಕುಡಿಯುವ ನೀರಿನ ಪರೀಕ್ಷೆ ನಡೆಸಿದ ನೀರಿನ ಮೂಲಗಳ ಮಾಹಿತಿಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪ್ರಯೋಗಶಾಲೆಯಲ್ಲಿ ನಿರ್ವಹಣೆ ಮಾಡುವುದು. ಕುಡಿಯಲು ಯೋಗ್ಯವಲ್ಲವೆಂದು ಧೃಢಪಟ್ಟ ನೀರಿನ ಮೂಲಗಳನ್ನು ಕೂಡಲೇ ಸಂಬಂಧಪಟ್ಟ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಹಕಾರದೊಂದಿಗೆ ಸ್ವಚ್ಚಗೊಳಿಸಿ ಕ್ಲೋರಿನೇಷನ್ ಮಾಡಲು ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಕ್ರಮವಹಿಸುವುದು.

ಕುಡಿಯುವ ನೀರಿನ ಪೈಪ್ ಲೈನ್ ಒಡೆದು ಹೋಗಿದ್ದರೆ ತಕ್ಷಣ ಸಂಬಂದಪಟ್ಟ ನಗರ ಪಾಲಿಕೆ, ಪಟ್ಟಣ ಪಂಚಾಯತ್, ಪುರಸಭೆ ಮತ್ತು ಗ್ರಾಮ ಪಂಚಾಯತ್ ಅಧಿಕಾರಿಗಳು ದುರಸ್ತಿಗೊಳಿಸಲು ಕ್ರಮ ಕೈಗೊಳ್ಳುವುದು, ವಾಟರ್ ಮ್ಯಾನ್‌ರವರಿಗೆ ಕ್ಲೋರಿನೇಷನ್ ಮಾರ್ಗಸೂಚಿಯನ್ನು ಆರೋಗ್ಯ ಇಲಾಖಾ ವತಿಯಿಂದ ನೀಡುವುದು.

> **ಜಾತ್ರೆ, ಊರುಸ್, ಸಾಮಾಜಿಕ ಉತ್ಸವಗಳ ಸಂದರ್ಭಗಳಲ್ಲಿ ಆರೋಗ್ಯ ಇಲಾಖೆಯಿಂದ ಆರೋಗ್ಯ ಮಾಹಿತಿ, ವಸ್ತು ಮಾಹಿತಿ, ಶಿಕ್ಷಣ ಸಂವಹನ ಪ್ರದರ್ಶನ ಏರ್ಪಡಿಸಿ ಸಾರ್ವಜನಿಕರಿಗೆ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಶಿಕ್ಷಣ ನೀಡುವುದು. ನಿರ್ದಿಷ್ಟವಾದ ರೋಗ ನಿಯಂತ್ರಣ ಕ್ರಮಗಳನ್ನು ಜಾರಿಗೊಳಿಸಿ ಸಾರ್ವಜನಿಕರು ಅನಾರೋಗ್ಯಕ್ಕೆ ತುತ್ತಾಗದಂತೆ ಜಾಗ್ರತೆವಹಿಸಿ, ಸಾರ್ವಜನಿಕರು ಇದಕ್ಕೆ ಸಂಬಂಧಪಟ್ಟ ಇಲಾಖೆಯವರಿಗೆ ಸೂಕ್ತ ಸಹಕಾರ ನೀಡಿ**
>
> -ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾ

ಅಂತರಾಳದಿಂದ..
EDITORIAL

# ಪ್ರಧಾನಿಯನ್ನಾಗಿಸಿದ ಹಾಸನಕ್ಕೆ ಗೌಡರು ಕೊಟ್ಟ ಉಜ್ವಲ ಕೊಡುಗೆ ಈ ಪ್ರಜ್ವಲ


ಉದಯವಾಹಿನಿ ಚಿತ್ರ

ಹಾಸನದ ಸಂಸದ ಪ್ರಜ್ವಲ್ ರೇವಣ್ಣನವರ ಲೈಂಗಿಕ ಹಗರಣ, ದಿನ ಕಳೆದಂತೆ ದಾರಿ ತಪ್ಪುತ್ತಿದೆ. ರಾಜಕೀಯ ಪಕ್ಷಗಳು ಈ ಗಂಭೀರ ಪ್ರಕರಣವನ್ನು ಕೂಡ ಚುನಾವಣೆಯ ವಸ್ತುವನ್ನಾಗಿಸಿಕೊಂಡು, ಆರೋಪ-ಪ್ರತ್ಯಾರೋಪದಲ್ಲಿ ನಿರತವಾಗಿವೆ. ಕೊಚ್ಚೆಯಲ್ಲಿ ಮೀನು ಹಿಡಿಯುವ ಕೆಲಸ ಮಾಡುತ್ತಿವೆ. ಲೈಂಗಿಕ ಪ್ರಕರಣದ ಮುಖ್ಯ ಆರೋಪಿ ಪ್ರಜ್ವಲ್ ರೇವಣ್ಣ ದೇಶದಿಂದ ಪಲಾಯನ ಮಾಡಿದ್ದಾರೆ. ಇದಕ್ಕೆ ಉತ್ತರಿಸಬೇಕಾದ ಹೊಳೆನರಸೀಪುರದ ಜೆಡಿಎಸ್ ಶಾಸಕ ಎಚ್.ಡಿ. ರೇವಣ್ಣ ಕೈಗೆ ಸಿಗುತ್ತಿಲ್ಲ. ಪ್ರಜ್ವಲ್ ಪ್ರಕರಣ ಕುರಿತು ಮಾತನಾಡಲು ಮಾಜಿ ಪ್ರಧಾನಿ ದೇವೇಗೌಡರ ಕುಟುಂಬದಿಂದ ಯಾರೊಬ್ಬರೂ ಮುಂದೆ ಬರುತ್ತಿಲ್ಲ, ತುಟಿಬಿಚ್ಚುತ್ತಿಲ್ಲ. ಚುನಾವಣಾ ಸಮಯವಾದ್ದರಿಂದ ಸಾರ್ವಜನಿಕವಾಗಿ ಕಾಣಿಸಿಕೊಳ್ಳಲೇಬೇಕಾದ ಅನಿವಾರ್ಯತೆಗೆ ಬಿದ್ದ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ, ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಲಾಗದೆ ಮುಜುಗರಕ್ಕೆ ಒಳಗಾಗುತ್ತಿದ್ದಾರೆ. ಕೆಲವು ಸಲ ಸಿಟ್ಟಿನಿಂದ ವಿರೋಧ ಪಕ್ಷಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.ಪ್ರಜ್ವಲ್ ಲೈಂಗಿಕ ದೌರ್ಜನ್ಯ, ಯಾರೂ ಒಪ್ಪದ, ಸಹಿಸದ, ಪರ ವಹಿಸಿ ಮಾತನಾಡಲಾಗದ ಕೊಳಕು ಕೃತ್ಯ. ಈ ಕೃತ್ಯ ಮಾಜಿ ಪ್ರಧಾನಿ ದೇವೇಗೌಡರ ಕುಟುಂಬಪ್ರೀತಿಯ ಫಲವಲ್ಲವೇ? ಹರದನಹಳ್ಳಿಯ ಕಡು ಬಡತನದ ಕೃಷಿ ಕುಟುಂಬದಿಂದ ಬಂದ ಎಚ್.ಡಿ. ದೇವೇಗೌಡರನ್ನು, ಹಾಸನ ಜಿಲ್ಲೆಯ ಜನ ಆರಾಧಿಸಿದ್ದರು. ಆರು ಬಾರಿ ಶಾಸಕರನ್ನಾಗಿ, ಐದು ಬಾರಿ ಸಂಸದರನ್ನಾಗಿ ಆರಿಸಿ ಮೆರೆಸಿದ್ದರು. ರಾಷ್ಟ್ರದ ಅತ್ಯುನ್ನತ ಸ್ಥಾನವಾದ ಪ್ರಧಾನಿ ಹುದ್ದೆಯಲ್ಲಿ ಕೂರಿಸಿ, ಜಿಲ್ಲೆಯ ಹೆಮ್ಮೆ ಎಂದು ಭಾವಿಸಿದ್ದರು.


> **ಹರದನಹಳ್ಳಿಯ ಕಡು ಬಡತನದ ಕೃಷಿ ಕುಟುಂಬದಿಂದ ಬಂದ ಎಚ್.ಡಿ. ದೇವೇಗೌಡರನ್ನು, ಹಾಸನ ಜಿಲ್ಲೆಯ ಜನ ಆರಾಧಿಸಿದ್ದರು. ಆರು ಬಾರಿ ಶಾಸಕರನ್ನಾಗಿ, ಐದು ಬಾರಿ ಸಂಸದರನ್ನಾಗಿ ಆರಿಸಿ ಮೆರೆಸಿದ್ದರು. ರಾಷ್ಟ್ರದ ಅತ್ಯುನ್ನತ ಸ್ಥಾನವಾದ ಪ್ರಧಾನಿ ಹುದ್ದೆಯಲ್ಲಿ ಕೂರಿಸಿ, ಜಿಲ್ಲೆಯ ಹೆಮ್ಮೆ ಎಂದು ಭಾವಿಸಿದ್ದರು. ಇಂತಹ ಹಾಸನ ಜಿಲ್ಲೆಗೆ ಗೌಡರು ಕೊಟ್ಟ ಕೊಡುಗೆ ಏನು?**

**ಇಂತಹ ಹಾಸನ ಜಿಲ್ಲೆಗೆ ಗೌಡರು ಕೊಟ್ಟ ಕೊಡುಗೆ ಏನು?:** 1962ರಿಂದ 1985ರವರೆಗೆ, 6 ಸಲ ಶಾಸಕರಾಗಿ ಗೆದ್ದು ಪ್ರಭಾವಿ ನಾಯಕರಾಗಿ ಹೊರಹೊಮ್ಮಿದ್ದ ಗೌಡರು, ತಮ್ಮನ್ನು ನಿರಂತರವಾಗಿ ಗೆಲ್ಲಿಸಿದ ಕಾರ್ಯಕರ್ತರನ್ನು ಕಡೆಗಣಿಸಿದರು. ವಂಶಪಾರಂಪರ್ಯ ರಾಜಕಾರಣಕ್ಕೆ ಮಣೆ ಹಾಕಿ, ಎಸ್ಎಸ್ಎಲ್‌ಸಿ ಫೇಲಾದ ಪುತ್ರ ರೇವಣ್ಣನವರಿಗೆ ಹೊಳೆನರಸೀಪುರ ಕ್ಷೇತ್ರವನ್ನು 1994ರಲ್ಲಿ ಬಳುವಳಿಯಾಗಿ ಕೊಟ್ಟರು. ರೇವಣ್ಣ ಗೆದ್ದು ಶಾಸಕರಾಗಿ ವಿಧಾನಸೌಧದ ಮೆಟ್ಟಿಲು ಹತ್ತುತ್ತಿದ್ದಂತೆಯೇ, ಗೌಡರು ಮುಖ್ಯಮಂತ್ರಿ ಕುರ್ಚಿಯಲ್ಲಿ ಕೂತಿದ್ದರು. ರಾಜ್ಯದ ನೀತಿ ನಿರೂಪಣೆಯಲ್ಲಿ ನಿರ್ಣಾಯಕ ಪಾತ್ರ ವಹಿಸುವ ಐಎಎಸ್, ಐಪಿಎಸ್ ಗಳಂಥ ಉನ್ನತ ಅಧಿಕಾರಿಗಳು ರೇವಣ್ಣರಿಗೆ ಎದ್ದು ನಿಂತು ನಮಸ್ಕರಿಸತೊಡಗಿದರು.

1996ರಲ್ಲಿ ದೇವೇಗೌಡರು ಪ್ರಧಾನಿಗಳಾಗುತ್ತಿದ್ದಂತೆ, ಅಧಿಕಾರ ತರುವ ಅವಕಾಶಗಳನ್ನು ಕಂಡ ರೇವಣ್ಣ, ನಾವು ಜನರನ್ನು ಆಳಲಿಕ್ಕೆ ಹುಟ್ಟಿರುವವರು ಎಂಬ ಅಹಂಕಾರಕ್ಕೆ ಒಳಗಾದರು. ಮೂರನೇ ಬಾರಿಗೆ ಶಾಸಕರಾಗಿ ಗೆಲ್ಲುತ್ತಿದ್ದಂತೆ, 2004ರಲ್ಲಿ ಲೋಕೋಪಯೋಗಿ ಸಚಿವರಾದರು. 2006ರಲ್ಲಿ ಸಹೋದರ ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾದಾಗ, ರೇವಣ್ಣನವರೇ ಅನಧಿಕೃತ ಸಿಎಂ ಆದರು. ಸಾವಿರಾರು ಕೋಟಿ ರೂಪಾಯಿಗಳ ಅನುದಾನವನ್ನು ಹಾಸನಕ್ಕೆ ಹರಿಸಿ, ಅಭಿವೃದ್ಧಿಯ ಹರಿಕಾರ ಎನಿಸಿಕೊಂಡರು. 1994ರಿಂದ 2024ರವರೆಗೆ, ಕೇವಲ 30 ವರ್ಷಗಳ ಅಂತರದಲ್ಲಿ ಪ್ರಭಾವಿ ರಾಜಕಾರಣಿಯಾಗಿ ಬೆಳೆದರು, ಭಾರೀ ಶ್ರೀಮಂತರ ಪಟ್ಟಿಗೆ ಸೇರಿಹೋದರು. ಪ್ರಜೆಗಳು, ಪ್ರಜಾಪ್ರಭುತ್ವ, ಸಂವಿಧಾನ, ನೆಲದ ಕಾನೂನು, ಉತ್ತರದಾಯಿತ್ವದ ಬಗ್ಗೆ ಪುತ್ರ ರೇವಣ್ಣರಿಗೆ ತಿಳಿ ಹೇಳಬೇಕಾದ ದೇವೇಗೌಡರು, ಪುತ್ರನ ಬೆಳವಣಿಗೆ ಕಂಡು ಬೆರಗಾದರು. ರೇವಣ್ಣನವರ ಮಡದಿ ಭವಾನಿ, ಪುತ್ರ ಪ್ರಜ್ವಲ್ ಮತ್ತು ಸೂರಜ್ ರಾಜಕಾರಣಕ್ಕಿಳಿದು, ಹಾಸನ ಜಿಲ್ಲೆಯನ್ನು ಹಿಡಿತಕ್ಕೆ ತೆಗೆದುಕೊಂಡಾಗ, ಸರಿ ಎಂದರು. ವಿರೋಧ ಪಕ್ಷವಿಲ್ಲದಂತೆ ಮಾಡಿ, ವಿರುದ್ಧ ಮಾತನಾಡಿದವರನ್ನು ಮಟ್ಟಹಾಕಿ, ಕುಟುಂಬದವರಿಗೇ ಕುರ್ಚಿ ಕಲ್ಪಿಸಿಕೊಟ್ಟಾಗ, ಕಣ್ಮುಚ್ಚಿ ಕೂತರು.

ರಾಜ್ಯದಲ್ಲಿ ಯಾವುದೇ ಪಕ್ಷ ಅಧಿಕಾರದಲ್ಲಿರಲಿ, ಹಾಸನ ಸಾಮ್ರಾಜ್ಯಕ್ಕೆ ರೇವಣ್ಣರೇ ಸಾಮಂತರಾದರು. ಅಪ್ಪ ಮತ್ತು ತಾತ ಕಟ್ಟಿದ್ದ ಹಾಸನವೆಂಬ ಭದ್ರಕೋಟೆಗೆ 2019ರಲ್ಲಿ, ಕೇವಲ 29ರ ಹರೆಯದ ಪ್ರಜ್ವಲ್ ಸಂಸದನಾಗಿ ಆಯ್ಕೆಯಾಗುವ ಮೂಲಕ ಮರಿ ಮಹಾರಾಜನಾದ. ಹುಟ್ಟುತ್ತಲೇ ಬೆಳ್ಳಿ ಚಮಚ ಬಾಯಲ್ಲಿಟ್ಟುಕೊಂಡ ಬಂದ ಪ್ರಜ್ವಲ್‌ಗೆ ಹಸಿವು, ಅವಮಾನ, ಬಡತನದ ಬದುಕೇ ಗೊತ್ತಿಲ್ಲ. ಜೊತೆಗೆ ದೇಶದ ಶಾಸಕಾಂಗ, ನ್ಯಾಯಾಂಗ ಮತ್ತು ಕಾರ್ಯಾಂಗದ ಬಗ್ಗೆ ಭಯವಿಲ್ಲ. ಪತ್ರಿಕಾಂಗವೂ ಪ್ರಶ್ನಿಸುತ್ತಿಲ್ಲ. ಅಧಿಕಾರ, ಹಣ ಮತ್ತು ಜಾತಿ ಮದವೇರಿ, ಅಸಹಾಯಕ ಹೆಣ್ಣುಮಕ್ಕಳನ್ನು ದುರುಪಯೋಗಪಡಿಸಿಕೊಂಡರೂ, ಯಾರೂ ಕೇಳಲಿಲ್ಲ. ಇದೆಲ್ಲವೂ ಗೊತ್ತಿದ್ದ ದೇವೇಗೌಡರು ಪ್ರಜ್ವಲ್ ಕರೆದು ಕಿವಿಹಿಂಡಲಿಲ್ಲ. ಅಭ್ಯರ್ಥಿಯಾಗಬೇಡ ಎಂದು ಹೇಳಲಿಲ್ಲ. ರಾಷ್ಟ್ರಪಿತ ಮಹಾತ್ಮಾ ಗಾಂಧಿ, 'ನಾನು ಹತಾಶನಾದಾಗಲೆಲ್ಲ ಒಂದನ್ನು ಜ್ಞಾಪಿಸಿಕೊಳ್ಳುತ್ತೇನೆ- ಈ ಜಗತ್ತಿನಲ್ಲಿ ಸತ್ಯ ಮತ್ತು ಪ್ರೀತಿ ಎರಡೇ ಗೆಲ್ಲುವುದು. ಕೊಲೆಗಡುಕರು, ಪಾಪಿಗಳು ಅಜೇಯರಂತೆ ಕಾಣಬಹುದು. ಕೊನೆಗೊಂದು ದಿನ ನಾಶವಾಗುತ್ತಾರೆ. ಈ ಬಗ್ಗೆ ಚಿಂತಿಸು' ಎಂದಿದ್ದಾರೆ.


# ಮಹಾಭಾರತ
## ಭೀಷ್ಮಪರ್ವ



• ಹಿಂದಿನ ಸಂಚಿಕೆಯಿಂದ

ಯುದ್ಧದುದ್ದಕ್ಕೂ ತ್ರಿಗರ್ತರು ಅರ್ಜುನನಿಗೆ ದೊಡ್ಡ ತಲೆನೋವಾಗಿದ್ದರು. ಯಾ ಇವಾಗ ಅವನು ಮುಖ್ಯರಾದನೊಬ್ಬನ ಜೊತೆಗೆ ಹೋರಾಡಬೇಕೆಂದು ಪ್ರಯತ್ನಿಸಿದರೂ, ಸಂಶಪ್ತಕರು ಅವನನ್ನು ಎದುರಿಸಿ ಗಂಟೆಗಟ್ಟಲೆ ನಿಲ್ಲಿಸಿಕೊಂಡು ಬಿಡುತ್ತಿದ್ದರು. ಈ ಹೊತ್ತೂ ಹಾಗೆಯೇ ಆಯಿತು. ಅವರ ಸೈನ್ಯದ ಬಹುಭಾಗವನ್ನು ನಾಶಮಾಡದೆ ಅವನು ಅತ್ತಿತ್ತ ಚಲಿಸುವಂತಿರಲಿಲ್ಲ. ಇಂದು ಅವರಲ್ಲಿ ಕೆಲವರನ್ನು ಕೊಂದರೂ, ನಾಳೆ ಮತ್ತೆ ಕೆಲವರು ಎಲ್ಲಿಂದಲೋ ಪ್ರತ್ಯಕ್ಷರಾಗಿ ಅವನನ್ನೆದುರಿಸಿ ನಿಲ್ಲುತ್ತಿದ್ದರು. ಇನ್ನೂ ಕೊಲ್ಲುವುದಕ್ಕಾಗಿರದ ಸುಶರ್ಮನೇ ಇಂದು ಅರ್ಜುನನಿಗೆ ಅಡ್ಡಿಯಾಗಿದ್ದನು. ಅವನಿಗೆ ದಿವ್ಯಾಸ್ತ್ರಗಳೂ ತಿಳಿದಿದ್ದರಿಂದ, ಅರ್ಜುನನು ತ್ರಿಗರ್ತರೊಡನೆ ಬಹಳ ಹೊತ್ತು ಹೋರಾಡಿ ಅವರ ಸೈನ್ಯದ ಅರ್ಧಕ್ಕಿಂತಲೂ ಹೆಚ್ಚನ್ನು ನಾಶಮಾಡಬೇಕಾಯಿತು. ಅಷ್ಟರಲ್ಲಿ ತಿರುಗಿ ನೋಡಿದರೆ ರಾಧೇಯ. ಅರ್ಜುನನು ಗಮನಿಸುತ್ತಿದ್ದಂತೆ, ರಾಧೇಯನು ತಮ್ಮ ಕಡೆಯ ವೀರರಲ್ಲಿ ಒಬ್ಬೊಬ್ಬರನ್ನೂ ಪ್ರತ್ಯೇಕಯಾಗಿ ಸೋಲಿಸಿದ್ದನು. ಮನಸ್ಸಿನಲ್ಲೇ ಅವನ ಶೌರ್ಯವನ್ನು ಮೆಚ್ಚಿಕೊಂಡ ಅರ್ಜುನನು ಹಾಗೆಂದು ಕೃಷ್ಣನಿಗೆ ಹೇಳಿ, ತನ್ನನ್ನು ರಾಧೇಯನ ಬಳಿಗೆ ಕರೆದೊಯ್ಯುವಂತೆ ಕೇಳಿಕೊಂಡನು. ಅಷ್ಟರಲ್ಲಿ ಅಶ್ವತ್ಥಾಮನು ಬಂದು ಸೆಣೆಸಿ ನಿಂತುದರಿಂದ ಅವನೊಡನೆ ದ್ವಂದ್ವಯುದ್ಧಕ್ಕೆ ನಿಲ್ಲಬೇಕಾಯಿತು. ಸ್ವಲ್ಪಹೊತ್ತಿನಲ್ಲಿಯೇ ಅಶ್ವತ್ಥಾಮನು ಅರ್ಜುನನ ರಥವನ್ನು ಬಾಣಗಳಿಂದ ಮುಚ್ಚಿಬಿಟ್ಟನು. ಕೃಷ್ಣನಿಗೆ ಕೋಪಬಂದಿತು. ''ಇನ್ನೂ ನಿನಗೆ ಗುರುವಿನ ಹಾಗೂ ಗುರುಪುತ್ರನ ಮೇಲೆ ಮೋಹವು ಹೋಗಿಲ್ಲ. ನಾನು ಇದುವರೆಗೂ ನಿನಗೆ ಹೇಳಿದ್ದೆಲ್ಲವೂ ವ್ಯರ್ಥ. ನನ್ನ ಮಾತಿಗಿಂತಲೂ ನಿನಗೆ ಇವರಿಬ್ಬರ ಮೇಲಿನ ಮೂರ್ಖ ಪ್ರೇಮವೇ ಹೆಚ್ಚು. ಅವರನ್ನು ನೋಡಿದೊಡನೆ ನಿನ್ನ ಕೈಗಳು ಹಿಂದೆಗೆಯುತ್ತವೆ, ಬೆರಳಿಗೆ ಜೋಮು ಹಿಡಿಯುತ್ತದೆ, ಗಾಂಡೀವವು ವಿಶ್ರಾಂತಿಯನ್ನು ಬೇಡುತ್ತದೆ; ಅಶ್ವತ್ಥಾಮನಿಂದ ಹೊಡೆಸಿಕೊಳ್ಳುವುದೆಂದರೆ ನಿನಗೆ ಆನಂದವಲ್ಲವೆ? ಕಾಲ ಬಂದಾಗ ಯುದ್ಧಮಾಡದೆ ಮೃದುವಾಗುವುದನ್ನು ನಾನೊಪ್ಪುವುದಿಲ್ಲ. ನೀನು ಮೊದಲಿನಿಂದಲೂ ಹೀಗೆಯೇ ಮಾಡುತ್ತ ಬಂದಿರುವೆ. ಒಳ್ಳೆಯ ಹೊತ್ತಿನಲ್ಲಿ ಕರ್ತವ್ಯವನ್ನು ಮರೆಯುವೆ ಎಂದನು. ಅರ್ಜುನನು ಕೃಷ್ಣನ ಭರ್ತ್ಸನೆಯ ಮಾತುಗಳನ್ನು ಸಹಿಸಲಾರದೆ ಹೋದನು. ಕೋಪದಿಂದ ಯುದ್ಧಮಾಡಿ, ಕವಿದಿದ್ದ ಬಾಣಗಳ ಮಂಟಪವನ್ನು ಹರಿದೊಗೆದು, ದಿವ್ಯಾಸ್ತ್ರಗಳನ್ನು ಬಳಸಿ ಅಶ್ವತ್ಥಾಮನನ್ನು ಸೋಲಿಸಿಬಿಟ್ಟನು. ಬಳಲಿದ ಅಶ್ವತ್ಥಾಮನನ್ನು ಅವನ ಕುದುರೆಗಳು ರಣರಂಗದಿಂದ ದೂರಕ್ಕೆ ಕರೆದುಕೊಂಡು ಹೋದವು. ದುರ್ಯೋಧನನ ಕಡೆಗೆ ಇತರ ವೀರರ ಕಡೆಗೂ ಅರ್ಜುನನು ಗಮನಹರಿಸಿದನು. ಮಗಧ ರಾಜನಾದ ದಂಡಧರನನ್ನೂ ಅವನ ತಮ್ಮ ದಂಡನನ್ನೂ ಕೊಂದನು. ಸಂಶಪ್ತಕರೊಡನೆ ಮತ್ತೊಮ್ಮೆ ಹೋರಾಡಿದನು. ರಾಧೇಯನ ಕಡೆಗೆ ಹೋಗೋಣ, ಅವನನ್ನಿಂದು ಕೊಲ್ಲಬೇಕಾಗಿದೆ ಎಂದು ಕೃಷ್ಣನು ಹೇಳುವಷ್ಟರಲ್ಲಿ, ಅಶ್ವತ್ಥಾಮನಿಗೂ ಪಾಂಡ್ಯರಾಜನಿಗೂ ದ್ವಂದ್ವಯುದ್ಧವಾಗುತ್ತಿರುವುದು ಕಾಣಿಸಿತು. ತಾನೇ ಮಹಾವೀರನೆಂದುಕೊಂಡಿದ್ದ ಅವನನ್ನು ಅಶ್ವತ್ಥಾಮನು ಕೊಂದುಹಾಕಿದನು. ರಾ-ಧೇಯನು ತಮ್ಮ ಸೈನ್ಯದ ಬಹುಭಾಗವನ್ನು ನಾಶಮಾಡಿರುವುದನ್ನು ಅರ್ಜುನನು ಗಮನಿಸಿದನು. ಈಗ ಅಶ್ವತ್ಥಾಮನು ದ್ವಂದ್ವದಲ್ಲಿ ಧೃಷ್ಟದ್ಯುಮ್ನನನ್ನು ಕೊಲ್ಲಲು ಯತ್ನಿಸುತ್ತಿದ್ದನು. ಅರ್ಜುನನು ಸಂಕುಲಯುದ್ಧದಲ್ಲಿ ಸೇರಿಕೊಂಡುದರಿಂದ ಸೈನಿಕರಿಗೆ ಸ್ಫೂರ್ತಿಯುಂಟಾಯಿತು. **ಮುಂದುವರಿಯುವುದು...**

# ನೃತ್ಯ ಗುರು ಸಹನಾ ಚೇತನಾರವರ ಕವಿ ಕಂಡ ಯುಗಾದಿ ಸಂಪಾದನಾ ಕೃತಿಯ ಪರಿಚಯ



ಸಾಮಾಜಿಕ ಕಳಕಳಿ
**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ
ಶಿಕ್ಷಕಿ, ಹಾಸನ

• ಉದಯವಾಹಿನಿ ವಿಶೇಷ

ಯುಗಾದಿ ಎಂಬ ಶೀರ್ಷಿಕೆ ಒಳಗೊಂಡ ಕವನದಲ್ಲಿ

**ಯುಗಾದಿ ಬಂದಿದೆ ಯುಗಾದಿ ಬಂದಿದೆ**
**ಗಿಡಮರ ಚಿಗುರಿಗೆ ಹೂ ಅರಳಿ**
**ಶಿಶಿರನು ತಂದಿಹ ಹೊಸತನ ಬೆಳಗಿದೆ**
**ಚಿಗುರನು ಹೊನ್ನಿನ ಬಣ್ಣದಲಿ...**

ಇದು ಮೈತ್ರಿ ರವರ ಕವನವಾಗಿದ್ದು ಬಹಳಷ್ಟು ಸೊಗಸಾಗಿದೆ. ನೋಡಿ ಕವಿಯ ಮನೋಭಾವ ಹೇಗಿದೆ ಎಂದರೆ ಹಿಂದೂಗಳ ಹೊಸ ವರ್ಷದ ಯುಗಾದಿಯು ಬಂದಿದೆ. ಈ ಸಮಯದಲ್ಲಿ ಗಿಡಮರ ಚಿಗುರುತ್ತದೆ. ಮತ್ತು ಶಿಶಿರನು ತಂದೆಯ ಹೊಸತನವನ್ನು ಬೆಳಗಿದೆ ಎಂದು ತಿಳಿಸಿದ್ದಾರೆ. ಚಿಗುರನ್ನು ಹೊನ್ನಿನ ಬಣ್ಣಕ್ಕೆ ಹೋಲಿಸಿದ್ದಾರೆ. ಹಲವಾರು ಕವನಗಳಲ್ಲಿ ಇನ್ನೊಂದು ಕವನವೆಂದರೆ ಯುಗಾದಿ ಹಬ್ಬದ ಸಡಗರ ಎಂಬ ಶೀರ್ಷಿಕೆಯ ಕವನ

**ನಸುಕಿನ ಸಮಯದಲ್ಲೆಲ್ಲರೂ ಬೇಗ**
**ಬಿಸಿ ಬಿಸಿ ನೀರಿನಲಿ ಜಳಕವ ಮಾಡಿದರು**
**ಹೊಸ ಹೊಸ ಭಾವದಿ ಬೇವುಬೆಲ್ಲ ತಿನ್ನುತಲಿ**
**ಬೆಸೆಯಿತು ಮನದಲ್ಲಿ ಸ್ನೇಹದ ಕಡಲು**

ಇದು ನಾನು ಬರೆದ ಕವನ ಈ ಸಂಕಲನದಲ್ಲಿ ಸೇರಿದ್ದು ಪ್ರತಿಯೊಬ್ಬರೂ ಇಷ್ಟಪಡುವಂತಹ ಸಾಲುಗಳಾಗಿದೆ. ಮನೆಯ ಜವಾಬ್ದಾರಿಯನ್ನು ಆಗುತ್ತಾ ಹೆಂಗಸಿಗೆ ಮನೆಯದೇ ಚಿಂತೆ ಎಂಬಂತೆ ಹಬ್ಬದ ಪ್ರಾರಂಭದ ವಿಚಾರವನ್ನು ತಿಳಿಸಿದ್ದೇನೆ. ಅವುಗಳಲ್ಲಿ ವಿದ್ಯಾರ್ಥಿನಿಯರ ಕವನಗಳನ್ನು ಗಮನಿಸಿದರೆ ನಾ ಕಂಡ ಯುಗಾದಿ ಎಂಬ ಶೀರ್ಷಿಕೆಯನ್ನು ಒಳಗೊಂಡಂತಹ ಕವನವನ್ನು ಗಮನಿಸಬಹುದು.

ಬಂದಿತು ಬಂದಿತು ನಮ್ಮ ಹೊಸ ವರ್ಷದ ಆದಿ ಅದೇ ನಮ್ಮ ಯುಗಾದಿ ತಳಿರು ತೋರಣಗಳಿಂದ ಮನೆಯ ಸಿಂಗರಿಸಿ ಮನೆ ಮಂದಿಗೆಲ್ಲ ಬೇವು ಬೆಲ್ಲ ಹಂಚಿ ಸಂಭ್ರಮಿಸಿ 6ನೇ ತರಗತಿಯ ಸಂಸ್ಕೃತಿ ರವರು ಬರೆದಂತಹ ಕವನವೆಂದರೆ ಕಟ್ಟ ಕಡೆಯ ಕವನ ಮತ್ತೆ


ಉದಯವಾಹಿನಿ ಚಿತ್ರ

ಬಂತು ಯುಗಾದಿ ಹಬ್ಬ ಎಂಬ ಶೀರ್ಷಿಕೆಯನ್ನು ಒಳಗೊಂಡಂತಹ ಕವನವನ್ನು ಗಮನಿಸಿದರೆ


**ಹಿಂದೂಗಳ ಹೊಸ ವರ್ಷವೂ ಇದು**
**ಪ್ರೀತಿ ಪ್ರೇಮದಲಿ ಆಚರಿಸುವೆವು**
**ಕಷ್ಟ ಸುಖಗಳ ಸಮಪಾಲು ಬೇಡುವೆವು**
**ಬೇವು ಬೆಲ್ಲವನ್ನು ಸವಿಯುವೆವು**

ಬಂತು ಯುಗಾದಿ ಹಬ್ಬ ಎಂಬ ಕವನವು ಕೊನೆಯದಾಗಿದ್ದು. ಇದರಲ್ಲಿ ಯುಗಾದಿ ಹಬ್ಬಗಳು ಹಿಂದೂಗಳ ಹಬ್ಬ ಎಂದು ತಿಳಿಸಿದೆ. ಪ್ರೀತಿ ಪ್ರೇಮದಲ್ಲಿ ಹಬ್ಬವನ್ನು ಆಚರಿಸಬೇಕೆಂದು ತಿಳಿಸಲಾಗಿದೆ. ಕಷ್ಟ ಸುಖಗಳ ಸಮಪಾಲು ಬೇಡುವೆವು ದೇವರಲ್ಲಿ ಎಂದು ಬೇವುಬೆಲ್ಲವನ್ನು ಸವಿಯಬೇಕು ಎಂದು ತಿಳಿಸಲಾಗಿದೆ. ಈ ಕವನವು ಏಳನೇ ತರಗತಿಯ ಕು ಟೀಷ್ಮಾ ಗೌಡ. ಕೆ. ಆರ್. ರಚಿಸಿದ್ದು ಬಹಳಷ್ಟು ಸೊಗತಾಗಿದೆ. ನಾನು ಈ ಮೇಲ್ಕಂಡ ಅಂಶಗಳನ್ನು ಒಳಗೊಂಡಂತೆ ಹೆಚ್ಚಿನ ಪ್ರಾಮುಖ್ಯತೆಯನ್ನು ಯುವ ಪ್ರತಿಭೆಗಳಾದಂತಹ ವಿದ್ಯಾರ್ಥಿಗಳಿಗೆ ನೀಡಿದ್ದೇನೆ.

ಏಕೆಂದರೆ ಈ ವಯಸ್ಸಿಗೆ ಆ ಮಕ್ಕಳು ಕವನಗಳನ್ನು ರಚಿಸುವಲ್ಲಿ ಯಶಸ್ವಿಯಾಗಿರುವುದನ್ನ ಕಂಡರೆ ಶ್ರೀಮತಿ ಸಹನಾ ಚೇತನ್ ರವರ ಶ್ರಮಕ್ಕೆ ಪ್ರತಿಫಲ ಸಿಕ್ಕಿದೆ ಎಂಬುದು ಇಲ್ಲಿ ತಿಳಿಯುತ್ತದೆ. ಅವರ ಈ ಪ್ರೋತ್ಸಾಹದ ಕಾರ್ಯವು ಮುಂದುವರೆಯುತ್ತಲೇ ಇರಲಿ ಎಂದು ಆಶಿಸುತ್ತಾ. ಹೀಗೆ ಇನ್ನು ಹೆಚ್ಚು ಸಾಹಿತ್ಯ ಸೇವೆಯಲ್ಲೂ ಸಹ ಗಮನ ಹರಿಸಲಿ ಎಂದು ಆಶಿಸುತ್ತೇನೆ. ಅವರ ಮುಂದಿನ ಭವಿಷ್ಯ ಉಜ್ವಲವಾಗಿರಲಿ ಎಂದು ಹಾರೈಸುತ್ತೇನೆ.

# ಸಿಲಿಕಾನ್ ಸಿಟಿಯಲ್ಲಿ ಕಿಡ್ನಿ ಸಮಸ್ಯೆ ಹೆಚ್ಚಳ ಆಸ್ಪತ್ರೆ ದಾಖಲಾಗುವವರ ಸಂಖ್ಯೆ ದುಪ್ಪಟ್ಟು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಿಲಿಕಾನ್ ಸಿಟಿಯಲ್ಲಿ ಕಿಡ್ನಿ ಸಮಸ್ಯೆಗಳು ಹೆಚ್ಚಳವಾಗಿದೆ. ಕಿಡ್ನಿ ತೊಂದರೆಗೆ ಒಳಗಾಗುವವರ ಸಂಖ್ಯೆ ಬೆಂಗಳೂರಿನಲ್ಲಿ ಕಳೆದ ಕೆಲವು ದಿನಗಳಿಂದ ದುಪ್ಪಟ್ಟಾಗಿದೆ. ಮಹಿಳೆಯರಿಗಿಂತ ಪುರುಷರಲ್ಲಿ ಮೂರು ಪಟ್ಟು ಸಮಸ್ಯೆ ಹೆಚ್ಚು ಕಂಡು ಬಂದಿದ್ದು ವೈದ್ಯರು ಎಚ್ಚರಿಕೆಯಿಂದ ಇರುವಂತೆ ತಿಳಿಸಿದ್ದಾರೆ.

**ಬೇಸಿಗೆಯಲ್ಲಿ ಕಿಡ್ನಿ ಸ್ಟೋನ್ ಉಂಟಾಗಲು ಕಾರಣವೇನು?:** ದೇಹದಲ್ಲಿನ ನಿರ್ಜಲೀಕರಣ. ಮನುಷ್ಯನ ದೇಹಕ್ಕೆ ದಿನವೊಂದಕ್ಕೆ 3ರಿಂದ 4 ಲೀ. ನೀರು ಅಗತ್ಯ. ಬೇಸಿಗೆಯಲ್ಲಿ ಬೆವರು ಹೆಚ್ಚಾಗಿ ಹೋಗುವ ಜೊತೆಗೆ ದೇಹದಲ್ಲಿರುವ ನೀರಿನ ಅಂಶವನ್ನು ಕಸಿದುಕೊಳ್ಳುತ್ತದೆ ಇದು ನೇರವಾಗಿ ಮೂತ್ರದ ಸೋಂಕು ಹಾಗೂ ಕಿಡ್ನಿ ಸ್ಟೋನ್‌ಗೆ ಕಾರಣ ಮೂತ್ರದಿಂದ ಫಿಲ್ಟರ್ ಮಾಡಲಾದ ಕ್ಯಾಲ್ಸಿಯಂ ಮತ್ತು ಇತರ ವಸ್ತುಗಳಿಂದ ಕಿಡ್ನಿ ಸ್ಟೋನ್ ರೂಪುಗೊಳ್ಳುತ್ತವೆ.

**ವಿಶೇಷವಾಗಿ ಮಹಿಳೆಯರಲ್ಲಿ ಉರಿ ಮೂತ್ರದ ಸಮಸ್ಯೆ ಹೆಚ್ಚಾಗಿ ಇರುತ್ತದೆ:** ಆದರೆ ಪುರುಷರಲ್ಲಿ ಕಿಡ್ನಿ ಸ್ಟೋನ್ ಕಾಣಿಸಿಕೊಳ್ಳುತ್ತದೆ. ಏನು ಮಾಡಬೇಕು? ಮೂತ್ರ ವಿಸರ್ಜನೆಯನ್ನು ತಡೆಯಬಾರದು. ದಿನಕ್ಕೆ 2ರಿಂದ 3 ಲೀಟರ್‌ನಷ್ಟು ನೀರು ಅವಶ್ಯವಾಗಿ ಕುಡಿಯಬೇಕು ಬೆಂಗಳೂರು ನಗರದಲ್ಲಿ ಈ ಹಿಂದೆ ಯಾವ ಬೇಸಿಗೆ ಸಂದರ್ಭದಲ್ಲೂ ಈ ಮಟ್ಟಿಗೆ ಕಿಡ್ನಿ ಸಮಸ್ಯೆಯ ಕೇಸ್ ದಾಖಲಾಗಿರಲಿಲ್ಲ ಎನ್ನುತ್ತಾರೆ ವೈದ್ಯರು. ಸುಮಾರು ಶೇ 49 ರಿಂದ 50 ರಷ್ಟು ಕೇಸುಗಳ ಸಂಖ್ಯೆ ಹೆಚ್ಚಾಗಿದೆ ಎಂದು ಅವರು ಹೇಳಿದ್ದಾರೆ. ಸಾಮಾನ್ಯ ಅವಧಿಗಿಂತ ಬೇಸಿಗೆಯಲ್ಲಿ ಶೇ 50 ರಷ್ಟು ಪ್ರಕರಣ ಹೆಚ್ಚು ಕಂಡು ಬಂದಿರುವುದು ಜನರ ಆತಂಕಕ್ಕೆ ಕಾರಣ ಆಗಿದೆ. ಬಿಸಿಲಿಗೆ ಬೆವರು, ನೀರಿನಾಂಶದ ಕೊರತೆ ಮೂತ್ರದಲ್ಲಿ ಸೋಂಕು ಹಾಗೂ ಕಿಡ್ನಿ ಸ್ಟೋನ್ ಪ್ರಕರಣ ಹೆಚ್ಚಳ ಕಂಡು ಬರುತ್ತಿದೆ.

# 14 ಕ್ಷೇತ್ರಗಳಲ್ಲಿ ಬಹಿರಂಗ ಪ್ರಚಾರ ಭಾನುವಾರ ಅಂತ್ಯ

• ಉದಯವಾಹಿನಿ, ಬೆಂಗಳೂರು



ಕರ್ನಾಟಕದ 14 ಲೋಕಸಭಾ ಕ್ಷೇತ್ರಗಳಲ್ಲಿ ಮೇ 7ರ ಮಂಗಳವಾರ ಮತದಾನ ನಡೆಯಲಿದೆ. ಮತದಾನದ 48 ಗಂಟೆಗಳ ಮೊದಲು ಅಂದರೆ ಭಾನುವಾರ ಸಂಜೆ ಬಹಿರಂಗ ಪ್ರಚಾರಕ್ಕೆ ತೆರೆ ಬೀಳಲಿದೆ. ಮತದಾನದ ದಿನಕ್ಕಾಗಿ ಜಿಲ್ಲಾ ಚುನಾವಣಾಧಿಕಾರಿಗಳು ಅಂತಿಮ ಹಂತದ ಸಿದ್ಧತೆಗಳನ್ನು ಕೈಗೊಂಡಿದ್ದಾರೆ.

ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಪೈಕಿ 14 ಕ್ಷೇತ್ರಗಳಿಗೆ ಏಪ್ರಿಲ್ 26ರಂದು ಮತದಾನ ನಡೆದಿತ್ತು. ಉಳಿದ 14 ಲೋಕಸಭಾ ಕ್ಷೇತ್ರಗಳಿಗೆ ದೇಶದ 3ನೇ ಹಂತ ಮತ್ತು ಕರ್ನಾಟಕದ 2ನೇ ಹಂತದಲ್ಲಿ ಮೇ 7ರಂದು ಮತದಾನ ನಡೆಯುತ್ತಿದೆ. ಈಗಾಗಲೇ ಮತದಾನ ಪೂರ್ಣಗೊಳ್ಳುವ 72 ಮತ್ತು 48 ಗಂಟೆ ಪೂರ್ವದಲ್ಲಿ ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳು ಚುನಾವಣಾ ಆಯೋಗದ ನಿಯಮ ನಿಬಂಧನೆಗಳನ್ನು ತಪ್ಪದೇ ಪಾಲಿಸಬೇಕು ಎಂದು ಮಾಹಿತಿ ನೀಡಲಾಗಿದೆ. ನಿಯಮ ಉಲ್ಲಂಘಿಸಿದಲ್ಲಿ ಪ್ರಜಾಪ್ರತಿನಿಧಿ ಕಾಯ್ದೆ ಪ್ರಕಾರ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಲಾಗಿದೆ. ಯಾವ-ಯಾವ ನಿಯಮಗಳು? ಚುನಾವಣಾ ಆಯೋಗ ಮೇ 5ರ ಭಾನುವಾರ ಸಂಜೆ 6 ಗಂಟೆಯಿಂದ ಮತದಾನ ದಿನವಾದ ಮೇ 7 ರಂದು ಮತದಾನ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಅಭ್ಯರ್ಥಿಗಳು ಪಾಲಿಸಬೇಕಾದ ನಿಯಮಾವಳಿಗಳನ್ನು ಹಾಗೂ ನಿಷೇಧಿಸಲಾಗಿರುವ ವಿಷಯಗಳ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಿದೆ. ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳು ಅವುಗಳನ್ನು ತಪ್ಪದೇ ಪಾಲಿಸಬೇಕೆಂದು ಸೂಚಿಸಿದೆ. ಮತದಾನ ಶಾಂತಿಯುತವಾಗಿ, ನಿರ್ಭಯ, ಮುಕ್ತ ಮತ್ತು ಪಾರದರ್ಶಕವಾಗಿ ನಡೆಯಲು ಮತದಾರಸ್ನೇಹಿ ವಾತಾವರಣ ರೂಪಿಸಲು ವಿವಿಧ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮತದಾನ ಮುಕ್ತಾಯವಾಗುವ ಪೂರ್ವದ 72 ಮತ್ತು 48 ಗಂಟೆಗಳಲ್ಲಿ ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳು ತಪ್ಪದೇ ಪಾಲಿಸಬೇಕಾದ ನಿಯಮಗಳು ಮುಖ್ಯವಾಗಿವೆ. ಈ ಸಂದರ್ಭದಲ್ಲಿ ನಡೆಯುವ ರಾಜಕೀಯ ಚಟುವಟಿಕೆಗಳ ನಿಗಾವಹಿಸಲು ಹೆಚ್ಚುವರಿ ತಪಾಸಣಾ ತಂಡಗಳನ್ನು ರಚಿಸಲಾಗಿದೆ.

ಮತದಾನ ಮುಕ್ತಾಯದ ಸಮಯದೊಂದಿಗೆ ಕೊನೆಗೊಳ್ಳುವ 48 ಗಂಟೆಗಳ ಅವಧಿಯಲ್ಲಿ ಯಾವುದೇ ಧ್ವನಿವರ್ಧಕವನ್ನು ಬಳಸಲು ಅನುಮತಿ ಇರುವುದಿಲ್ಲ. ಚುನಾವಣಾ ಪ್ರಚಾರದ ಅವಧಿ ಮುಗಿದ ನಂತರ, ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಪ್ರಚಾರ ನಡೆಸುವಂತಿಲ್ಲ. ಪ್ರಚಾರಕ್ಕಾಗಿ ಜಿಲ್ಲೆಯಲ್ಲಿ ಇದ್ದ ರಾಜಕೀಯ ಪಕ್ಷಗಳ ಕಾರ್ಯಕರ್ತರು, ಪಕ್ಷದ ಪದಾಧಿಕಾರಿಗಳು, ಕ್ಷೇತ್ರದ ಹೊರಗಿನಿಂದ ಕರೆತಂದಿರುವ ಕಾರ್ಯಕರ್ತರು ಮತಕ್ಷೇತ್ರದ ಮತದಾರ ಆಗಿರದಿದ್ದಲ್ಲಿ ಅವರೆಲ್ಲರೂ ಜಿಲ್ಲೆಯಿಂದ ಹೊರಹೋಗಬೇಕಿದೆ.

ಪ್ರಜಾ ಪ್ರತಿನಿಧಿ ಕಾಯ್ದೆಯ ಪರಿಚ್ಛೇದ 126(1)(ಬಿ) ಪ್ರಕಾರ ಮತದಾನ ಪೂರ್ಣಗೊಳ್ಳುವ 48 ಗಂಟೆ ಮೊದಲು ಯಾವುದೇ ವ್ಯಕ್ತಿ ಯಾವುದೇ ಮತದಾನದ ಪ್ರದೇಶದಲ್ಲಿ ವಿಡಿಯೋ, ದೂರದರ್ಶನ ಅಥವಾ ಇತರ ರೀತಿಯ ಉಪಕರಣಗಳ ಮೂಲಕ ಯಾವುದೇ ಚುನಾವಣಾ ವಿಷಯವನ್ನು ಸಾರ್ವಜನಿಕರಿಗೆ ತೋರಿಸಲು ಅವಕಾಶವಿಲ್ಲ. ಇದನ್ನು ಚುನಾವಣಾ ಆಯೋಗ ನಿರ್ಬಂಧಿಸಿದ್ದು, ಉಲ್ಲಂಘಿಸಿದಲ್ಲಿ ನಿಯಮಾವಳಿ ಪ್ರಕಾರ ಕ್ರಮ ಕೈಗೊಳ್ಳಲಾಗುತ್ತದೆ.

# ಮೈತ್ರಿಗೆ ಮುಳುವಾಗುತ್ತಾ ಪ್ರಜ್ವಲ್ ಪೆನ್‌ಡ್ರೈವ್ ಪ್ರಕರಣ?

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜಕೀಯ ಲೆಕ್ಕಾಚಾರಗಳನ್ನೆಲ್ಲ ದೇವೇಗೌಡರ ಕುಟುಂಬದ ಕುಡಿ ಪ್ರಜ್ವಲ್ ರೇವಣ್ಣರ ಅಶ್ಲೀಲ ಪೆನ್ ಡ್ರೈವ್ ಪ್ರಕರಣ ಬುಡಮೇಲು ಮಾಡಿದೆ. ಇದು ಇಷ್ಟು ವರ್ಷಗಳ ಸುಧೀರ್ಘ ರಾಜಕಾರಣ ಮಾಡಿದ ಮಾಜಿ ಪ್ರಧಾನಿ ದೇವೇಗೌಡ ಸೇರಿದಂತೆ ಇಡೀ ಕುಟುಂಬಕ್ಕೆ ಕಪ್ಪು ಚುಕ್ಕೆಯಾಗಿ ಉಳಿದು ಹೋಗುವುದರೊಂದಿಗೆ ಮುಂದಿನ ದಿನಗಳಲ್ಲಿ ಹಾಸನದ ರಾಜಕೀಯ ಅಧಿಪತ್ಯ ಗೌಡರ ಕುಟುಂಬದಿಂದ ಕೈತಪ್ಪಿ ಹೋಗುವ ಎಲ್ಲಾ ಲಕ್ಷಣಗಳು ಕಂಡು ಬರಲಾರಂಭಿಸಿವೆ. ಪ್ರಜ್ವಲ್ ರೇವಣ್ಣರ ಲೈಂಗಿಕ ದೌರ್ಜನ್ಯ ಪ್ರಕರಣ ಕೇವಲ ದೇವೇಗೌಡ ಕುಟುಂಬ ಮತ್ತು ಜೆಡಿಎಸ್ ಪಕ್ಷಕ್ಕೆ ಮಾತ್ರ ಮುಜುಗರ ತರದೆ ಮೈತ್ರಿ ಮಾಡಿಕೊಂಡಿರುವ ಬಿಜೆಪಿಯೂ ಇದರ ಫಲವುಣ್ಣಬೇಕಾದ ಪರಿಸ್ಥಿತಿಗೆ ಬಂದು ನಿಂತಿದೆ.

ಹೀಗಾಗಿಯೇ ಕಮಲ ನಾಯಕರು ಪ್ರಕರಣವನ್ನು ಸಮರ್ಥಿಸಿಕೊಳ್ಳಲಾಗದೆ, ವಿರೋಧಿಸಲೂ ಸಾಧ್ಯವಾಗದೆ ವಿಲವಿಲ ಒದ್ದಾಡುವಂತಾಗಿದೆ. ರಾಜ್ಯದಲ್ಲಿ ಬಿಜೆಪಿಯನ್ನು ವಿರೋಧಿಸುತ್ತಲೇ ಅವರೊಂದಿಗೆ ಅಧಿಕಾರ ಹಂಚಿಕೊಂಡು ನಂತರದ ಬೆಳವಣಿಗೆಯಲ್ಲಿ ಅವರಿಂದ ದೂರವಾಗಿ ಅವರ ವಿರುದ್ಧವೇ ರಾಜಕೀಯ ಮಾಡಿಕೊಂಡು ಬಂದಿದ್ದ ಎಚ್.ಡಿ.ದೇವೇಗೌಡರ ಕುಟುಂಬದ ಮೇಲೆ ಕುಟುಂಬ ರಾಜಕಾರಣದ ಆರೋಪ ದೊಡ್ಡಮಟ್ಟದಲ್ಲಿಯೇ ಇತ್ತು. ಪುತ್ರರಾದ ಹೆಚ್.ಡಿ.ರೇವಣ್ಣ ಅವರಂತು ತಮ್ಮ ಪತ್ನಿ ಮತ್ತು ಮಕ್ಕಳನ್ನು ರಾಜಕೀಯಕ್ಕೆ ತರುವುದರ ಮೂಲಕ ಇಡೀ ಹಾಸನದಲ್ಲಿ ರಾಜಕೀಯವಾಗಿ ಪ್ರಭಾವಿಗಳಾಗಿ ಬೆಳೆದು ನಿಂತಿದ್ದರು.

ಮಕ್ಕಳು ಮಾತ್ರವಲ್ಲದೆ ಮೊಮ್ಮಕ್ಕಳನ್ನು ರಾಜಕೀಯಕ್ಕೆ ತರಬೇಕೆಂಬ ಅಭಿಲಾಷೆಯಿಂದ ಕಳೆದ ಬಾರಿ ಕಾಂಗ್ರೆಸ್ ಜತೆಗೆ ಮೈತ್ರಿ ಮಾಡಿಕೊಂಡ ಸಂದರ್ಭ ದೇವೇಗೌಡರು ಮೊಮ್ಮಗ ಪ್ರಜ್ವಲ್ ರೇವಣ್ಣ ಮತ್ತು ನಿಖಿಲ್ ಕುಮಾರಸ್ವಾಮಿ ಅವರನ್ನು ರಾಜಕೀಯಕ್ಕೆ ಕರೆ ತಂದಿದ್ದರು. ಮೊಮ್ಮಗ ಪ್ರಜ್ವಲ್ ರೇವಣ್ಣ ಅವರ ಮೇಲೆ ತುಸು ಜಾಸ್ತಿ ಒಲವು ಹೊಂದಿದ ಕಾರಣದಿಂದಾಗಿ ದೇವೇಗೌಡರು ವಂಶದ ಕುಡಿ ದೆಹಲಿ ರಾಜಕಾರಣಕ್ಕೆ ತೆರಳಲೇ ಬೇಕೆಂಬ ಕಾರಣಕ್ಕೆ ತಾವು ಸ್ಪರ್ಧಿಸಿ ಗೆಲ್ಲುತ್ತಿದ್ದ ಹಾಸನ ಕ್ಷೇತ್ರವನ್ನು ಬಿಟ್ಟುಕೊಟ್ಟು ತುಮಕೂರಿನತ್ತ ಮುಖ ಮಾಡಿದ್ದರು.

ಕಳೆದ ಲೋಕಸಭಾ ಚುನಾವಣೆ ಸಮಯದಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್ ಮೈತ್ರಿಯಿದ್ದ ಕಾರಣದಿಂದಾಗಿ ಬಿಜೆಪಿಯನ್ನು ಜೆಡಿಎಸ್ ವಿರೋಧಿಸಿಕೊಂಡು ಬಂದಿತ್ತು. ಜತೆಗೆ ಸ್ವತಃ ದೇವೇಗೌಡರೇ ಪ್ರಧಾನಿ ನರೇಂದ್ರ ಮೋದಿಯನ್ನು ಟೀಕೆ ಮಾಡಲಾರಂಭಿಸಿದ್ದರು. ಇಷ್ಟೇ ಅಲ್ಲದೆ ಆರ್‌ಎಸ್‌ಎಸ್ ಸೇರಿದಂತೆ ಹಿಂದೂ ಸಂಘಟನೆಗಳನ್ನು ರಾಜಕೀಯವಾಗಿ ನಿಂದಿಸಲಾರಂಭಿಸಿದ್ದರು. ಇದೆಲ್ಲದರ ಪರಿಣಾಮ ಬಿಜೆಪಿ ರಾಜ್ಯದಲ್ಲಿ ಅತಿ ಹೆಚ್ಚು 25 ಸ್ಥಾನಗಳಲ್ಲಿ ಗೆದ್ದು ಬಂದರೆ ದೇವೇಗೌಡರು ತುಮಕೂರಿನಲ್ಲಿ ಸೋಲು ಕಂಡಿದ್ದರು. ಆದರೆ ದೇವೇಗೌಡರ ವಂಶದ ಕುಡಿ ಎಂಬ ಕಾರಣಕ್ಕೆ ಹಾಸನದಲ್ಲಿ ಪ್ರಜ್ವಲ್ ರೇವಣ್ಣ ಗೆಲುವು ಕಂಡಿದ್ದರು.

ದೇವೇಗೌಡರ ರಾಜಕೀಯದ ಬದುಕಿನಲ್ಲಿ ಹಾಸನ ಕ್ಷೇತ್ರದ ಜನ ಅವರ ಕೈಬಿಟ್ಟಿರಲಿಲ್ಲ. ಇಂತಹ ಕ್ಷೇತ್ರವನ್ನು ಮೊಮ್ಮಗ ಪ್ರಜ್ವಲ್ ರೇವಣ್ಣನ ಕೈಗೆ ಕಳೆದ ಲೋಕಸಭಾ ಚುನಾವಣೆ ವೇಳೆ ನೀಡಿದ್ದರು. ಮುಂದೊಂದು ದಿನ ದೆಹಲಿ ಮಟ್ಟದಲ್ಲಿ ತನ್ನ ಹೆಸರು ಮೊಮ್ಮಗ ಉಳಿಸುತ್ತಾನೆ ಎಂಬ ಭರವಸೆಯಲ್ಲಿದ್ದರು. ಜನ ಕೂಡ ಪ್ರಜ್ವಲ್ ರೇವಣ್ಣನಿಗೆ ರಾಜಕೀಯ ಜೀವನದಲ್ಲಿ ಭವಿಷ್ಯವಿದೆ. ತಾತನ ಹೆಸರನ್ನು ದೆಹಲಿ ಮಟ್ಟದಲ್ಲಿ ಉಳಿಸುತ್ತಾನೆ ಎಂಬಿತ್ಯಾದಿ ನಿರೀಕ್ಷೆ ಇಟ್ಟುಕೊಂಡಿದ್ದರು.

> **ಪ್ರಜ್ವಲ್ ಮಾಡಿದ್ದೇ ಬೇರೆ**
>
> **ಪ್ರಜ್ವಲ್ ರೇವಣ್ಣ ಜನನಾಯಕನಾಗಿ ಹಾಸನದಲ್ಲಿ ಬೆಳೆಯುತ್ತಾನೆ. ದೇವೇಗೌಡರ ಹೆಸರನ್ನು ಉಳಿಸುತ್ತಾನೆ ಎಂದು ಜನ ಮಾತ್ರವಲ್ಲ ಸ್ವತಃ ತಾತ ದೇವೇಗೌಡರೇ ನಂಬಿಕೆ ಹೊಂದಿದ್ದರು. ಆದರೆ ಪ್ರಜ್ವಲ್ ರೇವಣ್ಣ ಮಾಡಿದ್ದೇ ಬೇರೆ, ಈತನ ಕೃತ್ಯ ನಾಗರಿಕ ಸಮಾಜ ತಲೆ ತಗ್ಗಿಸುವಂತೆ ಮಾಡಿದೆ. ಜತೆಗೆ ಪ್ರಜ್ವಲ್ ರೇವಣ್ಣ ಜತೆಗೆ ತಂದೆ ಹೆಚ್.ಡಿ.ರೇವಣ್ಣನ ಮೇಲೆಯೂ ದೌರ್ಜನ್ಯದ ಪ್ರಕರಣ ದಾಖಲಾಗಿರುವುದು ಇನ್ನಷ್ಟು ಕಠಿಣ ಪರಿಸ್ಥಿತಿಯನ್ನು ಎದುರಿಸುವಂತಾಗಿದೆ. ಇದು ಇಡೀ ಕುಟುಂಬ ಸಮಾಜದ ಮುಂದೆ ತಲೆ ತಗ್ಗಿಸುವಂತೆ ಮಾಡಿದೆ. ಮಾಜಿ ಪ್ರಧಾನಿ ದೇವೇಗೌಡರ ಕುಟುಂಬದಲ್ಲಿ ಪ್ರಕರಣ ನಡೆದಿದೆ ಎಂಬ ಕಾರಣಕ್ಕಾಗಿಯೇ ಹೆಚ್ಚೆಚ್ಚು ಪ್ರಚಾರ ಮತ್ತು ಆಕ್ರೋಶವೂ ವ್ಯಕ್ತವಾಗುತ್ತಿದೆ.**

# ಪ್ರಜ್ವಲ್ ಕೇಸ್‌ಗೆ ಬಿಗ್ ಟ್ವಿಸ್ಟ್ ರೇವಣ್ಣ ಪಿಎ ಮನೆಯಲ್ಲಿ ಸಂತ್ರಸ್ತೆಯ ರಕ್ಷಣೆ

• ಉದಯವಾಹಿನಿ, ಮೈಸೂರು

ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣದಲ್ಲಿ ಅಪಹರಣಕ್ಕೀಡಾಗಿದ್ದ ಸಂತ್ರಸ್ತೆಯನ್ನು ಮೈಸೂರು ಪೊಲೀಸರು ಮೈಸೂರಿನಲ್ಲಿ ರಕ್ಷಣೆ ಮಾಡಿದ್ದಾರೆ ಎನ್ನಲಾಗಿದೆ.



ಎಚ್.ಡಿ.ರೇವಣ್ಣ ಆಪ್ತ ಸಹಾಯಕ ರಾಜಶೇಖರ್ ತೋಟದ ಮನೆಯಲ್ಲಿದ್ದ ಸಂತ್ರಸ್ತೆಯನ್ನು ಪೊಲೀಸರು ರಕ್ಷಣೆ ಮಾಡಿದ್ದಾರೆ ಎನ್ನಲಾಗಿದ್ದು, ಸದ್ಯ ಎಸ್‌ಐಟಿಅಧಿಕಾರಿಗಳು ಆಕೆಯನ್ನು ತಮ್ಮ ವಶಕ್ಕೆ ಪಡೆದುಕೊಂಡು ಮುಂದಿನ ಕ್ರಮವನ್ನು ಕೈಗೊಂಡಿದ್ದಾರೆ.

ಏಪ್ರಿಲ್ 29ರಂದು ಕೆ. ಆರ್.ನಗರದ ಮನೆಯಿಂದ ಮಹಿಳೆಯೊಬ್ಬರನ್ನು ಅಪಹರಣ ಮಾಡಿ ಅಕ್ರಮ ಬಂಧನದಲ್ಲಿಟ್ಟಿದ್ದ ಆರೋಪದ ಮೇಲೆ ಮೈಸೂರಿನ ಕೆ.ಆರ್. ನಗರ ಠಾಣೆಯಲ್ಲಿ ಎಚ್.ಡಿ.ರೇವಣ್ಣ ಸೇರಿ ಹಲವರ ವಿರುದ್ಧ ಪ್ರಕರಣ ದಾಖಲಾಗಿತ್ತು.

ಇದೇ ವೇಳೆ ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ತನಿಖೆ ನಡೆಸುತ್ತಿದ್ದರು, ಈಗ ಸದ್ಯ ಮಗನ ದೂರಿನ ಅನ್ವಯ ಮಹಿಳೆಯನ್ನು ಕಾಪಾಡಲಾಗಿದ್ದು, ಮಹಿಳೆಯನ್ನು ರಾಜಶೇಖರ್ ಕೂಡಿ ಹಾಕಿದ್ದ ಎನ್ನಲಾಗಿದೆ. ಸದ್ಯ ಪೊಲೀಸರು ಮುಂದಿನ ಕ್ರಮಕ್ಕೆಗೊಂಡಿದ್ದಾರೆ.

# ಕೇವಲ 10 ತಿಂಗಳುಗಳಲ್ಲಿ ಕರ್ನಾಟಕವನ್ನು ಹಾಳುಗೆಡುವಿದ ಕಾಂಗ್ರೆಸ್
## ಕಾಂಗ್ರೆಸ್ ನೇತೃತ್ವದ ಸರ್ಕಾರವು ಕರ್ನಾಟಕ ರಾಜ್ಯವನ್ನು ಪ್ರಕ್ಷುಬ್ಧತೆ ಮತ್ತು ಅವ್ಯವಸ್ಥೆಯತ್ತ ಕೊಂಡೊಯ್ಯಿತು

• ಉದಯವಾಹಿನಿ, ಚಿಕ್ಕೋಡಿ


ಉದಯವಾಹಿನಿ ಚಿತ್ರ

**ಕೋಮು ಸೌಹಾರ್ದತೆಗೆ ಧಕ್ಕೆ**

ಕೇಂದ್ರ ಗೃಹ, ಸಹಕಾರ ಸಚಿವ, ಬಿಜೆಪಿಯ ವರಿಷ್ಠ ಕಟ್ಟಾಳು ಅಮಿತ್ ಶಾ ಅವರು ಲೋಕಸಭೆ ಚುನಾವಣಾ ಪ್ರಚಾರದ ಭಾಗವಾಗಿ ಶುಕ್ರವಾರ ಕರ್ನಾಟಕದ ಚಿಕ್ಕೋಡಿಯಲ್ಲಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿ, ಕೇವಲ 10 ತಿಂಗಳಲ್ಲಿ ಕರ್ನಾಟಕ ರಾಜ್ಯವನ್ನು ಕಾಂಗ್ರೆಸ್ ದನನೀಯ ಸ್ಥಿತಿಗೆ ತಂದಿದೆ ಎಂದು ಹೇಳಿದರು. ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕೇವಲ 10 ತಿಂ ಗಳಲ್ಲಿ, ಕಾಂಗ್ರೆಸ್ ನೇತೃತ್ವದ ಸರ್ಕಾರವು ಕರ್ನಾಟಕ ರಾಜ್ಯವನ್ನು ಪ್ರಕ್ಷುಬ್ಧತೆ ಮತ್ತು ಅವ್ಯವಸ್ಥೆಯತ್ತ ಕೊಂಡೊಯ್ಯಿತು.

ಅಧಿಕಾರಕ್ಕೆ ಬಂದ ಮೇಲೆ ರೈತರಿಗೆ ನೀಡುತ್ತಿದ್ದ ರೂ. 4,000 ಧನಸಹಾಯವನ್ನು ಏಕಾಏಕಿ ಸ್ಥಗಿತಗೊಳಿಸಿರುವುದು ಕೃಷಿ ಸಮುದಾಯದ ಬಗ್ಗೆ ಕಾಂಗ್ರೆಸ್ ಪಕ್ಷಕ್ಕಿರುವ ನಿರ್ಲಕ್ಷ್ಯವನ್ನು ಪ್ರತಿಬಿಂಬಿಸುತ್ತದೆ. ಇಂತಹ ದೂರದೃಷ್ಟಿಯಿಲ್ಲದ ನೀತಿಗಳು ಸಾಮಾನ್ಯ ಜನರಿ ಗೆ ದ್ರೋಹ ಮಾಡುವುದಲ್ಲದೆ, ಆಡಳಿತದಲ್ಲಿ ಕಾಂಗ್ರೆಸ್‌ನ ಬದ್ಧತೆ ಮತ್ತು ದೂರದೃಷ್ಟಿಯ ಕೊರತೆಯನ್ನು ಎತ್ತಿ ತೋರಿಸುತ್ತದೆ.

ಇದಲ್ಲದೆ, ಲವ್ ಜಿಹಾದ್ ವಿಷಯದ ಸುತ್ತಲಿನ ಸವಾಲುಗಳ ಸಂಕೇತವಾದ ನೇಹಾ ಪ್ರಕರಣಕ್ಕೆ ನ್ಯಾಯ ನೀಡಲು ಸಾಧ್ಯವಾಗದಿರುವುದು ಕಾಂಗ್ರೆಸ್ ಅ ಸಮರ್ಥತೆಯನ್ನು ಬಹಿರಂಗಪಡಿಸುತ್ತದೆ. ನೇಹಾ ಅವರಂತಹ ಸಂತ್ರಸ್ತರಿಗೆ ಪಕ್ಷವು ನ್ಯಾಯವನ್ನು ನೀಡಲು ಸಾಧ್ಯವಾಗದಿದ್ದರೆ, ಅಂತಹ ಸೂಕ್ಷ್ಮ ಪ್ರಕರಣಗಳನ್ನು ಕೇಂದ್ರೀಯ ತನಿಖಾ ದಳಕ್ಕೆ ವಹಿ ಸುವುದು ಮಾತ್ರ ಕಾರ್ಯಸಾಧುವಾದ ಪರಿಹಾರವಾದೆ.

ಇಂತಹ ನಿರ್ಣಾಯಕ ವಿಷಯಗಳನ್ನು ಪರಿಹರಿಸುವಲ್ಲಿನ ಕಾಂಗ್ರೆಸ್ ವೈಫಲ್ಯವು ಅದರ ವಿಶ್ವಾಸಾರ್ಹತೆ, ಸಾರ್ವಜನಿಕ ನಂಬಿಕೆ ಕುರಿತು ಪ್ರಶ್ನೆ ಹುಟ್ಟು ಹಾಕುತ್ತದೆ.

ಹಲವಾರು ಪ್ರಯತ್ನಗಳ ಹೊರತಾಗಿಯೂ, ರಾಹುಲ್ ಗಾಂಧಿಯವರ ಕರ್ನಾಟಕ ರಾಜಕೀಯ ಪ್ರವೇಶ ಅಷ್ಟು ಯಶಸ್ಸನ್ನು ಪಡೆದಿಲ್ಲ. 20ಕ್ಕೂ ಹೆಚ್ಚು ಬಾರಿ ಲಾಂಚ್ ಆಗಲು ಪ್ರಯತ್ನಿಸಿದರೂ, ಲೆಕ್ಕವಿಲ್ಲದಷ್ಟು ರ್‍ಯಾಲಿಗಳನ್ನು ಮಾಡಿದರು, ಕಾಂಗ್ರೆಸ್ಸಿನ ಈ ಕುಡಿ ಮತದಾರರ ಪ್ರತಿಧ್ವನಿಯನ್ನು ಅರಿಯಲು ಹೆಣಗಾ ಡುತ್ತಲೇ ಇದೆ. ಜನರ ನಾಡಿ ಮಿಡಿತ ಅರಿಯುವಲ್ಲಿನ ಅವರ ಅಸಮರ್ಥತೆ, ಕಾಂಗ್ರೆಸ್ ನಾಯಕತ್ವದ ಬಗ್ಗೆ ಹೆಚ್ಚುತ್ತಿರುವ ಭ್ರಮನಿರಸನವನ್ನು ಎತ್ತಿ ತೋರಿಸುತ್ತದೆ. ಇದಲ್ಲದೆ, ಹಿಂಸಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಪಕ್ಷವಾದ ಎಸ್ಡಿಪಿಐ ಜೊತೆ ಕಾಂಗ್ರೆಸ್‌ನ ಮೌನ ಮೈತ್ರಿಯು, ನೈತಿಕ ಸಮಗ್ರತೆ, ಕರ್ನಾಟಕದ ಶಾಂತಿ ಮತ್ತು ಸ್ಥಿರತೆಯೆಡೆಗಿನ ಪಕ್ಷದ ಬದ್ಧತೆಯ ಬಗ್ಗೆ ಗಂಭೀರ ಕಳವಳವನ್ನು ಉಂಟುಮಾಡುತ್ತದೆ. ಇಂತಹ ವಿವಾದಾತ್ಮಕ ಅಂಶಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳುವ ಮೂಲಕ ಕಾಂಗ್ರೆಸ್ ತನ್ನದೇ ಆದ ಮೌಲ್ಯಗಳನ್ನು ರಾಜಿ ಮಾಡಿಕೊಳ್ಳುವುದರ ಜೊತೆಗೆ ರಾಜ್ಯದ ಭದ್ರತೆ ಮತ್ತು ಕೋಮು ಸೌಹಾರ್ದತೆಗೆ ಧಕ್ಕೆ ತಂದಿದೆ.

ಇದಕ್ಕೆ ತದ್ವಿರುದ್ಧವಾಗಿ, ಬಿಜೆಪಿಯು ಕರ್ನಾಟಕದ ಭರವಸೆಯ ಕಿರಣವಾಗಿ ಹೊರ ಹೊಮ್ಮುತ್ತಿದೆ, ಅಂತರ್ಗತ ಅಭಿವೃದ್ಧಿ, ಉತ್ತಮ ಆಡಳಿತ, ಎಲ್ಲಾ ನಾಗರಿಕರ ಕಲ್ಯಾಣಕ್ಕಾಗಿ ಅಚಲವಾದ ಬದ್ಧತೆಯ ದೃಷ್ಟಿಕೋನವನ್ನು ಹೊಂದಿದೆ. ತನ್ನ ಭರವಸೆಗಳನ್ನು ಈಡೇರಿಸುವ, ಪ್ರಗತಿಯ ವಾತಾವರಣವನ್ನು ಪೋಷಿಸುವ ದಾಖಲೆಯೊಂದಿಗೆ, ತೆವಳುತ್ತಾ ಸಾಗುತ್ತಿರುವ ಕಾಂಗ್ರೆಸ್ ನೇತೃತ್ವದ ಆಡಳಿತಕ್ಕೆ ಬಿಜೆಪಿ ವಿಶ್ವಾಸಾರ್ಹ ಪರ್ಯಾಯ ಆಯ್ಕೆಯಾಗಿದೆ.

ಪ್ರಧಾನಿ ಮೋದಿಯವರ ಸರ್ಕಾರವು ಯಾವುದೇ ಪ್ರತಿಕೂಲ ಪರಿಣಾಮಗಳಿಲ್ಲದೆ, ಕಾಂಗ್ರೆಸ್‌ನ ಭಯ ಹುಟ್ಟಿಸುವ ತಂತ್ರಗಳನ್ನು ತಳ್ಳಿ ಹಾಕಿ,370ನೇ ವಿಧಿಯನ್ನು ಯಶಸ್ವಿಯಾಗಿ ತೆಗೆದು ಹಾಕಿತು. ಇದು ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಶಾ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ದೇಶವು ಪ್ರಗತಿಯೆಡೆಗೆ ಸಾಗುತ್ತಿರುವುದರ ನಿದರ್ಶನವಾಗಿದೆ.

ಕರ್ನಾಟಕವು ಮತ್ತೊಂದು ಚುನಾವಣಾ ಹಣಾಹಣಿಗೆ ಸಜ್ಜಾಗುತ್ತಿರುವಾಗ, ಭಾರತೀಯ ಜನತಾ ಪಕ್ಷ, ಭಾರತೀಯ ರಾ ಷ್ಟ್ರೀಯ ಕಾಂಗ್ರೆಸ್‌ನ ವ್ಯತಿರಿಕ್ತ ನೀತಿ ನಿರೂಪಣೆಗಳ ಮೇಲೆ ಮತ್ತೊಮ್ಮೆ ಗಮನ ಹರಿಸುವುದು ಅವಶ್ಯಕವಾಗಿದೆ. ಕಾಂಗ್ರೆಸ್ ನೇತೃತ್ವದ ಆಡಳಿತ ತಪ್ಪು ಹೆಜ್ಜೆಗಳು ಮತ್ತು ವಿವಾದಗಳ ಸರಣಿಯೊಂದಿಗೆ, ರಾಜ್ಯವನ್ನು ಹಾಳುಗೆಡುವುತ್ತಿರುವಾಗ, ಬಿಜೆಪಿಯು ಸ್ಥಿರತೆ, ಪ್ರಗತಿ ಮತ್ತು ಪರಿಣಾಮಕಾರಿ ಆಡಳಿತದ ಭರವಸೆಯ ಮೂಲಕ ದಾರಿದೀಪವಾಗಿ ಹೊರಹೊಮ್ಮುತ್ತಿದೆ.

> **ರಾಜ್ಯದಲ್ಲಿ ಭರವಸೆ ಮತ್ತು ಪ್ರಗತಿಯ ಹೊಸ ಯುಗಕ್ಕೆ ನಾಂದಿ**
>
> **ಕರ್ನಾಟಕವು ಮತ್ತೊಂದು ನಿರ್ಣಾಯಕ ಚುನಾವಣಾ ಘಟ್ಟವನ್ನು ಸಮೀಪಿಸುತ್ತಿರುವಾಗ, ಜನರ ಮುಂದಿರುವ ಆಯ್ಕೆಯು ಸ್ಪಷ್ಟವಾಗಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಸದೃಢ ನಾಯಕತ್ವಕ್ಕೆ ಮತ ಹಾಕಿ, ಸಮೃದ್ಧಿ ಮತ್ತು ಸ್ಥಿರತೆಯ ಹಾದಿಯನ್ನು ಆಯ್ಕೆ ಮಾಡಿಕೊಳ್ಳುವುದು ಅಥವಾ ಕಾಂಗ್ರೆಸ್‌ಅನ್ನು ಆರಿಸಿ, ಅನಿಶ್ಚಿತತೆ ಮತ್ತು ಹಿಂಜರಿತದ ಹಾದಿಯಲ್ಲಿ ಮುಂದುವರಿಯುವುದು. ಕಾಂಗ್ರೆಸ್‌ನ ವೈಫಲ್ಯಗಳು ಮತ್ತು ನ್ಯೂನತೆಗಳಿಗೆ ವೈರುಧ್ಯವಾಗಿ, ಕರ್ನಾಟಕದ ಉಜ್ವಲ ಭವಿಷ್ಯವನ್ನು ಬಲವಾಗಿ ಪ್ರತಿಧ್ವನಿಸುತ್ತಿರುವ ಬಿಜೆಪಿಯು, ರಾಜ್ಯದಲ್ಲಿ ಭರವಸೆ ಮತ್ತು ಪ್ರಗತಿಯ ಹೊಸ ಯುಗಕ್ಕೆ ನಾಂದಿ ಹಾಡಲಿದೆ.**

## ದಿನ ಭವಿಷ್ಯ

| ರಾಹುಕಾಲ | ಸಾಂಕಾಲ | 04:30 ರಿಂದ 06:00 |
|---|---|---|
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ:** ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾಗಿದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ.

**ವೃಷಭ:** ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ನೀವು ಕಮಿಷನ್‌ಗಳಿಂದ ಡಿವಿಡೆಂಡ್‌ಗಳಿಂದ– ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ.

**ಮಿಥುನ:** ಕುಟುಂಬಕ್ಕೆ ಸಾಕಷ್ಟು ಸಮಯವನ್ನು ನೀಡುವುದಿಲ್ಲ ಎಂದು ಅವರ ಕುಟುಂಬಗಳು ದೂರು ನೀಡುತ್ತಾರೆ, ಅವರು ಇಂದು ಕುಟುಂಬ ಸದಸ್ಯರಿಗೆ ಸಮಯವನ್ನು ನೀಡುವ ಬಗ್ಗೆ ಯೋಚಿಸಬಹುದು.

**ಕರ್ಕಾಟಕ:** ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

**ಸಿಂಹ:** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು.

**ಕನ್ಯಾ:** ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ.

**ತುಲಾ:** ಸುಂದರ ನಗುವಿನಿಂದ ನಿಮ್ಮ ಪ್ರೇಮಿಯ ದಿನವನ್ನು ಪ್ರಕಾಶಮಾನವಾಗಿ. ಸಂತಸದ ಪ್ರಯಾಣ ತೃಪ್ತಿಕರವಾಗಿರುತ್ತದೆ. ನಿಮ್ಮ ಸಂಗಾತಿಯು ಇಂದು ಆ ಆರಂಭಿಕ ಹಂತದ ಪ್ರೀತಿ ಮತ್ತು ಪ್ರಣಯದ ಗುಂಡಿಯನ್ನು ಒತ್ತುತ್ತಾಳೆ.

**ವೃಶ್ಚಿಕ:** ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ.

**ಧನಸ್ಸು:** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ, ನೀವು ಇದನ್ನು ಬಾಕಿಯುಳ್ಳ ಕೆಲಸಗಳನ್ನು ಪೂರ್ಣಗೊಳಿಸಲು ಬಳಸಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ - ಆದರೆ ವೆಚ್ಚಗಳು ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ.

**ಮಕರ:** ಯಾರಿಗಾದರೂ ಅವರ ಪ್ರೀತಿ ಯಶಸ್ವಿಯಾಗುವುದನ್ನು ಸ್ವತಃ ದೃಶ್ಯೀಕರಿಸುವುದು ಸಹಾಯ ಮಾಡಿ. ವಿಚಾರಗೋಷ್ಠಿಗಳು ಮತ್ತು ಪ್ರದರ್ಶನಗಳು ನಿಮಗೆ ಹೊಸ ಜ್ಞಾನ ಮತ್ತು ಸಂಪರ್ಕಗಳನ್ನು ಒದಗಿಸುತ್ತವೆ.

**ಕುಂಭ:** ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ವ್ಯಾಪಾರಿಗಳಿಗೆ ಇಂದು ವ್ಯಾಪಾರದಲ್ಲಿ ಹಾನಿ ಉಂಟಾಗಬಹುದು.

**ಮೀನ:** ಮನೆಯ ಕೆಲಸ ನಿಮ್ಮನ್ನು ಯಾವಾಗಲೂ ವ್ಯಸ್ತವಾಗಿರಿಸುತ್ತದೆ. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ.

# ರೈತರಿಗೆ 4 ಸಾವಿರ ಕೊಟ್ಟಿದ್ದರೆ ನಿಮ್ಮ ಗಂಟೇನು ಹೋಗುತ್ತಿತ್ತು: ಬೊಮ್ಮಾಯಿ

## • ಸಿಂಗಟಾಲೂರು ಏತ ನೀರಾವರಿ ಯೋಜನೆ ಪೂರ್ಣಗೊಳಿಸದಿದ್ದರೆ ಹೋರಾಟ ಮಾಡಲಾಗುವುದು

• ಉದಯವಾಹಿನಿ ಗದಗ

ಸಿಂಗಟಾಲೂರು ಏತ ನೀರಾವರಿ ಯೋಜನೆ ಪೂರ್ಣಗೊಳಿಸದಿದ್ದರೆ ಹೋರಾಟ ಮಾಡಲಾಗುವುದು ಮಾಜಿ ಮುಖ್ಯಮಂತ್ರಿ, ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.


ಮುಂಡಗರಿಯಲ್ಲಿ ಬೃಹತ್ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದರು. ಮುಂಡರಗಿ ತಾಲ್ಲೂಕಿನ ಮಣ್ಣು ಫಲವತ್ತಾದ ಮಣ್ಣು, ಮುಂಡರಗಿ ತಾಲ್ಲೂಕಿನ ಮಣ್ಣಿಗೆ ತುಂಗಭದ್ರಾ ನೀರು ಹರಿಸಿದರೆ ಭೂಮಿತಾಯಿ ಬಂಗಾರದ ಬೆಳೆ ಕೊಡುತ್ತಾಳೆ.

ಸಿಂಗಟಾಲೂರು ಏತ ನೀರಾವರಿ ಯೋಜನೆಯನ್ನು ಜಾರಿ ಮಾಡಿದ್ದು ನಾನು. ಒಂದು ಸಾವಿರ ಕೋಟಿ ರೂಪಾಯಿ ಖರ್ಚು ಮಾಡಿ, ನಾಲ್ಕು ಹಳ್ಳಿಗಳನ್ನು ಸ್ಥಳಾಂತರ ಮಾಡಿ ಕೆನಾಲ್‌ಗಳನ್ನು ಮಾಡಿದ್ದೇವೆ. ಹನಿ ನೀರಾವರಿ ಮಾಡುವ ಗುರಿ ಇದೆ. ಆದರೆ, ಈ ಸರ್ಕಾರ ಯೋಜನೆಯನ್ನು ಸಂಪೂರ್ಣ ಸ್ಥಗಿತಗೊಳಿಸಿದೆ. ರಾಜ್ಯ ಸರ್ಕಾರ ಈ ಭಾಗಕ್ಕೆ ನೀರು ಕೊಡದಿದ್ದರೆ ದೊಡ್ಡ ಹೋರಾಟ ಮಾಡಲಾಗುವುದು. ಕೇವಲ ಮುಂಡರಗಿ ಅಷ್ಟೇ ಅಲ್ಲ, ಗದಗ, ರೋಣ, ಕೊಪ್ಪಳ ಭಾಗದವರೆಗೂ ಭೂಮಿ ತಾಯಿ ಹಸಿರು ಸೀರೆ ಉಟ್ಟು ಕಂಗೊಳಿಸಬೇಕು ಎಂದು ಹೇಳಿದರು.

ಜಾಲವಾಡಗಿ ಏತ ನೀರಾವರಿ ಈ ಭಾಗಕ್ಕೆ ತುರ್ತಾಗಿ ಬೇಕಾಗಿದೆ. ಕೂಡಲೆ ಅದನ್ನು ಟೆಂಡರ್ ಕರೆದಿದ್ದೆವು.ಇವತ್ತಿನ ಸರ್ಕಾರ ಅದನ್ನು ನಿಲ್ಲಿಸಿದೆ ಎಂದರು.

ನಮ್ಮ ಪ್ರಧಾನಿ ಮೋದಿಯವರು ಕಿಸಾನ್ ಸಮ್ಮಾನ್ ಯೋಜನೆ ಮಾಡಿದ್ದೇವು. ಅದನ್ನು ನಿಲ್ಲಿಸಿದ್ದಾರೆ. ರೈತರ ವಿಚಾರದಲ್ಲಿ ರಾಜಕಾರಣ ಮಾಡಿದ್ದಾರೆ. ರೈತರಿಗೆ ನಾಲ್ಕು ಸಾವಿರ ಕೊಟ್ಟಿದ್ದರೆ ನಿಮ್ಮ ಗಂಟೇನು ಹೋಗುತ್ತಿತ್ತು. ರೈತ ವಿದ್ಯಾನಿಧಿ ಯೋಜನೆ ಮಾಡಿದ್ದೇವು ಅದನ್ನು ನಿಲ್ಲಿಸಿದರು. ರೈತ ಶಕ್ತಿ ನಿಲ್ಲಿಸಿದರು. ಯಶಸ್ವಿನಿ ನಿಲ್ಲಿಸಿದರು. ಬರ ಬಂದು ಹತ್ತು ತಿಂಗಳಾಯಿತು ರಾಜ್ಯ ಸರ್ಕಾರದ ಬೊಕ್ಕಸದಿಂದ ನಯಾ ಪೈಸೆ ಕೊಟ್ಟಿಲ್ಲ. ನಮ್ಮ ಅವಧಿಯಲ್ಲಿ ಪ್ರವಾಹ ಬಂದಾಗ ಎರಡು ಪಟ್ಟು ಪರಿಹಾರ ಕೊಟ್ಟಿದ್ದೇವೆ. ನಾವು ರೈತರನ್ನು ಹೃದಯದಲ್ಲಿ ಇಟ್ಟುಕೊಂಡಿದ್ದೇವು, ನೀವು ರೈತರನ್ನು ಕಾಲ ಕಸದಂತೆ ನೋಡಿದ್ದೀರಿ ಎಂದು ವಾಗ್ದಾಳಿ ನಡೆಸಿದರು. ಕೊವಿಡ್ ಸಂದರ್ಭದಲ್ಲಿ ಎಲ್ಲರ ಜೀವ ಉಳಿಸಿರುವ ಮೋದಿಯವರ ಋಣ ತೀರಿಸಬೇಕು. ಅನ್ನಕೊಟ್ಟು, ನೀರು ಕೊಟ್ಟು, ಜೀವ ಉಳಿಸಿದ ಮೋದಿಯವರಿಗೆ ಮತಹಾಕುವಂತೆ ಮನವಿ ಮಾಡಿದರು. ಸಮಾವೇಶದಲ್ಲಿ ಮಾಜಿ ಸಚಿವರಾದ ಗೋವಿಂದ ಕಾರಜೋಳ, ಕಳಕಪ್ಪ ಬಂಡಿ, ಸಂಸದ ಶಿವಕುಮಾರ್ ಉದಾಸಿ, ಶಾಸಕ ಚಂದ್ರು ಲಮಾಣಿ ಸೇರಿದಂತೆ ಅನೇಕ ನಾಯಕರು ಪಾಲ್ಗೊಂಡಿದ್ದರು.

**ಯೋಜನೆಗಳು ಸಂಪೂರ್ಣ ಸ್ಥಗಿತ**



**ರಾಹುಲ್ ಗಾಂಧಿಗೆ ರಾತ್ರಿ ಏನು ಕನಸು ಬೀಳುತ್ತದೆ. ಅದನ್ನು ಬೆಳಿಗ್ಗೆ ಹೇಳುತ್ತಾರೆ. ಎಲ್ಲರ ಆಸ್ತಿ ಎಷ್ಟಿದೆ ಅಂತ ಎಲ್ಲರಿಗೂ ಗೊತ್ತಿದೆ. ಆಸ್ತಿ ಹಂಚುವುದಿದ್ದರೆ ಮೊದಲು ನಿಮ್ಮ ಆಸ್ತಿ ಹಂಚಿ ಎಂದು ಸವಾಲು ಹಾಕಿದರು. ಪಿತ್ರಾರ್ಜಿತ ಆಸ್ತಿಯನ್ನು ಮಕ್ಕಳಿಗೆ ನೀಡಲು ಸರ್ಕಾರಕ್ಕೆ ಶೇ 55% ರಷ್ಟು ತೆರಿಗೆ ಕಟ್ಟಬೇಕಂತೆ, ಇಂತ ಹುಚ್ಚಾಟವನ್ನು ಮಾತನಾಡುವ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕಾ ಎಂದು ಪ್ರಶ್ನಿಸಿದರು. - ಬಸವರಾಜ ಬೊಮ್ಮಾಯಿ**

### ಖಜಾನೆ ಲೂಟಿ

**ಗ್ಯಾರಂಟಿ ಮಾಡಿ ಎಲ್ಲರನ್ನೂ ಉದ್ದಾರ ಮಾಡಿದ್ದೇವೆ ಎಂದು ಹೇಳುತ್ತಾರೆ. ಅದನ್ನು ನೋಡಲು ಕಾಂಗ್ರೆಸ್ ಕಾರ್ಯಕರ್ತರಿಗೆ ಅಧಿಕಾರ ಕೊಟ್ಟಿದ್ದಾರೆ. ಖಜಾನೆ ಲೂಟಿ ಮಾಡುತ್ತಿದ್ದಾರೆ. ಹತ್ತು ಕೆಜಿ ಅಕ್ಕಿ ಕೊಡುವುದಾಗಿ ಹೇಳುತ್ತಿದ್ದಾರೆ. ಈಗ ಬರುತ್ತಿರುವುದು ಮೋದಿ ಕೊಡುತ್ತಿರುವ ಅಕ್ಕಿ, ಗೃಹಲಕ್ಷ್ಮೀಗೆ ಹೆಣ್ಣು ಮಕ್ಕಳು ಅಲೆದಾಡಿ ಅವರ ಚಪ್ಪಲಿ ಸವೆಯುತ್ತಿವೆ. ಯುವ ನಿಧಿ ಯಾರಿಗೂ ತಲುಪಿಲ್ಲ. ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿದೆ. ಬರುವ ದಿನಗಳಲ್ಲಿ ಸರ್ಕಾರಿ ನೌಕರರಿಗೆ ಸಂಬಳ ಕೊಡಲು ಹಣ ಇರುವುದಿಲ್ಲ ಎಂದರು.**

## ಮೇಟಿಗಳಿಗೆ ಭದ್ರತೆ ಹಾಗೂ ದಿನಗೂಲಿ ನಿಗದಿಗೆ ಮನವಿ

• ಉದಯವಾಹಿನಿ ಸಿರುಗುಪ್ಪ

ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಕಾರ್ಯ ನಿರ್ವಹಿಸುತ್ತಿರುವ ಮೇಟಿಗಳಿಗೆ ಭದ್ರತೆ ಮತ್ತು ದಿನಗೂಲಿ ನಿಗದಿಪಡಿಸುವಂತೆ ಒತ್ತಾಯಿಸಿ ಅಖಿಲ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರ ಸಂಘದಿಂದ ತಾಲ್ಲೂಕಿನ ಮಾಳಾಪುರ ಗ್ರಾಮದಲ್ಲಿನ ಕೆರೆಯಲ್ಲಿ ಉದ್ಯೋಗ ಖಾತ್ರಿಯ ಸ್ಥಳಕ್ಕೆ ಆಗಮಿಸಿದ ತಾಂತ್ರಿಕ ಸಂಯೋಜಕ ಪ್ರದೀಪ್ ಅವರ ಮೂಲಕ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಸಂಘದ ತಾಲೂಕಾಧ್ಯಕ್ಷ ಇ.ಆರ್.ಯಲ್ಲಪ್ಪ ಮಾತನಾಡಿ ಕೆಂಚನಗುಡ್ಡ, ನಡಿವಿ, ಸಿರಿಗೇರಿ, ಎಮ್.ಸೂಗೂರು, ಮುದ್ದಟನೂರು ಗ್ರಾಮ ಪಂಚಾಯಿತಿಗಳಿಗೆ ಒಳಪಡುವ ಹಳ್ಳಿಗಳ ಕೂಲಿಕಾರರು ಕೂಲಿಗಾಗಿ 20-25 ಕಿ.ಮೀ. ದೂರ ಬರಬೇಕಾದ ಅನಿವಾರ್ಯತೆಯಿದೆ.

ಆದರೆ ಸಂಬಂದಿಸಿದ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು ವಾಹನ ಸೌಲಭ್ಯ ಒದಗಿಸುತ್ತಿಲ್ಲವಾದ್ದರಿಂದ ಕೂಲಿಕಾರರಿಗೆ ಸಮಸ್ಯೆಯಾಗುತ್ತಿದ್ದು, ಆಯಾ ಗ್ರಾಮದಲ್ಲೇ ಉದ್ಯೋಗ ನೀಡಬೇಕೆಂದರು. ಮುಖಂಡ ಸುರೇಶ ಮಾತನಾಡಿ ಈಗಾಗಲೇ ಮೇಟಿಗಳಿಂದ ಒಪ್ಪಿಗೆ ಪತ್ರ ಬರೆಸಿಕೊಂಡಿರುವ ಬಗ್ಗೆ ಸರ್ಕಾರದ ಆದೇಶವಿದ್ದಲ್ಲಿ ಅದರ ಪ್ರತಿ ಮೇಟಿಗಳಿಗೆ ನೀಡಬೇಕು. ಕೆಲಸದ ಸ್ಥಳದಲ್ಲಿ ಕುಡಿಯಲು ಶುದ್ದ ನೀರು, ಬಿಸಿಲಿನ ತಾಪಕ್ಕೆ ಬಳಲಿದವರಿಗೆ ನೆರಳು ಮತ್ತು ವೈದ್ಯಾಧಿಕಾರಿಗಳ ತಪಾಸಣೆ ವ್ಯವಸ್ಥೆ ಕಲ್ಪಿಸಬೇಕು. ಖಾತ್ರಿ ಕಾರ್ಮಿಕರಿಗೆ ಕನಿಷ್ಟ ವೇತನ 600ಕ್ಕೇರಿ ಸಬೇಕು. ರಾಜ್ಯದಲ್ಲಿ ಬರಗಾಲ ಛಾಯೆಯಿರುವುದರಿಂದ ನಮೂನೆ-6 ಅರ್ಜಿ ಸಲ್ಲಿಸಿದ ಪ್ರತಿ ಕುಟುಂಬಕ್ಕೆ 150 ದಿನಗಳ ಕೆಲಸ ನೀಡಬೇಕೆಂದರು. ಇದೇ ವೇಳೆ ಅಖಿಲ ಭಾರತ ಕೃಷಿ ಕೂಲಿಕಾರರ ಸಂಘ ಸಂಯೋಜಿತ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ಮುಖಂಡರಾದ ಬಿ.ಗಂಗಾಧರ, ಕಾರೆಕಾಯಿ ವೀರೇಶ, ಎಮ್.ಅಡಿವೆಪ್ಪ, ಹೆಚ್.ತಿಮ್ಮಪ್ಪ, ತಿರುಮಲೇಶ ನಾಯಕ್, ಬಿ.ರಾಮಪ್ಪ, ಇನ್ನಿತರರು ಇದ್ದರು.



☛ ಉದಯವಾಹಿನಿ ಚಿತ್ರ

## ಕಾಂಗ್ರೆಸ್ ಕೊಲೆಗಡಕರನ್ನು ಬಂಧನ ಮಾಡಬೇಕಾದ್ರೆ ನೂರು ಬಾರಿ ಯೋಚಿಸುತ್ತದೆ: ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ

• ಉದಯವಾಹಿನಿ ಹುಬ್ಬಳ್ಳಿ

ಕಾಂಗ್ರೆಸ್ ಸರ್ಕಾರ ಕೊಲೆಗಡಕರನ್ನು ಬಂಧನ ಮಾಡಬೇಕು ಅಂದ್ರೆ, ನೂರು ಬಾರಿ ಯೋಚನೆ ಮಾಡುತ್ತಾರೆ. ಲವ್ ಜಿಹಾದ್‌ನಲ್ಲಿ ತಪಿತಸ್ಥರನ್ನು ಒಳಗೆ ಹಾಕಬೇಕು ಅಂದ್ರೆ ಅಲ್ಪಸಂಖ್ಯಾತರಿಗೆ ನೋವು ಆಗುತ್ತದೆ. ಕಾಂಗ್ರೆಸ್ ಸರ್ಕಾದ ಇದು ಧೋರಣೆ ಇದೆ ಅಲ್ಲಾ ಅಲ್ಪಸಂಖ್ಯಾತ ತುಷ್ಟಿಕರಣ ರಾಜಕಾರಣ ಅನುಸರಿಸುತ್ತೀದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಕೇರಳಾ ಮಾದರಿಯಲ್ಲಿ ಸಾಗುತ್ತಾ ಇದೆ. ಮಹಿಳೆಯರ ವಿರುದ್ಧ ನಡೆಯುವ ಪ್ರಕರಣಗಳು ರಾಜ್ಯ ಸರ್ಕಾರ ಎನ್ನು ಮಾಡುವುದಿಲ್ಲ ಎನ್ನುವುದಾಗಿದ್ದು, ಕಾಂಗ್ರೆಸ್ ಸರ್ಕಾರ ಕಣ್ಣುಮುಚ್ಚಿ ಕೊಂಡು ಕುಳಿತುಕೊಂಡಿದೆ. ಕೊಲೆಗಡಕರಿಗೆ ರಾಜ್ಯ ಸರ್ಕಾರ ಆಸರೆ ನೀಡತ್ತಾ ಇದೆ. ಹಿಂದೂ ಕುಟುಂಬಗಳಲ್ಲಿ ಭಯದ ವಾತಾವರಣ ನಿರ್ಮಾಣ ವಾಗಿದೆ. ರಾಜ್ಯ ಸರ್ಕಾರದ ನೀತಿಗಳು ರಾಜ್ಯದ ಕಾನೂನು ಸುವ್ಯವಸ್ಥೆ ಹದಗೆಡಲು ಕಾರಣವಾಗಿದೆ. ಲವ್ ಜಿಹಾದ್ ಪ್ರಕರಣಗಳು ಜಾಸ್ತಿ ಆಗತ್ತಾ ಇದೆ.

ಸದ್ದಾಂ ಹುಸೇನ್ ಪೊಲೀಸ್ ಮೇಲೆ ಹಲ್ಲೆ ಮಾಡಲು ಹೋಗಿದ್ದಾನೆ ಈ ಪ್ರಕರಣ ಇಡೀ ರಾಜ್ಯ ಸರ್ಕಾರ ತೆಲೆ ತಗ್ಗಿಸುವಂತಾಗಿದೆ. ಈ ಎಲ್ಲಾ ಪ್ರಕರಣ ಗಮನಿಸಿದ್ದಾಗ ಮತದಾರರು ತಕ್ಕ ಉತ್ತರ ನೀಡುತ್ತಾರೆ. ಹಿಂದೂ ವಿರುದ್ಧ ಸರ್ಕಾರ ರಾಜ್ಯದಲ್ಲಿ ಎನ್ನು ಇದೆ ಇದ್ದಕ್ಕೆ ತಕ್ಕ ಉತ್ತರ ಮತದಾರರು ಕೊಡುತ್ತಾರೆ.



☛ ಉದಯವಾಹಿನಿ ಚಿತ್ರ

**ಅಲ್ಪಸಂಖ್ಯಾತ ತುಷ್ಟಿಕರಣ ರಾಜಕಾರಣ**

**ದೇಶದ ದೃಷ್ಟಿಯಿಂದ, ಅಭಿವೃದ್ಧಿ ದೃಷ್ಟಿಯಿಂದ ಮತ್ತೊಮ್ಮೆ ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿ ಆಗಬೇಕು ಅಂತಾ ಎಲ್ಲರೂ ಬಿಜೆಪಿ ಪರವಾಗಿ ಎಲ್ಲರೂ ಕೈ ಜೋಡಿಸುತ್ತಾರೆ ಎಂಬುದು ನಮ್ಮಗೆ ಸಂಪೂರ್ಣ ವಿಶ್ವಾಸ ಇದೆ. 28 ಕ್ಷೇತ್ರದಲ್ಲಿ ಬಿಜೆಪಿ ಜೆಡಿಎಸ್ ಅಭ್ಯರ್ಥಿ ಗೆಲ್ಲುತ್ತಾರೆ ಎಂಬುದು ಸಂಪೂರ್ಣ ವಿಶ್ವಾಸ ಇದೆ -ಬಿ.ವೈ. ವಿಜಯೇಂದ್ರ**

## ಯುಜಿಡಿ ಅವಾಂತರ, ಮ್ಯಾನ್‌ಹೋಲ್‌ಗೆ ಸಿಲುಕಿದ ಕಾರು: ಪರಿಹಾರಕ್ಕೆ ಆಗ್ರಹ



☛ ಉದಯವಾಹಿನಿ ಚಿತ್ರ

• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ಪಟ್ಟಣದಲ್ಲಿ ಕಳೆದ ಒಂದು ದಶಕಗಳಿಂದ ಯುಜಿಡಿ ಒಳಚರಂಡಿ ವ್ಯವಸ್ಥೆ ಅವ್ಯವಸ್ಥೆಯಾಗಿಯೇ ಉಳಿದಿದೆ ಪಟ್ಟಣದ ಎಲ್ಲಡೆ ಈಗಲೂ ಸರಿಯಾದ ಸಂಪರ್ಕ ನೀಡಿಲ್ಲ ಬಹುತೇಕ ಕಡಗೆ ಮ್ಯಾನ್ ಹೋಲ್‌ಗಳು ಓಪನ್ ಆಗಿವೆ ಇವೆ

ಇದರಿಂದ ಸಂಚರಿಸುವ ವಾಹನಗಳಿಗೆ ಜನರಿಗೆ ತೊಂದರೆ ಆದರೂ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮಾತ್ರ ಇದಕ್ಕೂ ನಮಗೂ ಸಂಬಂಧವೇ ಇಲ್ಲವೆಂಬಂತೆ ಇದ್ದಾರೆ. ಇದಕ್ಕೆ ತಾಜಾ ಉದಾಹರಣೆ ಎಂಬಂತೆ ಶನಿವಾರ ಪಟ್ಟಣದ ತಂಗಡಗಿ ರಸ್ತೆಯ ಬಸವನಗರ ಬಡಾವಣೆಯಲ್ಲಿ ತೆರೆದ ಮ್ಯಾನಹೋಲ್ ನಿಂದ ಬೆಲೆ ಬಾಳುವ ಕಾರು ಸಿಲುಕಿ ವಾಹನ ಮಾಲಿಕರು ಪರದಾಡಿದ ಘಟನೆ ನಡೆದಿದೆ.

ಬಸವ ನಗರ ನಿವಾಸಿ ಕಲಬುರಗಿ ಹೈಕೋರ್ಟ್‌ನ ನೌಕರ ರಾಜು ಜಾಧವ ಅವರ ಕೀಯಾ ಕಂಪನಿಯ ಕಾರಿನ ಮುಂಭಾಗದ ಟೈರ್ ಮ್ಯಾನ್ ಹೋಲ್ ಒಳಗೆ ಸಂಪೂರ್ಣ ಸಿಲುಕಿದೆ ಕಾರು ಹೊರಬರಲು ಸಾಧ್ಯವಾಗುತ್ತಿಲ್ಲ ಈ ಬಗ್ಗೆ ಮಾತನಾಡಿದ ರಾಜು ಜಾಧವ ಒಳಚರಂಡಿ ಚೇಂಬರ್ ಗುಂಡಿ ಕಳೆದ ಒಂದು ವರ್ಷದಿಂದ ಮುಚ್ಚದೆ ಬಿಟ್ಟಿದ್ದಾರೆ ನನ್ನ ಕೀಯಾ ಕಂಪನಿಯ ಕಾರು ಸಿಲುಕಿದೆ ಒಂದುವರೆ ಲಕ್ಷ ರೂ ಹಾನಿಯಾಗಿದೆ ಇದಕ್ಕೆ ಪರಿಹಾರ ಯಾರು ನೀಡ್ತಾರೆ? ಸಂಬಂಧಿಸಿದ ಇಲಾಖೆಯವರು ಪರಿಹಾರ ಭರಿಸಬೇಕು ಇಲ್ಲಾಂದ್ರೆ ಕೋರ್ಟ್ ಗೆ ಹೋಗಬೇಕಾಗುತ್ತದೆ ಎಂದರು.

### ಕಳಪೆ ಕಾಮಗಾರಿ

**ಬಿಜೆಪಿ ಮುಖಂಡ ಮಾಜಿ ತಾಪಂ ಸದಸ್ಯ ಪ್ರೇಮಸಿಂಗ್ ಚವ್ಹಾಣ ಮಾತನಾಡಿ ಮುದ್ದೇಬಿಹಾಳ ಪಟ್ಟಣದಲ್ಲಿ ಯುಜಿಡಿ ಒಳಚರಂಡಿಗಳು ಸಮರ್ಪಕವಾಗಿ ಮಾಡಿಲ್ಲ ಕೋಟ್ಯಾಂತರ ರೂಪಾಯಿ ಕಾಮಗಾರಿ ಕಳಪೆಯಾಗಿದೆ ಇದರ ಪರಿಣಾಮವಾಗಿ ಎಲ್ಲಾ ಮ್ಯಾನ್ ಹೋಲ್‌ಗಳು ಓಪನ್ ಇವೆ ಇನ್ನೂ ಒಳಚರಂಡಿ ಸಂಪರ್ಕ ನೀಡಿಲ್ಲ ಜನರಿಗೆ ತುಂಬಾ ತೊಂದರೆ ಆಗುತ್ತಿದೆ ಇವತ್ತು ನಮ್ಮ ಬಸವ ನಗರ ಬಡಾವಣೆಯ ಒಳಚರಂಡಿ ಗುಂಡಿಯಲ್ಲಿ ಕಾರು ಸಿಲುಕಿದೆ ಕಾರಿನ ನಷ್ಟ ಯಾರು ಭರಿಸುತ್ತಾರೆ? ಡ್ರೈನಜ್ ಓಪನ್ ಬಗ್ಗೆ ಕಳೆದ ಹತ್ತು ತಿಂಗಳಿಂದ ಪುರಸಭೆ ಸದಸ್ಯರು ಯುಜಿಡಿ ಅಧಿಕಾರಿಗಳ ಗಮನಕ್ಕೆ ತಂದರು ದುರಸ್ತಿ ಮಾಡಿಲ್ಲ ಸಂಬಂಧಿಸಿದ ಯುಜಿಡಿ ಅಧಿಕಾರಿಗಳ ಮೇಲೆ ಕಾನೂನು ಕ್ರಮಕೈಗೊಳ್ಳಬೇಕು ಕಳಪೆ ಕಾಮಗಾರಿ ಬಗ್ಗೆ ತನಿಖೆ ಮಾಡಬೇಕು ಶಾಸಕರಾದ ನಾಡಗೌಡ ಇತ್ತ ಗಮನ ಹರಿಸಬೇಕು ಎಂದು ಆಗ್ರಹಿಸಿದರು.**

## ಈ ರೀತಿ ವಿಡಿಯೋಗಳು ಇದ್ದಾಗ ಬ್ಲರ್ ಮಾಡಬೇಕಿತ್ತು

• ಉದಯವಾಹಿನಿ ಹಾಸನ

ಅಶ್ಲೀಲ ವಿಡಿಯೋ ಪ್ರಕರಣ ಸಂಬಂಧಿಸಿದಂತೆ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಮಾತನಾಡಿದ್ದು, ಒಂದೇ ಒಂದು ಬಹಳ ದುಃಖ ತಂದಿದೆ. ನಮ್ಮ ಸುತ್ತಮುತ್ತಲಿನ ಜನ ನೋಡಿ ಹೇಳಿದ್ರು. ಈ ರೀತಿ ವಿಡಿಯೋಗಳು ಇದ್ದಾಗ ಬ್ಲರ್ ಮಾಡಬೇಕಿತ್ತು. ಸಾಮಾಜಿಕ ಜಾಲತಾಣದಲ್ಲಿ ಹಾಕಿರುವುದು ಸರಿಯಲ್ಲ, ನಾನು ವಿಡಿಯೋ ನೋಡೋಕೆ ಧೈರ್ಯ ಮಾಡಿಲ್ಲ ಎಂದು ಹೇಳಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ನಿಖಿಲ್ ಕುಮಾರಸ್ವಾಮಿ, ದೇವೇಗೌಡರು, ಕುಮಾರಸ್ವಾಮಿ ಅದರಲ್ಲೂ ದೇವೇಗೌಡರು ಜೀವನ ತೆರೆದ ಪುಸ್ತಕ. ದೇವೇಗೌಡರಾಗಲಿ ನಮ್ಮ ಅಜ್ಜಿ ಯುವಕರಿಗೆ ಸ್ಪೂರ್ತಿ. ದಂಪತಿಗಳು ಯಾವ ರೀತಿ ಬದುಕಿ ಬಾಳಬೇಕು ಎಂಬದಕ್ಕೆ ಅವರೇ ಉದಾಹರಣೆ ಎಂದು ಹೇಳಿದ್ದಾರೆ.



☛ ಉದಯವಾಹಿನಿ ಚಿತ್ರ

ದಯಮಾಡಿ ನಾನು ಕೈ ಜೋಡಿಸಿ ಮನವಿ ಮಾಡ್ತೀನಿ. ದೇವೇಗೌಡರಿಗೆ 91-92 ವರ್ಷ ವಯಸ್ಸು. ಸಹಜವಾಗಿ ಈ ಎಲ್ಲ ವಿಷಯ ಕೇಳಿ ಅವರ ಮನಸ್ಸಿನ ಮೇಲೆ ಪರಿಣಾಮ ಬೀರುತ್ತೆ. ಯಾರು ಸಹ ಊಹೆ ಮಾಡೋಕೆ ಆಗಲ್ಲ. ಈಗಲೂ ಹೇಳಿದ್ರು ಬೆಳಗ್ಗೆ 5 ಗಂಟೆಗೆ ದೇವಸ್ಥಾನಕ್ಕೆ ಹೋಗಿ 9 ಗಂಟೆಗೆ ಬಂದೆ ಅಂತ. ಎಲ್ಲರಿಗಿಂತ ಜಾಸ್ತಿ ನೊಂದಿದ್ದಾರೆ ಎಂದು ಮೊಮ್ಮಗ ನಿಖಿಲ್? ಕುಮಾರಸ್ವಾಮಿಯವರು ಅಜ್ಜ-ಅಜ್ಜಿ ಬಗ್ಗೆ ಮಾತನಾಡಿದ್ದಾರೆ. ಈ ಒಂದು ಪ್ರಕರಣದಲ್ಲಿ ರಾಜಕೀಯವಾಗಿ ರಾಜ್ಯದ ಜನತೆಗೆ ತಪ್ಪು ಸಂದೇಶ ಕೊಡ್ತಾ ಇದ್ದಾರೆ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ.

## ಬಸ್ ಅಪಘಾತ: 8 ಜನರ ಸ್ಥಿತಿ ಗಂಭೀರ

• ಉದಯವಾಹಿನಿ ಚಿಕ್ಕಮಗಳೂರು

ನಿಯಂತ್ರಣ ತಪ್ಪಿ ಸಾರಿಗೆ ಸಂಸ್ಥೆ ಬಸ್ ಪಲ್ಟಿಯಾದ ಘಟನೆ ಎಂಸಿ ಹಳ್ಳಿ ಬಳಿ ರಾಷ್ಟ್ರೀಯ ಹೆದ್ದಾರಿ 206ರಲ್ಲಿ ನಡೆದಿದೆ. ಶಿವಮೊಗ್ಗದಿಂದ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್ ಆರ್ ಟಿಸಿ ಬಸ್ ಅಪಘಾತಕ್ಕೀಡಾಗಿದೆ. ತರೀಕೆರೆ ತಾಲ್ಲೂಕಿನ ಎಂಸಿ ಹಳ್ಳಿ ಬಳಿ ರಸ್ತೆ ಕಾಮಗಾರಿ ನಡೆಯುತ್ತಿದ್ದು, ಅರ್ಧಕ್ಕೆ ನಿಂತಿದ್ದ ರಸ್ತೆ ಕಾಣದೆ ಚಾಲಕ ಬಸ್ ಚಲಾಯಿಸಿದ್ದಾರೆ.ಪರಿಣಾಮ ಹಾಳಾಗಿರುವ ರಸ್ತೆ ಇಳಿಯುತ್ತಿದ್ದಂತೆ ಬಸ್ ಪಲ್ಟಿಯಾಗಿದೆ. ಈ ವೇಳೆ ಬಸ್‌ನಲ್ಲಿ 20ಕ್ಕೂ ಅಧಿಕ ಮಂದಿ ಪ್ರಯಾಣಿಕರು ಪ್ರಯಾಣಿಸುತ್ತಿದ್ದು, 8 ಜನರಿಗೆ ಗಂಭೀರ ಗಾಯಗಳಾಗಿವೆ. ಇನ್ನೂ ಉಳಿದವರಿಗೆ ಚಿಕ್ಕಪುಟ್ಟ ಗಾಯಗಳಾಗಿವೆ ಎಂದು ತಿಳಿದುಬಂದಿದೆ. ಗಾಯಾಳುಗಳಿಗೆ ಶಿವಮೊಗ್ಗ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನೂ ತರೀಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕಳಪೆ ರಸ್ತೆಯಿಂದಾಗಿ ಈ ಅವಘಡ ಸಂಭವಿಸಿದೆ ಎಂದು ಹೇಳಲಾಗುತ್ತಿದೆ.



☛ ಉದಯವಾಹಿನಿ ಚಿತ್ರ

## ಅಕ್ರಮವಾಗಿ ಸಂಗ್ರಹಿಸಿಟ್ಟ ಮದ್ಯ ಜಪ್ತಿ



☛ ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಳಗಾವಿ

ಲೋಕಸಭೆ ಚುನಾವಣೆಯಲ್ಲಿ ಹಣ, ಹೆಂಡದ ಹೊಳೆ ಹರಿಯುತ್ತಲೇ ಇದೆ. ಲೀಟರ್‌ಗಟ್ಟಲೆ ಮದ್ಯ ಸೀಜ್ ಆಗುತ್ತಿದ್ದರೂ ಅಲ್ಲಿಲ್ಲಿ ಮತದಾರರಿಗೆ ಮದ್ಯ ಹಂಚಿ ಮತ ಕೇಳಲಾಗ್ತಿದೆ. ಇಂದೂ ಕೂಡಾ ಅಕ್ರಮ ಮದ್ಯವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಹೊಳಿಹೊಸುರ ಗ್ರಾಮದಲ್ಲಿ ಚುನಾವಣೆ ನಿಮಿತ್ತ ಹಂಚಲು ಅಕ್ರಮವಾಗಿ ಕೂಡಿಟ್ಟ ಅಪಾರ ಪ್ರಮಾಣದ ಮದ್ಯವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಗ್ರಾಮದ ಹಳೆಯ ಮನೆಯೊಂದರಲ್ಲಿ ಸಂಗ್ರಹಿಸಿಟ್ಟಿದ್ದ 890 ಲೀಟರ್ ಮದ್ಯದ ಬಾಕ್ಸ್‌ಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಬೈಲಹೊಂಗಲ ಮತ್ತು ಕಿತ್ತೂರು ಪೊಲೀಸ್ ಠಾಣೆಯ ತಂಡ ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಮದ್ಯ ವಶಪಡಿಸಿಕೊಂಡಿದೆ. ಈ ಕುರಿತು ಬೈಲಹೊಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಂಗಳೂರು ವಿಮಾನ ನಿಲ್ದಾಣಕ್ಕೆ ಬಾಂಬ್ ಬೆದರಿಕೆ ಕೆಲವೇ ಗಂಟೆಗಳಲ್ಲಿ ಸ್ಫೋಟ ಎಂದು ಇ ಮೇಲ್

• ಉದಯವಾಹಿನಿ ಮಂಗಳೂರು

ಮಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಾಂಬ್ ಬೆದರಿಕೆ ಕರೆ ಬಂದಿದ್ದು, ಕೆಲವೇ ಗಂಟೆಗಳಲ್ಲಿ ಎಲ್ಲಾ ಬಾಂಬ್‌ಗಳು ಸ್ಫೋಟಗಳ್ಳಲಿವೆ ಎಂದು ಉಗ್ರರ ಹೆಸರಿನಲ್ಲಿ ಇ-ಮೇಲ್ ಬೆದರಿಕೆ ಹಾಕಲಾಗಿದೆ.

ಇಂದು ಮಂಗಳೂರಿನ ವಿಮಾಶನ ನಿಲ್ದಾಣಕ್ಕೆ ಬಾಂಬ್ ಬೆದರಿಕೆ ಕರೆ ಬಂದಿದ್ದು, ವಿಮಾನಗಳಲ್ಲಿ ಬಾಂಬ್‌ಗಳನ್ನು ಇಡಲಾಗಿದೆ.

ಕೆಲವೇ ಗಂಟೆಗಳಲ್ಲಿ ಎಲ್ಲಾ ಬಾಂಬ್‌ಗಳು ಸ್ಫೋಟಗೊಳ್ಳಲಿವೆ ಎಂದು ಉಗ್ರರ ಹೆಸರಿನಲ್ಲಿ ಪೊಲೀಸರಿಗೆ ಇಮೇಲ್ ಮೂಲಕ ಬೆದರಿಕೆ ಬಂದಿದೆ. ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಪರಿಣಾಮಕಾರಿ

• ಉದಯವಾಹಿನಿ ಬೀದರ್

ಸಂವಿಧಾನ ಬದಲಿಸಲು ನಿರ್ಧರಿಸಿದ ಬಿಜೆಪಿಯನ್ನು ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಸೋಲಿಸಿ, ಜನಪರವಾಗಿ ಕೆಲಸ ಮಾಡುವ ಇಚ್ಛೆ ಹೊಂದಿರುವ ಕಾಂಗ್ರೆಸ್ ಗೆಲ್ಲಿಸಬೇಕು' ಎಂದು ಕಾಂಗ್ರೆಸ್ ಮುಖಂಡ ಧನರಾಜ ತಾಳಂಪಲ್ಲಿ ಹೇಳಿದರು.


ತಾಲ್ಲೂಕಿನ ಸೋಲದಾಪಕ ಗ್ರಾಮದಲ್ಲಿ ರಾತ್ರಿ ಹಮ್ಮಿಕೊಂಡ ಪ್ರಚಾರ ಸಭೆ ಉದ್ದೇಶಿಸಿ ಮಾತನಾಡಿದ ಅವರು ಬಿಜೆಪಿಯು ಪ್ರಜಾಪ್ರಭುತ್ವ, ಸಮಾನತೆ, ಬಹುತ್ವ, ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತರಲು ಯತ್ನಿಸುತ್ತಿದ್ದು, ಕೋಮುವಾದದ ಮೂಲಕ ರಾಜಕೀಯ ಮಾಡುತ್ತಿದೆ. ಆದರೆ, ಕಾಂಗ್ರೆಸ್‌ನವರು ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದ್ದಾರೆ. ಜತೆಗೆ, ಈ ಸಲದ ಚುನಾವಣೆ ಪ್ರಣಾಳಿಕೆಯಲ್ಲಿ ಉತ್ತಮ ಯೋಜನೆಗಳನ್ನು ಪ್ರಕಟಿಸಿದ್ದಾರೆ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಾಗರ ಖಂಡ್ರೆ ಅವರನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸಿ' ಎಂದು ಮತಯಾಚನೆ ಮಾಡಿದರು. ಗ್ರಾಮದ ಮುಖಂಡರಾದ ಅರ್ಜುನ್ ಕನಕ, ಮಹೇಶ್ ಮೈಸೆ, ಬಂಡೆಪ್ಪ ಮೇತ್ರೆ, ವೀರಣ್ಣ ಪಾಟೀಲ್, ಸದಾನಂದ ಹಳ್ಳೆ, ಜ್ಞಾನೇಶ್ವರ ಶಿಂಧೆ ಸೇರಿ ಹಲವರು ಉಪಸ್ಥಿತರಿದ್ದರು.



☛ ಉದಯವಾಹಿನಿ ಚಿತ್ರ

## ಭವಾನಿಗೆ ಎಸ್ ಐಟಿ ನೋಟಿಸ್

• ಉದಯವಾಹಿನಿ ಹಾಸನ



ಸಂತ್ರಸ್ತ ಮಹಿಳೆ ಕಿಡ್ನ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕ ಹೆಚ್.ಡಿ.ರೇವಣ್ಣ ಪತ್ನಿ ಭವಾನಿ ರೇವಣ್ಣ ಅವರಿಗೂ ಎಸ್ ಐಟಿ ನೋಟಿಸ್ ನೀಡಿದೆ.

ಮೈಸೂರು ಜಿಲ್ಲೆ ಕೆ.ಆರ್. ನಗರ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಭವಾನಿ ರೇವಣ್ಣ ಹೆಸರು ಉಲ್ಲೇಖವಾಗಿರುವ ಹಿನ್ನೆಲೆಯಲ್ಲಿ ಇಂದು ವಿಚಾರಣೆಗೆ ಹಾಜರಾಗುವಂತೆ ಭವಾನಿ ರೇವಣ್ಣಗೆ ನೋಟೀಸ್ ನೀಡಲಾಗಿದೆ.

ಸಂತ್ರಸ್ತೆ ಕಿಡ್ನ್ಯಾಪ್ ಮಾಡಿರುವ ಆರೋಪದಲ್ಲಿ ಕೆ.ಆರ್. ನಗರದಲ್ಲಿ ಎಫ್ ಐ ಆರ್ ದಾಖಲಾಗಿತ್ತು. ಇದೇ ಕೇಸ್ ಸಂಬಂಧ ಎಸ್ ಪಿ ಸೀಮಾ ಲಾಟ್ಕರ್ ನೇತೃತ್ವದಲ್ಲಿ 40ಕ್ಕೂ ಹೆಚ್ಚು ಕಡೆ ಅಧಿಕಾರಿಗಳು ಪರಿಶೀಲನೆ ನಡೆಸಿದ್ದರು. ಇದೀಗ ಭವಾನಿ ರೇವಣ್ಣಗೆ ನೋಟೀಸ್ ನೀಡಲಾಗಿದ್ದು, ಇಂದು ವಿಚಾರಣೆಗೆ ಹಾಜರಾಗುವ ಸಾಧ್ಯತೆ ಇದೆ.

## ಸಂಸದ ಪ್ರಜ್ವಲ್ ರೇವಣ್ಣ ನಿವಾಸದ 'ಕೀ' ವಶಪಡಿಸಿಕೊಂಡ ಪೊಲೀಸರು

• ಉದಯವಾಹಿನಿ ಹಾಸನ

ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರ ವಿರುದ್ಧ ಲೈಂಗಿಕ ದೌರ್ಜನ್ಯ ಪ್ರಕರಣ ದಾಖಲಾಗುತ್ತಿದ್ದಂತೆ ಸರ್ಕಾರ ಈ ಒಂದು ಪ್ರಕರಣವನ್ನು ಎಸ್ ಐ ಟಿ ಗೆ ವಹಿಸಿತ್ತು. ಎಸ್‌ಐಟಿ ತನಿಖೆಯನ್ನು ಚುರುಕುಗೊಳಿಸಿದ ತಕ್ಷಣ ನಿನ್ನೆ ಹಾಸನದ ಆರ್‌ಸಿ ರಸ್ತೆಯಲ್ಲಿರುವ ಸಂಸದರ ನಿವಾಸಕ್ಕೆ ಬೀಗ ಹಾಕಲಾಗಿತ್ತು.

ಎಸ್‌ಐಟಿ ಅಧಿಕಾರಿಗಳು ಸಂಸದರ ನಿವಾಸಕ್ಕೆ ಬಂದು ಸ್ಥಳ ಮಹಜರು ನಡೆಸಲಿದ್ದಾರೆ ಎಂಬ ಮಾಹಿತಿ ಬಂದ ತಕ್ಷಣ ಸಂಸದರ ನಿವಾಸಕ್ಕೆ ನಿನ್ನೆ ಬೀಗ ಹಾಕಲಾಗಿತ್ತು.ಆದರೆ ಸ್ಥಳೀಯ ಪೊಲೀಸರು, ಸಂಸದರ ನಿವಾಸದ ಕೀಯನ್ನು ಇದೀಗ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಪ್ರಜ್ವಲ್ ರೇವಣ್ಣ ಪಿಎ ಬಳಿ ಇದ್ದ ಕೀಯನ್ನು ಇದೀಗ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಇದೀಗ ಪ್ರಕರಣ ದಾಖಲಾಗುತ್ತಿದ್ದಂತೆ ಹಾಸನ ಪೊಲೀಸರು ಇದೀಗ ಪಿಎ ಬಳಿಕ ಪಡೆದುಕೊಂಡಿದ್ದಾರೆ.ಕೆಲವೇ ಹೊತ್ತಿನಲ್ಲಿ ಸಂಸದರ ನಿವಾಸಕ್ಕೆ ಎಸ್‌ಐಟಿ ತಂಡ ಎಂಟ್ರಿ ಕೊಡುವ ಸಾಧ್ಯತೆ ಇದೆ ಸಂತ್ರಸ್ತ ಮಹಿಳೆಯನ್ನು ಕರೆತಂದು ಸಂಸದರ ನಿವಾಸದಲ್ಲಿ ಸ್ಥಳ ಮಹಜರು ನಡೆಸಲಿದ್ದಾರೆ.

# ರಾಯಚೂರು ಬಿಸಿಲಿಗೆ 24 ಗಂಟೆಯಲ್ಲಿ 5 ಸಾವು: ಹೊತ್ತಿ ಉರಿದ ಕಾರು

## • ಕಲ್ಯಾಣ ಕರ್ನಾಟಕದ ಭಾಗದಲ್ಲಿ ಅದರಲ್ಲೂ ರಾಯಚೂರು, ಕಲಬುರಿಗಿಯಲ್ಲಿ ತಾಪಮಾನ ಅತೀ ಹೆಚ್ಚು

• ಉದಯವಾಹಿನಿ ರಾಯಚೂರು

ರಾಜ್ಯದಲ್ಲಿ ವಿವಿಧ ಜಿಲ್ಲೆಗಳಲ್ಲಿ ಮಳೆಯ ಸಿಂಚನವಾಗುತ್ತಿದ್ದರೂ ಸಹ ಬಿಸಿಲಿನ ಪ್ರಕೋಪ ಮಾತ್ರ ಇನ್ನೂ ಕಡಿಮೆಯಾಗಿಲ್ಲ. ರಾಯಚೂರು ಜಿಲ್ಲೆಯಲ್ಲಿ ತೀವ್ರ ಬಿಸಲಿನ ಶಾಖದಿಂದ ಒಂದೇ ದಿನ ನಾಲ್ವರು ಮೃತಪಟ್ಟಿದ್ದಾರೆ. ಕಾರಿಗೂ ಬೆಂಕಿ ಹೊತ್ತಿಕೊಂಡು ಉರಿದಿದೆ.

ಹೌದು, ರಾಜ್ಯದಲ್ಲಿ ಬಿಸಿಲಿನ ಶಾಖದಿಂದಾಗಿ 24 ಗಂಟೆಯಲ್ಲಿ ಐವರು ಮೃತಪಟ್ಟಿದ್ದಾರೆ. ಇದರಲ್ಲಿ ನಾಲ್ವರು ರಾಯಚೂರಿನ ಒಂದೇ ಜಿಲ್ಲೆ ವ್ಯಾಪ್ತಿಯಲ್ಲಿ ಮೃತಪಟ್ಟ ಘಟನೆ ಸಿಂಧನೂರು ತಾಲ್ಲೂಕಿನ ಮುಕ್ಕುಂದಾ ಗ್ರಾಮದಲ್ಲಿ ನಡೆದಿದೆ.

ಈ ಗ್ರಾಮ ವ್ಯಾಪ್ತಿಯಲ್ಲಿ ಅತ್ಯಧಿಕ ತಾಪಮಾನ ದಾಖಲಾಗಿದ್ದು, 45 ಡಿಗ್ರಿ ಸೆಲ್ಸಿಯಸ್‌ಗೂ ಹೆಚ್ಚು ಬಿಸಿಲು ದಾಖಲಾಗಿತ್ತು. ತೀವ್ರ ತಾಪಮಾನದಿಂದ ಉಂಟಾದ ನಿರ್ಜಲೀಕರಣ ಕಾರಣದಿಂದಾಗಿ ನಾಲ್ವರು ನಿಧನರಾಗಿದ್ದಾರೆ.

ಹಳ್ಳಕ್ಕೆ ಸಂಜೆ ಬಟ್ಟೆ ತೊಳೆಯಲು ಹೋಗಿದ್ದ ವೀರೇಶ ಮಡಿವಾಳ (51) ಅವರು, ಅಂಗವಿಕಲ ಪ್ರದೀಪ್ ತಿಮ್ಮಣ್ಣ ಪೂಜಾರಿ (15), ಗಂಗಮ್ಮ ದೇವದಾಸಿ (60) ಹಾಗೂ ತುಮಕೂರಿನಲ್ಲಿ ದುರ್ಗಮ್ಮ ಹನುಮಮಂತಪ್ಪ ಉಪ್ಪಾರ್ (60) ಅವರು ಬಿಸಿಲಿನಿಂದಾಗಿ ಮೃತಪಟ್ಟಿದ್ದಾರೆ.

ರಾಯಚೂರಿನ ಜಾಲಿಬೆಂಚಿ ನಿವಾಸಿಯಾದ ಹನುಮಂತ (44) ಇವರು ಜಮೀನಿನಿಂದ ಮನೆಗೆ ಬರುವಾಗಿ ದೇವಸ್ಥಾನಕ್ಕೆ ಭೇಟಿ ಕೊಟ್ಟು ಮನೆಗೆ ಬಂದಿದ್ದರು. ಮನೆಗೆ ಬರುವಷ್ಟರಲ್ಲಿ ಬಿಸಿಲಿಗೆ ಸಾಕಷ್ಟು ಆಯಾಸಗೊಂಡಿದ್ದರು. ಬಾಯಾರಿಕೆಯಾಗಿ ಮನೆಗೆ ಬಂದು ನೀರು ಕುಡಿಯುವಷ್ಟರಲ್ಲಿ ಕುಸಿದು ಬಿದ್ದು ಉಸಿರು ಚೆಲ್ಲಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಯಚೂರು ಭಾಗದಲ್ಲಿ ಕಳೆದ ಒಂದು ವಾರದಿಂದ ಅತ್ಯಧಿಕ ಬಿಸಿಲು ಕಂಡು ಬರುತ್ತಿದೆ. ಕಲ್ಯಾಣ ಕರ್ನಾಟಕದ ಭಾಗದಲ್ಲಿ ಅದರಲ್ಲೂ ರಾಯಚೂರು, ಕಲಬುರಿಗಿಯಲ್ಲಿ ತಾಪಮಾನ ಅತೀ ಹೆಚ್ಚು ಎನ್ನಬಹುದು.

ಈ ವರ್ಷ ರಾಯಚೂರು ಮತ್ತು ಸಿಂಧನೂರಿನಲ್ಲಿ ಹೆಚ್ಚು ಬಿಸಿಲಿನಿಂದ ಸುಸ್ತು, ನಿರ್ಜಲೀಕರಣ ಸೇರಿದಂತೆ ಹಲವು ಅನಾರೋಗ್ಯ ಕಾರಣದಿಂದಾಗಿ ಇವರೆಲ್ಲ ಮೃತಪಟ್ಟಿದ್ದಾರೆ ಎನ್ನಲಾಗಿದೆ. ಮೂವರಿಗೆ ನಿರ್ಜಲೀಕರಣವಾಗಿತ್ತು, ಎಂದಿರುವ ವೈದ್ಯರು ಪರಿಶೀಲನೆ ನಡೆಸಿದ್ದಾರೆ ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

**ಕಳೆದ ಒಂದು ವಾರದಿಂದ ಜಿಲ್ಲೆಯ ವ್ಯಾಪ್ತಿಯಲ್ಲಿ ಬಿಸಿಲಿನ ಝಳ, ಶಾಖದ ಅಲೆ ಹೆಚ್ಚಾಗಿದೆ. ವಾಡಿಕೆಗಿಂತ ಹೆಚ್ಚಿನ ತಾಪಮಾನ (45 ಡಿಗ್ರಿ ಸೆಲ್ಸಿಯಸ್‌ಗೂ ಅಧಿಕ) ಕಂಡು ಬರುತ್ತಿದೆ. ಈ ಕಾರಣದಿಂದ ರೈತರು ಜಮೀನಿಗಳಿಗೆ ತೆರಳವುದು, ಮಧ್ಯಾಹ್ನ ಆಗುತ್ತಿದ್ದಂತೆ ಮನೆಯಿಂದ ಹೊರ ಬರಬಾರದು. ಆಗಾಗ ನೀರು ಕುಡಿಯಬೇಕು. ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಇಲ್ಲಿನ ಆರೋಗ್ಯಾಧಿಕಾರಿಗಳು ಜನರಲ್ಲಿ ಮನವಿ ಮಾಡಿದ್ದಾರೆ. -ಆರೋಗ್ಯಾಧಿಕಾರಿ**



☛ ಉದಯವಾಹಿನಿ ಚಿತ್ರ


**ಅತ್ಯಧಿಕ ತಾಪಮಾನ ದಾಖಲು**

### ಕಾರಿಗೆ ಬೆಂಕಿ

**ಜಿಲ್ಲೆಯ ಶಕ್ತಿನಗರ ವ್ಯಾಪ್ತಿಯ ಹೈದರಾಬಾದ್-ರಾಯಚೂರು ಹೆದ್ದಾರಿಯಲ್ಲಿ ಚಲಿಸುತ್ತಿದ್ದ ಕಾರಿಗೆ ಬೆಂಕಿ ಹೊತ್ತಿಕೊಂಡಿದೆ. ಮೊದಲು ಹೊಗೆ ಕಾಣಿಸಿಕೊಂಡಿದೆ. ಕಾರು ನಿಧಾನ ಮಾಡಿದ ಚಾಲಕನಿಗೆ ಕಾರಿಗೆ ಬೆಂಕಿ ಹೊತ್ತಿಕೊಂಡಿರುವುದು ಗೊತ್ತಾಗಿದೆ. ಕೂಡಲೇ ಅವರು ರಸ್ತೆ ಬದಿಗೆ ಕಾರು ನಿಲ್ಲಿಸಿ ಹೊರಕ್ಕೆ ಬಂದಿದ್ದಾರೆ.**

### ಬಹಳಷ್ಟು ಹಾನಿ

**ನಂತರ ಆ ಕಾರು ಚಾಲಕ ಅಗ್ನಿ ಶಾಮಕಕ್ಕೆ ಕರೆ ಮಾಡಿ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ದೌಡಾಯಿಸಿದ ಅಗ್ನಿ ಶಾಮಕ ಸಿಬ್ಬಂದಿ ಅಗ್ನಿ ನಂದಿಸುವ ಕಾರ್ಯ ನಡೆಸಿದರು. ಕಾರಿನ ಎಂಜಿನ್ ಭಾಗದಲ್ಲಿ ಬೆಂಕಿ ಹೊತ್ತಿಕೊಂಡಿದ್ದ ಕಾರಣ ಕಾರಿಗೆ ಬಹಳಷ್ಟು ಹಾನಿ ಆಗಿದೆ.**



# ಗುಜರಾತ್ ವಿರುದ್ಧ ಆರ್‌ಸಿಬಿಗೆ ಭರ್ಜರಿ ಗೆಲುವು

## ಹ್ಯಾಟ್ರಿಕ್ ಜಯ ದಾಖಲಿಸಿದ ಫಾಫ್ ಪಡೆ

ಆರಂಭಿಕರಾಗಿ ಕಣಕ್ಕಿಳಿದ ನಾಯಕ ಫಾಫ್ ಡುಪ್ಲೆಸಿಸ್ ಹಾಗೂ ವಿರಾಟ್ ಕೊಹ್ಲಿ ಸೇರಿ 5,5 ಓವರ್‌ಗೆ 92 ರನ್ ಸಿಡಿಸಿದರು. ಫಾಫ್ ಡುಪ್ಲೆಸಿಸ್ 23 ಎಸೆತದಲ್ಲಿ 3 ಸಿಕ್ಸ್ ಮತ್ತು 10 ಫೋರ್ ಮೂಲಕ 64 ರನ್ ಸಿಡಿಸಿದರು

ಐಪಿಎಲ್ 2024ರ 53ನೇ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು (ಖಅಃ ತ ಉಖ) ತಂಡಗಳು ಮುಖಾಮುಖಿ ಆದವು. ಈ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಖಅಃ ಬೌಲಿಂಗ್ ಮುಂದೆ ಸಾಷ್ಟಾಂಗ ನಮಸ್ಕಾರ ಮಾಡಿತು. ಟಾಸ್ ಗೆದ್ದ ಆರ್‌ಸಿಬಿ ನಾಯಕ ಫಾಫ್ ಡುಪ್ಲೆಸಿಸ್ ಮೊದಲು ಬೌಲಿಂಗ್ ಆಯ್ಕೆ ಮಾಡಿದರು. ಆದರೆ ಮೊದಲು ಬ್ಯಾಟಿಂಗ್ ಆರಂಭಿಸಿದ ಗುಜರಾತ್ ತಂಡಕ್ಕೆ ಆರಂಭದಿಂದಲೂ ಸಂಕಷ್ಟಗಳ ಮೇಲೆ ಸಂಕಷ್ಟ ಎದುರಾಯಿತು. ಈ ಮೂಲಕ ಗುಜರಾತ್ ತಂಡವು 19.3 ಓವರ್‌ಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 147 ರನ್ ಸಿಡಿಸಿತು. ಈ ಸುಲಭ ಗುರಿ ಬೆನ್ನಟ್ಟಿದ ಬೆಂಗಳೂರು ತಂಡ 13.4 ಓವರ್‌ಗೆ 6 ವಿಕೆಟ್ ನಷ್ಟಕ್ಕೆ 152 ರನ್ ಗಳಿಸಿ 4 ವಿಕೆಟ್ ಗಳ ಭರ್ಜರಿ ಗೆಲುವು ದಾಖಲಿಸಿತು.

**ಅಬ್ಬರಿಸಿದ ಆರ್‌ಸಿಬಿ ತಂಡ:** ಇನ್ನು, 148 ರನ್ ಟಾರ್ಗೆಟ್ ಬೆನ್ನಟ್ಟಿದ ತಂಡ ಆರಂಭದಿಂದಲೇ ಭರ್ಜರಿಯಾಗಿ ಬ್ಯಾಟಿಂಗ್ ಮಾಡಿತು. ಈ ವೇಳೆ ಆರಂಭಿಕರಾಗಿ ಕಣಕ್ಕಿಳಿದ ನಾಯಕ ಫಾಫ್ ಡುಪ್ಲೆಸಿಸ್ ಹಾಗೂ ವಿರಾಟ್ ಕೊಹ್ಲಿ ಸೇರಿ 5,5 ಓವರ್‌ಗೆ 92 ರನ್ ಸಿಡಿಸಿದರು. ಫಾಫ್ ಡುಪ್ಲೆಸಿಸ್ 23 ಎಸೆತದಲ್ಲಿ 3 ಸಿಕ್ಸ್ ಮತ್ತು 10 ಫೋರ್ ಮೂಲಕ 64 ರನ್ ಸಿಡಿಸಿದರು. ವಿರಾಟ್ ಕೊಹ್ಲಿ 27 ಎಸೆತದಲ್ಲಿ 4 ಸಿಕ್ಸ್ ಹಾಗೂ 2 ಬೌಂಡರಿ ಮೂಲಕ 42 ರನ್ ಗಳಿಸಿ ಮಿಂಚಿದರು. ವಿಲ್ ಜ್ಯಾಕ್ಸ್ 1 ರನ್, ರಜತ್ ಪಾಟಿದಾರ್ 2 ರನ್, ಗ್ಲೇನ್ ಮ್ಯಾಕ್ಸ್‌ವೆಲ್ 4 ರನ್, ಕ್ಯಾಮರೂನ್ ಗ್ರೀನ್ 1 ರನ್ ಗಳಿಸಿದರೆ ಕೊನೆಯಲ್ಲಿ ದಿನೇಶ್ ಕಾರ್ತಿಕ್ 21 ರನ್ ಹಾಗೂ ಸ್ವಪ್ನಿಲ್ ಸಿಂಗ್ 15 ರನ್ ಸಿಡಿಸಿದರು.



ವಿರಾಟ್ ಕೊಹ್ಲಿ ಭರ್ಜರಿ ಬ್ಯಾಟಿಂಗ್



ಫಾಫ್ ಡುಪ್ಲೆಸಿಸ್ 64 ರನ್

ವಿರಾಟ್ ಕೊಹ್ಲಿ 27 ಎಸೆತದಲ್ಲಿ 4 ಸಿಕ್ಸ್ ಹಾಗೂ 2 ಬೌಂಡರಿ ಮೂಲಕ 42 ರನ್

## ಆರ್‌ಸಿಬಿ ಬೌಲರ್‌ಗಳ ಅಬ್ಬರಕ್ಕೆ ಗುಜರಾತ್ ಪಡೆ ತತ್ತರ

### ಬೆಂಗಳೂರಲ್ಲಿ ಮುಗ್ಗರಿಸಿದ ಗುಜರಾತ್

**ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಗುಜರಾತ್ ಟೈಟಾನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವಿನ ಪಂದ್ಯದಲ್ಲಿ ಖಅಃ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು, ಆದರೆ ಗುಜರಾತ್ ಮೊದಲು ಬ್ಯಾಟಿಂಗ್ ಮಾಡಲು ಸವಾಲು ತಂಡಕ್ಕದ್ದೆ ದೊಡ್ಡ ಹಿನ್ನಡೆಯಾಯಿತು. ಗುಜರಾತ್ ಟೈಟಾನ್ಸ್ ತಂಡದ ಬ್ಯಾಟಿಂಗ್ ಅತ್ಯಂತ ಕಳಪೆ ಆರಂಭವನ್ನು ಪಡೆಯಿತು. ಆರ್‌ಸಿಬಿ ಮೊದಲ 5 ಓವರ್‌ಗಳಲ್ಲಿ 3 ವಿಕೆಟ್ ಕಳೆದುಕೊಂಡಿತು. ಗುಜರಾತ್ ಟೈಟಾನ್ಸ್ ಪರ ಶಾರುಖ್ ಖಾನ್ 37 ರನ್, ಡೇವಿಡ್ ಮಿಲ್ಲರ್ 30 ರನ್, ರಾಹುಲ್ ತೆವಾಟಿಯಾ 35 ರನ್, ರಶೀದ್ ಖಾನ್ 18 ರನ್, ವಿಜಯ್ ಶಂಕರ್ 10 ರನ್ ಗಳಿಸಿದರು. ಆದರೆ ಬೇರೆ ಯಾವುದೇ ಬ್ಯಾಟ್ಸ್‌ಮನ್ ಎರಡಂಕಿಯ ರನ್ ಗಳಿಸಲು ಸಾಧ್ಯವಾಗಲಿಲ್ಲ. ಉಳಿದಂತೆ ಗುಜರಾತ್ ಪರ ವೃದ್ಧಿಮಾನ್ ಸಾಹಾ 1 ರನ್, ನಾಯಕ ಶುಭ್‌ಮನ್ ಗಿಲ್ 2 ರನ್, ಸಾಯಿ ಸುದರ್ಶನ್ 6 ರನ್, ಮಾನವ್ ಸುತ್ತುರ್ 1 ರನ್, ಮೋಹಿತ್ ಶರ್ಮಾ ಶೂನ್ಯ, ನೂರ್ ಅಹ್ಮದ್ ಶೂನ್ಯಕ್ಕೆ ಪೆವಿಲಿಯನ್ ಸೇರಿದರು.**

**ಇನ್ನು, ಆರ್‌ಸಿಬಿ ಬೌಲರ್‌ಗಳಲ್ಲಿ ಮೊಹಮ್ಮದ್ ಸಿರಾಜ್, ಯಶ್ ದಯಾಳ್, ವಿಜಯಕುಮಾರ್ ತಲಾ 2 ವಿಕೆಟ್ ಪಡೆದರು. ಕ್ಯಾಮರೂನ್ ಗ್ರೀನ್ ಮತ್ತು ಕರಣ್ ಶರ್ಮಾ ತಲಾ 1 ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು. ಗುಜರಾತ್ ಟೈಟಾನ್ಸ್ 20 ಓವರ್ ಗಳಲ್ಲಿ 10 ವಿಕೆಟ್ ನಷ್ಟಕ್ಕೆ 147 ರನ್ ಗಳಿಸಿ ಆರ್ ಸಿಬಿ ಗೆಲುವಿಗೆ 148 ರನ್ ಗಳ ಸವಾಲನ್ನು ನೀಡಿತು. ಈ ಮೂಲಕ ಆರ್‌ಸಿಬಿ ತಂಡದ ಬೌಲಿಂಗ್ ದಾಳಿಗೆ ಗುಜರಾತ್ ಥಂಡಾ ಹೊಡೆಯಿತು. ಅದರಲ್ಲಿಯೂ ಪವರ್‌ಪ್ಲೇ ಸಮಯದಲ್ಲಿಯೇ ಮೊಹಮ್ಮದ್ ಸಿರಾಜ್ ಪ್ರಮುಖ 2 ವಿಕೆಟ್ ತೆಗೆದು ಅಬ್ಬರಿಸಿದರು. ಸಿರಾಜ್ ಕಳೆದ ಕೆಲ ಪಂದ್ಯಗಳಿಂದ ಫಾರ್ಮ್‌ನಲ್ಲಿದ್ದರು. ಆಧರೆ ಇಂದು ಸಿರಾಜ್ ಬೌಲಿಂಗ್ ಅದ್ಭುತವಾಗಿ ಕಂಡುಬಂದಿತು. ಅಲ್ಲದೇ ಇದು ಟಿ20 ವಿಶ್ವಕಪ್ ಸನಿಹವಾಗುತ್ತಿದ್ದಂತೆ ಸಿರಾಜ್ ಫಾರ್ಮ್‌ಗೆ ಮರಳಿರುವುದು ಸಂತಸದ ಸುದ್ದಿಯಾಗಿದೆ.**

ಆರ್‌ಸಿಬಿ ಬೌಲರ್‌ಗಳ ಅಬ್ಬರ

## ಟಿ20 ವಿಶ್ವಕಪ್‌ಗೆ ಆರ್‌ಸಿಬಿ ತಂಡದ 8 ಆಟಗಾರರು



ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಕಣಕ್ಕಿಳಿಯುತ್ತಿರುವ 8 ಆಟಗಾರರು ಟಿ20 ವಿಶ್ವಕಪ್‌ಗಾಗಿ ಆಯ್ಕೆ ಮಾಡಲಾದ ರಾಷ್ಟ್ರೀಯ ತಂಡಗಳಲ್ಲಿ ಸ್ಥಾನ ಪಡೆದಿದ್ದಾರೆ. ಆ ಆಟಗಾರರು ಯಾರೆಲ್ಲಾ ಯಾವ ದೇಶದ ಪರ ಕಣಕ್ಕಿಳಿಯಲಿದ್ದಾರೆ ಎಂಬುದರ ಸಂಪೂರ್ಣ ಮಾಹಿತಿ ಈ ಕೆಳಗಿನಂತಿದೆ...

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 17 ಮುಕ್ತಾಯದ ಬೆನ್ನಲ್ಲೇ ಟಿ20 ವಿಶ್ವಕಪ್ ಶುರುವಾಗಲಿದೆ. ಯುಎಸ್‌ಎ ಮತ್ತು ವೆಸ್ಟ್ ಇಂಡೀಸ್ ಜಂಟಿಯಾಗಿ ಆಯೋಜಿಸಲಿರುವ ಈ ಟೂರ್ನಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದಲ್ಲಿರುವ 8 ಆಟಗಾರರು ಆಯ್ಕೆಯಾಗಿದ್ದಾರೆ. ಆ ಆಟಗಾರರು ಯಾರೆಲ್ಲಾ ಎಂದು ನೋಡುವುದಾದರೆ...

ಟಿ20 ವಿಶ್ವಕಪ್‌ಗೆ ಆಯ್ಕೆ ಮಾಡಲಾದ ಭಾರತ ತಂಡದಲ್ಲಿ ಆರ್‌ಸಿಬಿ ಟೀಮ್‌ನಿಂದ ವಿರಾಟ್ ಕೊಹ್ಲಿ ಹಾಗೂ ಮೊಹಮ್ಮದ್ ಸಿರಾಜ್ ಆಯ್ಕೆಯಾಗಿದ್ದಾರೆ. ಈ ಇಬ್ಬರು ಆಟಗಾರರು ಟೀಮ್ ಇಂಡಿಯಾದ ಪ್ಲೇಯಿಂಗ್ ಇಲೆವೆನ್‌ನಲ್ಲಿ ಕಾಣಿಸಿಕೊಳ್ಳುವ ಸಾಧ್ಯತೆಯಿದೆ. 15 ಸದಸ್ಯರ ಆಸ್ಟ್ರೇಲಿಯಾ ಟಿ20 ವಿಶ್ವಕಪ್ ತಂಡದಲ್ಲಿ ಸ್ವಿಚ್ ಹಿಟ್ ಸ್ಪೆಷಲಿಸ್ಟ್ ಗ್ಲೆನ್ ಮ್ಯಾಕ್ಸ್‌ವೆಲ್ ಸ್ಥಾನ ಪಡೆದಿದ್ದಾರೆ. ಮ್ಯಾಕ್ಸ್‌ವೆಲ್ ಜೊತೆಗೆ ಆರ್‌ಸಿಬಿ ತಂಡದ ಆಲ್‌ರೌಂಡರ್ ಕ್ಯಾಮರೋನ್ ಗ್ರೀನ್ ಕೂಡ ಆಯ್ಕೆಯಾಗಿದ್ದಾರೆ. ಟಿ20 ವಿಶ್ವಕಪ್ 2024 ಕ್ಕಾಗಿ ಇಂಗ್ಲೆಂಡ್ ತಂಡವನ್ನು ಕೂಡ ಪ್ರಕಟಿಸಲಾಗಿದೆ. 15 ಸದಸ್ಯರ ಈ ತಂಡದಲ್ಲಿ ಸ್ಫೋಟಕ ದಾಂಡಿಗ ವಿಲ್ ಜಾಕ್ಸ್ ಹಾಗೂ ಎಡಗೈ ವೇಗಿ ರೀಸ್ ಟೋಪ್ಲಿ ಸ್ಥಾನ ಪಡೆದಿದ್ದಾರೆ. ಟಿ20 ವಿಶ್ವಕಪ್‌ಗೆ ಆಯ್ಕೆ ಮಾಡಲಾದ ನ್ಯೂಝಿಲೆಂಡ್ ತಂಡದಲ್ಲಿ ವೇಗದ ಬೌಲರ್ ಲಾಕಿ ಫರ್ಗುಸನ್ ಸ್ಥಾನ ಪಡೆದಿದ್ದಾರೆ. ವೆಸ್ಟ್ ಇಂಡೀಸ್ ಕೂಡ ಟಿ20 ವಿಶ್ವಕಪ್‌ಗಾಗಿ 15 ಸದಸ್ಯರ ಬಳಗವನ್ನು ಘೋಷಿಸಿದೆ. ಈ ತಂಡದಲ್ಲಿ ವೇಗದ ಬೌಲರ್ ಅಲ್ಝಾರಿ ಜೋಸೆಫ್ ಕಾಣಿಸಿಕೊಂಡಿದ್ದಾರೆ.

**ರಾಷ್ಟ್ರೀಯ ತಂಡಕ್ಕೆ ಆಯ್ಕೆಯಾಗದ ಆರ್‌ಸಿಬಿ ಆಟಗಾರರು:** (ಭಾರತ) ರಜತ್ ಪಾಟಿದಾರ್, ದಿನೇಶ್ ಕಾರ್ತಿಕ್, ಸ್ವಪ್ನಿಲ್ ಸಿಂಗ್, ಕರ್ಣ್ ಶರ್ಮಾ, ಯಶ್ ದಯಾಲ್, ಅನೂಜ್ ರಾವತ್, ಮಹಿಪಾಲ್ ಲೊಮ್ರೋರ್, ಸುಯಶ್ ಪ್ರಭುದೇಸಾಯಿ, ಮನೋಜ್ ಭಾಂಡಗೆ, ಸೌರವ್ ಚೌಹಾಣ್, ರಜನ್ ಕುಮಾರ್, ಹಿಮಾಂಶು ಶರ್ಮಾ, ಆಕಾಶ್ ದೀಪ್, ವಿಜಯ್ ಕುಮಾರ್ ವೈಶಾಕ್, ಮಯಾಂಕ್ ಡಾಗರ್. ಫಾಫ್ ಡು ಪ್ಲೆಸಿಸ್ (ಸೌತ್ ಆಫ್ರಿಕಾ), ಟಾಮ್ ಕರನ್ (ಇಂಗ್ಲೆಂಡ್).

## ಬ್ರಾವೊ ದಾಖಲೆ ಮುರಿದ ಪಿಯೂಷ್ ಚಾವ್ಲಾ

ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್ 2024) ಇತಿಹಾಸದಲ್ಲಿ ಅತೀ ಹೆಚ್ಚು ವಿಕೆಟ್ ಕಬಳಿಸಿದ ಬೌಲರ್‌ಗಳ ಪಟ್ಟಿಯಲ್ಲಿ ಇದೀಗ ಮೊದಲೆರಡು ಸ್ಥಾನಗಳಲ್ಲಿ ಭಾರತೀಯ ಸ್ಪಿನ್ನರ್‌ಗಳು ಕಾಣಿಸಿಕೊಂಡಿದ್ದಾರೆ. ಈ ಹಿಂದೆ ದ್ವಿತೀಯ ಸ್ಥಾನದಲ್ಲಿ ವೆಸ್ಟ್ ಇಂಡೀಸ್‌ನ ಮಾಜಿ ಆಲ್‌ರೌಂಡರ್ ಡೆವೊನ್ ಬ್ರಾವೊ ಇದ್ದರು. ಇದೀಗ ಬ್ರಾವೊ ಅವರನ್ನು ಹಿಂದಿಕ್ಕಿ ಪಿಯೂಷ್ ಚಾವ್ಲಾ ದ್ವಿತೀಯ ಸ್ಥಾನಕ್ಕೇರಿದ್ದಾರೆ.

ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆದ ಐಪಿಎಲ್‌ನ 51ನೇ ಪಂದ್ಯದ ಮೂಲಕ ಪಿಯೂಷ್ ಚಾವ್ಲಾ ವಿಶೇಷ ದಾಖಲೆ ಬರೆದಿದ್ದಾರೆ. ಕೆಕೆಆರ್ ವಿರುದ್ಧದ ಈ ಪಂದ್ಯದಲ್ಲಿ 3 ಓವರ್‌ಗಳನ್ನು ಎಸೆದಿದ್ದ ಚಾವ್ಲಾ ಕೇವಲ 15 ರನ್ ನೀಡಿ ಒಂದು ವಿಕೆಟ್ ಕಬಳಿಸುವಲ್ಲಿ ಯಶಸ್ವಿಯಾಗಿದ್ದರು. ಈ ಒಂದು ವಿಕೆಟ್‌ನೊಂದಿಗೆ ಐಪಿಎಲ್ ಇತಿಹಾಸದಲ್ಲಿ ಅತ್ಯಧಿಕ ವಿಕೆಟ್ ಕಬಳಿಸಿದ ಬೌಲರ್‌ಗಳ ಪಟ್ಟಿಯಲ್ಲಿ ಪಿಯೂಷ್ ಚಾವ್ಲಾ ದ್ವಿತೀಯ ಸ್ಥಾನಕ್ಕೇರಿದ್ದಾರೆ. ಅದು ಕೂಡ ಆಲ್ ಟೈಮ್ ಗ್ರೇಟ್ ಡ್ವೇನ್ ಬ್ರಾವೊ ಅವರನ್ನು ಹಿಂದಿಕ್ಕುವ ಮೂಲಕ ಎಂಬುದು ವಿಶೇಷ.



ಐಪಿಎಲ್‌ನಲ್ಲಿ 158 ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿರುವ ಡ್ವೇನ್ ಬ್ರಾವೊ ಒಟ್ಟು 3119 ಎಸೆತಗಳನ್ನು ಎಸೆದಿದ್ದಾರೆ. ಈ ವೇಳೆ 4360 ರನ್‌ಗಳನ್ನು ನೀಡುವ ಮೂಲಕ ಒಟ್ಟು 183 ವಿಕೆಟ್ ಕಬಳಿಸಿ ದಾಖಲೆ ಬರೆದಿದ್ದರು.

ಇದೀಗ ಈ ದಾಖಲೆಯನ್ನು ಮುರಿಯುವಲ್ಲಿ ಪಿಯೂಷ್ ಚಾವ್ಲಾ ಯಶಸ್ವಿಯಾಗಿದ್ದಾರೆ. 188 ಐಪಿಎಲ್ ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿರುವ ಚಾವ್ಲಾ 3784 ಎಸೆತಗಳಲ್ಲಿ 5018 ರನ್ ನೀಡಿ ಒಟ್ಟು 184 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಐಪಿಎಲ್ ಇತಿಹಾಸದಲ್ಲಿ ಅತೀ ಹೆಚ್ಚು ವಿಕೆಟ್ ಪಡೆದ 2ನೇ ಬೌಲರ್ ಎನಿಸಿಕೊಂಡಿದ್ದಾರೆ. ಇನ್ನು ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಯುಜ್ವೇಂದ್ರ ಚಹಲ್. 154 ಇನ್ನಿಂಗ್ಸ್‌ಗಳಲ್ಲಿ 3401 ಎಸೆತಗಳನ್ನು ಎಸೆದಿರುವ ಚಹಲ್ 4424 ರನ್ ನೀಡಿದ್ದಾರೆ. ಈ ವೇಳೆ 200 ವಿಕೆಟ್‌ಗಳನ್ನು ಕಬಳಿಸಿ ದಾಖಲೆ ಬರೆದಿದ್ದಾರೆ.



## ಜೊತೆಯಾಗಿ ಕಾಣಿಸಿಕೊಂಡ ರಜನಿಕಾಂತ್ ಅಮಿತಾಭ್

ಭಾರತೀಯ ಸಿನಿಮಾ ರಂಗದ ದಿಗ್ಗಜರುಗಳಾದ ರಜನಿ ಮತ್ತು ಅಮಿತಾಭ್ ಬಚ್ಚನ್ ಅವರ ಸಮಾಗಮಾ ಆಗಿದೆ. ಕೌನ್ ಬನೇಗಾ ಕರೋಡ್ಪತಿ ಶೂಟಿಂಗ್‌ನಲ್ಲಿ ಬ್ಯುಸಿಯಾಗಿದ್ದ ಅಮಿತಾಭ್ ಈಗ ವೆಟ್ಟೈಯನ್ ಚಿತ್ರದ ಶೂಟಿಂಗ್‌ನಲ್ಲಿ ಭಾಗಿಯಾಗಿದ್ದಾರೆ. ಈ ಫೋಟೋವನ್ನು ನಿರ್ಮಾಣ ಸಂಸ್ಥೆ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದೆ.

ರಜನಿಕಾಂತ್ ನಟನೆಯ 'ಲಾಲ್ ಸಲಾಂ' ಸಿನಿಮಾ ರಜನಿ ಅಭಿಮಾನಿಗಳಿಗೆ ಏನೆಲ್ಲ ಬೇಕೊ ಎಲ್ಲಾವನ್ನೂ ಕೊಟ್ಟಿದ್ದರು. ಆದರೂ, ಅಂದುಕೊಂಡಷ್ಟು ಚಿತ್ರಕ್ಕೆ ಸಿನಿಮಾಗೆ ಉತ್ತಮ ರೆಸ್ಪಾನ್ಸ್ ಸಿಗಲಿಲ್ಲ. ಮೊದಲ ದಿನ ಗಳಿಕೆ ನಾಲ್ಕುವರೆ ಕೋಟಿ ಎಂದು ಅಂದಾಜಿಸಲಾಗಿತ್ತು. 'ಲಾಲ್ ಸಲಾಂ' ಸೋಲಿನ ಬೆನ್ನಲ್ಲೇ ಹೊಸ ಸಿನಿಮಾ ತಲೈವ ಘೋಷಿಸಿದ್ದರು. ಅದೇ ವೆಟ್ಟೈಯನ್. 'ವೆಟ್ಟೈಯನ್' ಲಾಲ್ ಸಲಾಂ ನಿರ್ಮಾಣ ಮಾಡಿರುವ ಲೈಕಾ ಪ್ರೊಡಕ್ಷನ್ ಸಂಸ್ಥೆಯೇ ಬಂಡವಾಳ ಹೂಡುತ್ತಿದೆ. ಈ ಸಿನಿಮಾಗೆ ಶೇಕಡ 80ರಷ್ಟು ಶೂಟಿಂಗ್ ಮುಕ್ತಾಯ ಆಗಿದೆ. ಇನ್ನುಳಿದ ಕೆಲಸಗಳು ಭರದಿಂದ ಸಾಗುತ್ತಿವೆ ಎಂದು ರಜನಿಕಾಂತ್ ಮಾಹಿತಿ ನೀಡಿದ್ದರು.

'ವೆಟ್ಟೈಯನ್' ತಲೈವ ಅವರು ನಟಿಸುತ್ತಿರುವ 170ನೇ ಸಿನಿಮಾ. ಟೈಟಲ್ ಟೀಸರ್ ನೋಡಿದ ಎಲ್ಲಾರೂ ಈಗಾಗಲೇ ಮೆಚ್ಚುಗೆ ಸೂಚಿಸಿದ್ದಾರೆ. ಈ ಸಿನಿಮಾಗೆ 'ಜೈ ಭೀಮ್' ಖ್ಯಾತಿಯ ಟಿ.ಜೆ. ಜ್ಞಾನವೇಲ್ ಅವರು ಆಕ್ಷನ್ ಕಟ್ ಹೇಳುತ್ತಿದ್ದಾರೆ.



## ಜ್ಯೂ.ಎನ್‌ಟಿಆರ್ ಹುಟ್ಟುಹಬ್ಬದಂದು ಗುಡ್ ನ್ಯೂಸ್

ತೆಲುಗಿನ ಸ್ಟಾರ್ ನಟ ಜ್ಯೂ. ಎನ್‌ಟಿಆರ್ ಸದ್ಯ ಬಾಲಿವುಡ್‌ಗೆ ಪಾದಾರ್ಪಣೆ ಮಾಡಿದ್ದಾರೆ. 'ವಾರ್ 2' ಸಿನಿಮಾದ ಶೂಟಿಂಗ್‌ನಲ್ಲಿ ಅವರು ಬ್ಯುಸಿಯಾಗಿದ್ದಾರೆ. ಇದರ ನಡುವೆ ತಾರಕ್ ಅಭಿಮಾನಿಗಳಿಗೆ ಸಿಹಿಸುದ್ದಿ ಸಿಕ್ಕಿದೆ. 'ವಾರ್ 2'ಗಾಗಿ ಹೃತಿಕ್ ರೋಷನ್ ಜೊತೆ ಕೈಜೋಡಿಸಿರುವ ಜ್ಯೂ.ಎನ್‌ಟಿಆರ್ ಮೇ 20ರಂದು ತಮ್ಮ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳಿದ್ದಾರೆ. ಈ ದಿನ 'ವಾರ್ 2' ಚಿತ್ರದ ಜ್ಯೂ.ಎನ್‌ಟಿಆರ್ ಪಾತ್ರದ ಲುಕ್ ಕೂಡ ರಿವೀಲ್ ಆಗಲಿದೆ. ಚಿತ್ರದ ಮೊದಲ ಪೋಸ್ಟರ್ ಹೊರಬೀಳಲಿದೆ. ಹೃತಿಕ್ ರೋಷನ್ ಮುಂದೆ ಜ್ಯೂ.ಎನ್‌ಟಿಆರ್ ಅಬ್ಬರಿಸಿದ್ದಾರೆ. ಇಬ್ಬರ ಕಾಂಬಿನೇಷನ್ ನೋಡೋಕೆ ಅಭಿಮಾನಿಗಳು ಕಾಯ್ತಿದ್ದಾರೆ. ಚಿತ್ರದಲ್ಲಿ ಜ್ಯೂ.ಎನ್‌ಟಿಆರ್ ವಿಲನ್ ಆಗಿ ನಟಿಸಿದ್ದಾರೆ ಎಂಬ ಸುದ್ದಿಯೂ ಹಬ್ಬಿದೆ. ಸದ್ಯದಲ್ಲೇ ಇದರ ಬಗ್ಗೆ ಮಾಹಿತಿ ಸಿಗಲಿದೆ. 'ಆರ್‌ಆರ್‌ಆರ್' ಚಿತ್ರದ ಸಕ್ಸಸ್ ನಂತರ ಜ್ಯೂ.ಎನ್‌ಟಿಆರ್‌ಗೆ ಬೇಡಿಕೆ ಹೆಚ್ಚಾಗಿದೆ. ಕೊರಟಲ ಶಿವ ಜೊತೆ 'ದೇವರ' ಸಿನಿಮಾ ಮಾಡುತ್ತಿದ್ದಾರೆ. ಈ ಚಿತ್ರ 2 ಭಾಗಗಳಲ್ಲಿ ಬರಲಿದೆ. ಈ ಚಿತ್ರಕ್ಕೆ ಜಾನ್ವಿ ಕಪೂರ್ ನಾಯಕಿಯಾಗಿದ್ದಾರೆ. ಈ ವರ್ಷ ಅಕ್ಟೋಬರ್ 10ಕ್ಕೆ ಸಿನಿಮಾ ರಿಲೀಸ್ ಆಗಲಿದೆ.



ವಿಲನ್ ಆಗಿ ಜ್ಯೂ.ಎನ್‌ಟಿಆರ್

## ಕರೀನಾ ಜಾಗಕ್ಕೆ ಬಂದ ನಯನಾ

ಟಾಕ್ಸಿಕ್ ಸಿನಿಮಾಗೆ ಮತ್ತೋರ್ವ ಸ್ಟಾರ್ ನಟಿ ಎಂಟ್ರಿ ಆಗಲಿದೆ ಎನ್ನುವ ಸುದ್ದಿ ಗಾಂಧಿನಗರದಲ್ಲಿ ಹರಿದಾಡುತ್ತಿದೆ. ಲೇಡಿ ಸೂಪರ್ ಸ್ಟಾರ್ ಎಂದೇ ಖ್ಯಾತರಾಗಿರುವ ನಯನತಾರಾ ಅವರು ಎರಡನೇ ಬಾರಿ ಕನ್ನಡ ಸಿನಿಮಾ ರಂಗಕ್ಕೆ ಬರಲಿದ್ದಾರೆ. ಈ ಹಿಂದೆ ಅವರು ಉಪೇಂದ್ರ ನಟನೆಯ ಚಿತ್ರದಲ್ಲಿ ನಟಿಸಿದ್ದರು. ಇದೀಗ ಟಾಕ್ಸಿಕ್ ಚಿತ್ರದಲ್ಲಿ ಪ್ರಮುಖ ಪಾತ್ರ ಮಾಡಲಿದ್ದಾರೆ ಎನ್ನಲಾಗುತ್ತಿದೆ.

ರಾಕಿಂಗ್ ಸ್ಟಾರ್ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾದಲ್ಲಿ ಬಾಲಿವುಡ್ ನಟಿ ಕರೀನಾ ಕಪೂರ್ ನಟಿಸಲಿದ್ದಾರೆ ಎಂದು ಸುದ್ದಿ ಆಗಿತ್ತು. ಯಶ್ ಈ ಸಿನಿಮಾದ ನಾಯಕ, ಗೀತಾ ಮೋಹನ್ ದಾಸ್ ನಿರ್ದೇಶಕಿ, ಯಶ್ ಮತ್ತು ಕೆವಿಎನ್ ಪ್ರೊಡಕ್ಷನ್ ನಿರ್ಮಾಪಕರು ಎನ್ನುವ ವಿಷಯದ ಹೊರತಾಗಿ ಮತ್ತೊಂದು ಮಾಹಿತಿಯನ್ನೂ ಚಿತ್ರತಂಡ ಹಂಚಿಕೊಂಡಿರಲಿಲ್ಲ. ಆದರೂ, ಹಲವು ವಿಷಯಗಳು ಹರಿದಾಡುತ್ತಲೇ ಇದ್ದವು. ಬಾಲಿವುಡ್ ನ ಬಹುಬೇಡಿಕೆ ನಟಿ ಈ ಸಿನಿಮಾದ ನಾಯಕಿಯಾಗಲಿದ್ದಾರೆ ಎನ್ನುವುದರ ಜೊತೆಗೆ ಕರೀನಾ ಕಪೂರ್ ಪ್ರಮುಖ ಪಾತ್ರ ಮಾಡಲಿದ್ದಾರೆ ಎಂದು ಬಿಟೌನ್ ಮಾತನಾಡಿಕೊಂಡಿತ್ತು. ಇದ್ಯಾವುದೋ ಅಧಿಕೃತ ಮಾಹಿತಿ ಆಗಿರಲಿಲ್ಲ. ಆದರೂ, ಸುದ್ದಿಯಂತೂ ಭರ್ಜರಿ ಸೇಲ್ ಆಗಿತ್ತು. ಈಗ ಕರೀನಾ ಸಿನಿಮಾದಲ್ಲಿ ಇರಲ್ಲ ಎನ್ನುವ ಮತ್ತೊಂದು ಸುದ್ದಿ ಇದೆ.

ಯಶ್ ಅವರ ಸಹೋದರಿಯಾಗಿ ಈ ಸಿನಿಮಾದಲ್ಲಿ ಕರೀನಾ ನಟಿಸಬೇಕಿತ್ತು. ಆದರೆ, ಡೇಟ್ ಹೊಂದಾಣಿಕೆಯ ಕಾರಣದಿಂದಾಗಿ ಅವರು ಚಿತ್ರದಿಂದ ಹಿಂದೆ ಸರಿದಿದ್ದಾರೆ ಎಂದು ಹೇಳಲಾಗುತ್ತಿದೆ. ಒಡಹುಟ್ಟಿದವರ ಕಥೆಯನ್ನು ಇದು ಒಳಗೊಂಡಿದ್ದರಿಂದ ಯಶ್ ಅವರ ಸರಿಸಮಾನಾಗಿ ಡೇಟ್ ಬೇಕಿತ್ತಂತೆ. ಆದರೆ, ಅಷ್ಟೊಂದು ಸಮಯ ಕರೀನಾ ಬಳಿ ಇಲ್ಲವಂತೆ. ಹಾಗಂತ ಈ ವಿಷಯವಾದರೂ ನಿಜವಾ? ಗೊತ್ತಿಲ್ಲ. ಹಾಗಂತ ಬಾಲಿವುಡ್ ಚಿತ್ರರಂಗ ಹೇಳುತ್ತಿದೆ.

ಯಶ್ ನಟನೆಯ 'ಟಾಕ್ಸಿಕ್'

## ಬದುಕೇ ಬೇಡ ಎಂದು ಮೌನಿ ಟಾಕ್

ಬಾಲಿವುಡ್ ಬೆಡಗಿ ಮೌನಿ ರಾಯ್ ವೈವಾಹಿಕ ಜೀವನ ಮತ್ತು ಸಿನಿಮಾ ಚಿತ್ರೀಕರಣ ಎಂದು ಎರಡನ್ನು ನಿಭಾಯಿಸುತ್ತಿದ್ದಾರೆ. ಕೆಲವು ವರ್ಷಗಳ ಹಿಂದೆ ಅನಾರೋಗ್ಯ ಸಮಸ್ಯೆಯಿಂದ ಬಳಲಿದ್ದರ ಬಗ್ಗೆ ನಟಿ ಸಂದರ್ಶನವೊಂದರಲ್ಲಿ ಬಾಯ್ಬಿಟ್ಟಿದ್ದಾರೆ.

'ನಾಗಿನ್' ಸೀರಿಯಲ್‌ಗೆ ಮಾಡುವ ಮುನ್ನ 'ಝಲಕ್ ದಿಖ್ಲಾ ಜಾ' ಡ್ಯಾನ್ಸ್ ಶೋನಲ್ಲಿ ಮೌನಿ ಭಾಗವಹಿಸಿದ್ದರು. ಇದೇ ಕಾರ್ಯಕ್ರಮದಲ್ಲಿ ಬೆನ್ನು ಮೂಳೆಯ ಮೇಲೆ ಸಂಪೂರ್ಣ ಎಲ್4-ಎಲ್5 ಸ್ಲಿಪ್ ಡಿಜೆನರೇಶನ್ ಮತ್ತು ಸ್ಕೋಲಿಯೋಸಿಸ್ ಉಂಟಾಗಿತ್ತು. ಇದರ ಪರಿಣಾಮ, ನೇರವಾಗಿ ನಿಲ್ಲಲು ಮೌನಿಗೆ ಸಾಧ್ಯವಾಗುತ್ತಿರಲಿಲ್ಲ. ಈ ಕಾರಣಕ್ಕೆ ದಿನವೊಂದಕ್ಕೆ 30 ಮಾತ್ರೆ ತೆಗೆದುಕೊಳ್ಳಬೇಕಾದ ಸಂದರ್ಭ ಎದುರಾಗಿತ್ತು ಎಂದು ಮೌನಿ ಮಾತನಾಡಿದ್ದಾರೆ. ಚುಚ್ಚುಮದ್ದು ಬುದಕಿನ ಪ್ರಮುಖ ಭಾಗವೂ ಆಯಿತು. ಇದೆಲ್ಲದರಿಂದ ನೊಂದು-ಬೆಂದು ಹೋಗಿದ್ದ ಮೌನಿ ರಾಯ್ ಅವರ ತೂಕ ಹೆಚ್ಚಾಗಿ ಬಿಟ್ಟಿತ್ತು. ಈ ದೈಹಿಕ ಸಮಸ್ಯೆ ಮೌನಿ ಅವರನ್ನ ಮಾನಸಿಕವಾಗಿ ಸಂಪೂರ್ಣ ಕುಗ್ಗಿಸಿತ್ತು. ಇದರಿಂದ 3 ತಿಂಗಳು ಹಾಸಿಗೆ ಹಿಡಿದಿದ್ದರು ಎಂದು ಮೌನಿ ಹೇಳಿದ್ದಾರೆ. ಕೊಂಚ ಗುಣಮುಖರಾದ ಮೇಲೆ 'ನಾಗಿನ್' ಸೀರಿಯಲ್ ಒಪ್ಪಿ ಮೌನಿ ನಟಿಸಿದ್ದರು. ಈ ಸೀರಿಯಲ್ ಭಾರೀ ಜನಪ್ರಿಯತೆ ಪಡೆಯಿತು. 'ಗೋಲ್ಡ್' ಸಿನಿಮಾ ಸೇರಿದಂತೆ ಹಲವು ಪ್ರಾಜೆಕ್ಟ್‌ಗಳಲ್ಲಿ ಮೌನಿ ರಾಯ್ ನಟಿಸಿದ್ದರು.



## ಮತಾಂತರಗೊಂಡಿದ್ದೇನೆ ಎನ್ನುವುದು ಸುಳ್ಳು

ಬಾಲಿವುಡ್‌ನ ಜನಪ್ರಿಯ ನಟಿ, ಹೆಸರಾಂತ ನಟ ಗೋವಿಂದ್ ಅವರ ಅಕ್ಕನ ಮಗಳು ರಾಗಿಣಿ ಖನ್ನಾ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತಗೊಂಡಿದ್ದಾರೆ ಎಂದು ವರದಿಯಾಗಿತ್ತು. ಮತಾಂತರ ಗೊಂಡ ಒಂದೇ ದಿನಕ್ಕೆ ಅವರು ವಾಪಸ್ಸು ಹಿಂದೂ ಧರ್ಮಕ್ಕೆ ಬಂದಿದ್ದಾರೆ ಎಂದು ಹೇಳಲಾಗಿತ್ತು. ಈ ಕುರಿತಂತೆ ಅವರು ಮೌನ ಮುರಿದಿದ್ದಾರೆ.

ಅಭಿಮಾನಿಯೊಬ್ಬ ಒಂದು ಪೋಸ್ಟ್ ಮಾಡಿದ್ದ, ಅದನ್ನು ನಾನು ರೀಪೋಸ್ಟ್ ಮಾಡಿ ಸಂಕಟಕ್ಕೆ ಸಿಲುಕಿಕೊಂಡೆ. ನಾನು ಯಾವುದೇ ಕಾರಣಕ್ಕೂ ಮತಾಂತರಗೊಂಡಿಲ್ಲ, ಅದೆಲ್ಲವೂ ಸುಳ್ಳು. ಅಭಿಮಾನಿಯ ಎಡವಟ್ಟಿನಿಂದಾಗಿ ನಾನು ನೋವು ಅನುಭವಿಸಬೇಕಾಯಿತು ಎಂದು ಅವರು ಹೇಳಿಕೊಂಡಿದ್ದಾರೆ.

ರಾಗಿಣಿ ಒಂದು ದಿನದ ಹಿಂದೆಯಷ್ಟೇ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರ ಆಗಿ, ಎಲ್ಲಾರಿಗೂ ಶಾಕ್ ನೀಡಿದ್ದಾರೆ ಎಂದು ವರದಿಯಾಗಿತ್ತು. ತಾನು ಮತಾಂತರವಾಗಿ ತಪ್ಪು ಮಾಡಿದೆ, ನನ್ನ ತಪ್ಪಿನ ಅರಿವಾಗಿ ಮತ್ತೆ ಹಿಂದೂ ಧರ್ಮಕ್ಕೆ ವಾಪಸ್ಸಾಗಿದ್ದೇನೆ ಎಂದು ಅವರು ಹೇಳಿದ್ದಾರೆ ಎಂದು ಹೇಳಲಾಗಿತ್ತು.

ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರ ಆಗಿದ್ದಕ್ಕೆ ಅವರು ಕ್ಷಮೆ ಕೇಳಿದ್ದಾರೆ. ಸನಾತನ ಧರ್ಮವೇ ಶ್ರೇಷ್ಠವೆಂದು ಅವರು ಹೇಳಿಕೊಂಡಿದ್ದಾರೆ. ಬೇರೆ ಧರ್ಮಕ್ಕೆ ಮತಾಂತರವಾದ ನಂತರ, ಇಂದಿನಿಂದ ಈ ಧರ್ಮವನ್ನು ಪಾಲಿಸುತ್ತೇನೆ ಎಂದು ಅವರು ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದರು. ಅದಕ್ಕೆ ಸಾಕಷ್ಟು ನೆಗೆಟಿವ್ ಕಾಮೆಂಟ್ಸ್ ಬಂದಿದ್ದವು. ಮತಾಂತರಗೊಳ್ಳುವ ಕುರಿತಂತೆ ಹಾಕಿದ್ದ ಪೋಸ್ಟ್ ಅನ್ನು ಅವರು ಡಿಲಿಟ್ ಮಾಡಿದ್ದು, ಹಿಂದೂ ಧರ್ಮದ ಬಗ್ಗೆ ಮಾಡಲಾದ ಭಾಷಣವನ್ನು ಅವರು ಪೋಸ್ಟ್ ಮಾಡಿ, ಅದಕ್ಕೆ ತಮ್ಮ ತಮ್ಮ ಫೋಟೋ ಅಂಟಿಸಿದ್ದರು. ಈಗ ಎಲ್ಲಾ ಗೊಂದಲಕ್ಕೂ ಅವರು ತೆರೆ ಎಳೆದಿದ್ದಾರೆ.



ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರ

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966